ಸಂಪುಟ: ೦೭/ ಸಂಚಿಕೆ: ೨೦೧/ ಮಂಗಳವಾರ ದಿನಾಂಕ : ೩೦-೦೯-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 201/TUESDAY Date : 30-09-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00



ನವರಾತ್ರಿ ಉತ್ಸವದ ಎಂಟನೆಯ ದಿನವಾದ ಸೋಮವಾರ ಧಾರವಾಡ ಶಾಂತಿ ನಿಕೇತನ ನಗರದ ಶ್ರೀ ಕರಿಯಮ್ಮ ದೇವಿಗೆ ಶ್ರೀ ಸರಸ್ವತಿ ದೇವಿ ಅಲಂಕಾರ.

## ೯.೯೩ ಕೋಟಿ ರೂ. ಮೌಲ್ಯದ ಮಾದಕ ವಸ್ತು ಜಪ್ತಿ
# ವಿದೇಶಿಗರ ಸೇರಿ 7ಜನ ವಶಕ್ಕೆ

**ಬೆಂಗಳೂರು:** ಇಬ್ಬರು ವಿದೇಶಿ ಪ್ರಜೆಗಳ ಸಹಿತ 7 ಜನ ಆರೋಪಿಗಳನ್ನು ಬಂಧಿಸಿರುವ ಸಿಸಿಬಿ ಪೊಲೀಸರು ಬರೋಬ್ಬರಿ 9.93 ಕೋಟಿ ರೂ. ಮೌಲ್ಯದ ವಿವಿಧ ಮಾದಕ ಪದಾರ್ಥಗಳನ್ನು ಜಪ್ತಿ ಮಾಡಿರುವುದಾಗಿ ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ತಿಳಿಸಿದ್ದಾರೆ. ಬಂಧಿತ ಆರೋಪಿಗಳಿಂದ ಒಟ್ಟು 3 ಕೆ.ಜಿ. 858 ಗ್ರಾಂ ಎಂಡಿಎಂಎ ಕ್ರಿಸ್ಟೆಲ್, 41 ಗ್ರಾಂ ಎಕ್ಸ್ ಟಸಿ ಪಿಲ್ಸ್, 1 ಕೆ.ಜಿ. 82 ಗ್ರಾಂ ಹೈಡ್ರೋಗಾಂಜಾ, 6 ಕೆ.ಜಿ. ಗಾಂಜಾ ಹಾಗೂ ಕೃತ್ಯಕ್ಕೆ ಬಳಸಲಾಗಿದ್ದ 1 ಕಾರು ಮತ್ತು 1 ದ್ವಿಚಕ್ರ ವಾಹನವನ್ನು ವಶಕ್ಕೆ ಪಡೆಯಲಾಗಿದೆ ಎಂದು ಸೀಮಂತ್ ಕುಮಾರ್ ಸಿಂಗ್ ವಿವರಿದ್ದಾರೆ.

ಮಹದೇವಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮಾದಕ ಪದಾರ್ಥಗಳನ್ನು ಮಾರಾಟ ಮಾಡುತ್ತಿದ್ದ ಸಾಫ್ಟ್ ವೇರ್ ಉದ್ಯೋಗಿ ಕೆವಿನ್ ರೋಜರ್ ಎಂಬುವನನ್ನು ಸಿಸಿಬಿ ಪೊಲೀಸರು ಬಂಧಿಸಿದ್ದಾರೆ. ಮೋಜು-ಮಸ್ತಿಯ ಜೀವನ ನಡೆಸಲು ಹಾಗೂ ಅಧಿಕ ಹಣ ಸಂಪಾದನೆ ಮಾಡುವ ಉದ್ದೇಶದಿಂದ ಕೇರಳದಿಂದ ಕಡಿಮೆ ಬೆಲೆಗೆ ಹೈಡ್ರೋಗಾಂಜಾ ತಂದು ಬೆಂಗಳೂರಿನಲ್ಲಿ ಪರಿಚಯದ ಗಿರಾಕಿಗಳಿಗೆ ಕೆವಿನ್ ರೋಜರ್ ಮಾರಾಟ ಮಾಡುತ್ತಿದ್ದ. ಆತನಿಂದ 500 ಗ್ರಾಂ ಹೈಡ್ರೋಗಾಂಜಾ ಮತ್ತು ಕೃತ್ಯಕ್ಕೆ ಬಳಸಲಾಗುತ್ತಿದ್ದ ಒಂದು ಕಾರು, ಒಂದು ಬೈಕ್ ಹಾಗೂ ಒಂದು ಮೊಬೈಲ್ ಫೋನ್ ವಶಕ್ಕೆ ಪಡೆಯಲಾಗಿದೆ ಎಂದು ಸೀಮಂತ್ ಕುಮಾರ್ ಸಿಂಗ್ ತಿಳಿಸಿದ್ದಾರೆ. ಅಲ್ಲದೆ, ಮಾದಕ ಪದಾರ್ಥಗಳ ಮಾರಾಟದಲ್ಲಿ ತೊಡಗಿದ್ದ ಡೆಂಟಲ್ ಕಾಲೇಜು ವಿದ್ಯಾರ್ಥಿಯೊಬ್ಬನನ್ನು ಆಡುಗೋಡಿ ಪೊಲೀಸರು ಬಂಧಿಸಿದ್ದಾರೆ. ರಂಜಿತ್ ಆ?ಯಂಟೋನಿ ಬಂಧಿತ ಆರೋಪಿ. ಈತನೂ ಸಹ ಮೋಜಿನ ಜೀವನ ನಡೆಸಲು ಹಾಗೂ ಅಧಿಕ ಹಣ ಸಂಪಾದನೆ ಮಾಡುವ ಉದ್ದೇಶದಿಂದ ಕಡಿಮೆ ಬೆಲೆಗೆ ಹೈಡ್ರೋಗಾಂಜಾ ತಂದು ಪರಿಚಯದ ಗಿರಾಕಿಗಳಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದ. ಆರೋಪಿಯಿಂದ 300 ಗ್ರಾಂ ಹೈಡ್ರೋಗಾಂಜಾ ವಶಪಡಿಸಿಕೊಳ್ಳಲಾಗಿದೆ ಎಂದು ಸೀಮಂತ್ ಕುಮಾರ್ ಸಿಂಗ್ ತಿಳಿಸಿದ್ದಾರೆ.

## ಸದ್ದಿಲ್ಲದೇ ಸಾಂಕ್ರಾಮಿಕ ಸೋಂಕುಗಳ ಏರಿಕೆ

**ಬೆಂಗಳೂರು:** ವಾತವರಣದಲ್ಲಿ ಏರುಪೇರು ಆಗುತ್ತಿದ್ದಂತೆ ರಾಜ್ಯದಲ್ಲಿ ಸದ್ದಿಲ್ಲದೇ ಸಾಂಕ್ರಾಮಿಕ ಸೋಂಕುಗಳು ಏರಿಕೆಯಾಗ್ತಿವೆ. ಆದರಲ್ಲೂ ಮಾರಣಾಂತಿಕ ಡೆಂಘೀ ಪ್ರಕರಣಗಳು ಭಾರಿ ಪ್ರಮಾಣದಲ್ಲಿ ಏರಿಕೆಯಾಗುತ್ತಿರುವುದು ಆತಂಕಕ್ಕೆ ಕಾರಣವಾಗಿದೆ.ರಾಜ್ಯದಲ್ಲಿ ಇದುವರೆಗೂ ಡೆಂಘೀ ಸೋಂಕಿತರ ಸಂಖ್ಯೆ ಐದು ಸಾವಿರದ ಗಡಿ ದಾಟಿರುವುದು ವಿಶೇಷವಾಗಿದೆ. ಇಡೀ ರಾಜ್ಯದಲ್ಲಿ ಡೆಂಘೀ ಪ್ರಕರಣಗಳು ಏರಿಕೆಯಾಗುತ್ತಿರುವುದರ ಜೊತೆಗೆ ಬೆಂಗಳೂರಿನಲ್ಲೂ ಸೋಂಕು ಉಲ್ಬಣಗೊಂಡಿರುವುದು ಕಂಡು ಬಂದಿದೆ. ಕಳೆದ ಒಂಬತ್ತು ತಿಂಗಳಿನಲ್ಲಿ ಇಡೀ ರಾಜ್ಯದಲ್ಲಿ 5093 ಕ್ಕೂ ಹೆಚ್ಚು ಡೆಂಘೀ ಪ್ರಕರಣಗಳು ಕಂಡು ಬಂದಿದ್ದರೆ, ರಾಜಧಾನಿ ಬೆಂಗಳೂರು ಒಂದರಲ್ಲೇ 2478 ಪ್ರಕರಣಗಳು ವರದಿಯಾಗಿರುವುದು ವಿಶೇಷವಾಗಿದೆ.

ಬೆಂಗಳೂರು ಹೊರತುಪಡಿಸಿ ರಾಜ್ಯಾದಾದ್ಯಂತ 2615 ಪ್ರಕರಣಗಳು ದೃಢಪಟ್ಟಿದ್ದು, ಈ ಸೋಂಕಿಗೆ ಈಡೀಸ್ ಈಜಿಪ್ಟೈ ಎಂಬ ಸೊಳ್ಳೆ ಕಡಿತವೇ ಕಾರಣವಾಗಿದೆ.ನಿಂತ ನೀರಲ್ಲಿ ಬೆಳೆಯುವ ಈ ಡೇಂಜರಸ್ ಸೊಳ್ಳೆ ಕಚ್ಚುವುದರಿಂದ ಡೆಂಘೀ ಗುಣಲಕ್ಷಣಗಳು ಕಂಡು ಬರುತ್ತಿವೆ.

# ಸ್ವಾಧೀನ ಪ್ರಮಾಣಪತ್ರ ಇಲ್ಲದ ಕಟ್ಟಡಗಳಿಗೆ
## ವಿದ್ಯುತ್, ನೀರಿನ ಸಂಪರ್ಕ ಕಲ್ಪಿಸಲು ಅ.೮ರಂದು ಸಭೆ



**ಬೆಂಗಳೂರು:** ಆರಂಭಿಕ ಪ್ರಮಾಣಪತ್ರ(ಸಿಸಿ) ಮತ್ತು ಸ್ವಾಧೀನ ಪ್ರಮಾಣಪತ್ರ(ಒಸಿ) ಇಲ್ಲದೆ ನಿರ್ಮಿಸಿರುವ ಕಟ್ಟಡಗಳಿಗೆ ವಿದ್ಯುತ್, ನೀರಿನ ಸಂಪರ್ಕ ಕಲ್ಪಿಸಲು ಇರುವ ಕಾನೂನು ತೊಡಕುಗಳ ಬಗ್ಗೆ ಅ.8ರಂದು ಮತ್ತೊಂದು ಸುತ್ತಿನ ಸಭೆ ನಡೆಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಸೋಮವಾರ ಇಲ್ಲಿನ ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣಾದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಹಾಗೂ ರಾಜ್ಯದ ಇತರೆ ಕಡೆಗಳಲ್ಲಿ ಸಿಸಿ ಮತ್ತು ಒಸಿ ಇಲ್ಲದೆ ಕಟ್ಟಡಗಳು ನಿರ್ಮಾಣಗೊಂಡಿದ್ದು, ಇಂತಹ ಕಟ್ಟಡಗಳನ್ನು ಸುಪ್ರಿಂ ಕೋರ್ಟ್ ಆದೇಶದಂತೆ ನಿರ್ನಾಮ ಮಾಡಬೇಕಾಗುತ್ತದೆ. ಆದರೆ ನಿರ್ಮಾಣಗೊಂಡಿರುವ ಕಟ್ಟಡಗಳನ್ನು ನೆಲಸಮಗೊಳಿಸಲು ಸಾಧ್ಯವಿಲ್ಲ. ಸರಕಾರದ ನಿರ್ಧಾರದಿಂದ ಜನರಿಗೆ ಅನುಕೂಲವಾಗಬೇಕು ಎಂದರು.

ಸುಪ್ರೀಂಕೋರ್ಟ್ ಆದೇಶ ಅನುಷ್ಠಾನಗೊಳ್ಳುವ ಮುಂಚೆ ಸಲ್ಲಿಕೆಯಾಗಿರುವ ಮಾರ್ಚ್ 2025ರವರೆಗಿನ ಅರ್ಜಿಗಳನ್ನು ಪರಿಗಣಿಸಿ ಒಸಿ ಮತ್ತು ಸಿಸಿಯಿಂದ ವಿನಾಯ್ತಿಗೊಳಿಸಿ ವಿದ್ಯುತ್ ಮತ್ತು ನೀರಿನ ಸಂಪರ್ಕ ನೀಡುವ ಬಗ್ಗೆ ಕಾನೂನಿನ ಸಾಧ್ಯತೆಗಳ ಬಗ್ಗೆ ಕೂಲಂಕುಷವಾಗಿ ಚರ್ಚಿಸಲು ಅ.8ರಂದು ಸಭೆ ನಡೆಸಬೇಕು. ಈ ಸಭೆಯಲ್ಲಿ ಸರಕಾರದ ಮುಖ್ಯಕಾರ್ಯದರ್ಶಿಗಳು, ಸಂಬಂಧಪಟ್ಟ ಇಲಾಖಾ ಸಚಿವರು, ಸರಕಾರದ ಅಡ್ವೋಕೇಟ್ ಜನರಲ್, ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಹಾಜರಾಗಿದ್ದು, ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದರು. ಸುಪ್ರೀಂಕೋರ್ಟ್‌ನ ಆದೇಶ ಭಾರತದ ಎಲ್ಲ ರಾಜ್ಯಗಳಿಗೂ ಅನ್ವಯವಾಗುತ್ತಿದ್ದೂ, ಎಲ್ಲ ರಾಜ್ಯಗಳೂ ಆದೇಶವನ್ನು ಅನುಷ್ಠಾನಗೊಳಿಸುತ್ತಿವೆಯೇ ಎಂದು ಪರಿಶೀಲಿಸಬೇಕು. ನಿಯಮ ಉಲ್ಲಂಘಿಸಿ ನಿರ್ಮಾಣಗೊಂಡಿರುವ ಕಟ್ಟಡಗಳಿಗೆ ಒಂದು ಬಾರಿಗೆ ಅನ್ವಯವಾಗುವಂತೆ ಅನುಮತಿ ನೀಡುವ ಸಾಧ್ಯತೆ ಇದೆಯೇ ಎಂದು ಪರಿಶೀಲಿಸಬೇಕು ಎಂದು ಸಿದ್ದರಾಮಯ್ಯ ತಿಳಿಸಿದ್ದಾರೆ.

ಸಭೆಯಲ್ಲಿ ಇಂಧನ ಸಚಿವ ಕೆ.ಜೆ.ಜಾರ್ಜ್, ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್, ಪೌರಾಡಳಿತ ಸಚಿವ ರಹೀಂ ಖಾನ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್, ಸರಕಾರದ ಮುಖ್ಯಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಸೇರಿದಂತೆ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ನದಿ ತೀರದಲ್ಲಿ ಪ್ರವಾಹ
## ತುರ್ತು ಪರಿಹಾರಕ್ಕೆ ಮುಖ್ಯಮಂತ್ರಿ ಸೂಚನೆ



**ಬೆಂಗಳೂರು:** ಕಲಬುರಗಿ, ಬೀದರ್, ಯಾದಗಿರಿ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಕೃಷ್ಣಾ ಮತ್ತು ಭೀಮಾ ನದಿಗಳ ತೀರದಲ್ಲಿ ಪ್ರವಾಹ ಪರಿಸ್ಥಿತಿ ಉಂಟಾಗಿದ್ದು, ಕೂಡಲೇ ರಕ್ಷಣಾ ಮತ್ತು ಪರಿಹಾರ ಕಾರ್ಯ ಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಭಾನುವಾರ ಉನ್ನತ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಕಲಬುರಗಿ ಜಿಲ್ಲೆಯಲ್ಲಿ ಸುರಿದ ಭಾರಿ ಮಳೆಯಿಂದಾಗಿ ಮತ್ತು ಮಹಾರಾಷ್ಟ್ರದ ಉಜನಿ ಮತ್ತು ನೀರಾ ಜಲಾಶಯಗಳಿಂದ ಹೆಚ್ಚಿನ ಪ್ರಮಾಣದ ನೀರನ್ನು ಬಿಡುಗಡೆ ಮಾಡುತ್ತಿರುವುದರಿಂದ ಬೆಣ್ಣೆಥೋರಾ ಸೇರಿದಂತೆ ಹಲವಾರು ತಗ್ಗು ಪ್ರದೇಶದ ಹಳ್ಳಿಗಳಲ್ಲಿ ನೀರಿನ ಮಟ್ಟ ಏರಿಕೆಯಾಗುವ ಅಪಾಯಕ್ಕೆ ಸಿಲುಕಿವೆ.

ನೆರೆ ಪೀಡಿತ ಪ್ರದೇಶಗಳಲ್ಲಿ ಕಟ್ಟುನಿಟ್ಟಿನ ನಿಗಾ ವಹಿಸಲು ಮತ್ತು ರಕ್ಷಣಾ ಹಾಗೂ ಪರಿಹಾರ ಕಾರ್ಯದ ಮೇಲುಸ್ತುವಾರಿ ವಹಿಸುವಂತೆ ಕಂದಾಯ ಸಚಿವ ಕೃಷ್ಣ ಭೈರೇಗೌಡ, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಮತ್ತು ಕಲಬುರಗಿ ಜಿಲ್ಲಾಧಿಕಾರಿಗೆ ಮುಖ್ಯಮಂತ್ರಿ ನಿರ್ದೇಶನ ನೀಡಿದ್ದಾರೆ.

ಪ್ರತಿಕ್ರಿಯೆ ನೇರ ಮತ್ತು ವೈಯಕ್ತಿಕವಾಗಿರಬೇಕು ಎಂದು ಒತ್ತಿ ಹೇಳಿದ ಅವರು, ಉತ್ತರ ಕರ್ನಾಟಕದ ನಾಲ್ಕು ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು (ಸಿಇಒ) ಪ್ರವಾಹ ಪೀಡಿತ ಪ್ರದೇಶಗಳಿಗೆ ಖುದ್ದಾಗಿ ಭೇಟಿ ನೀಡಿ, ತುರ್ತು ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಸೂಚಿಸಿದ್ದಾರೆ.


ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ತಕ್ಷಣ ಜಿಲ್ಲೆಗಳಿಗೆ ಭೇಟಿ ನೀಡಿ, ಪರಿಸ್ಥಿತಿಯನ್ನು ಪರಿಶೀಲಿಸಬೇಕು ಮತ್ತು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವಂತೆ ಜಿಲ್ಲಾಡಳಿತಕ್ಕೆ ಸೂಚಿಸಬೇಕು ಎಂದು ಕೃಷ್ಣ ಭೈರೇಗೌಡ ಮತ್ತು ಶಾಲಿನಿ ರಜನೀಶ್ ಸಹ ಹಾಜರಿದ್ದ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಸಿಎಂ ಸೂಚಿಸಿದ್ದಾರೆ ಎಂದು ಅವರ ಕಚೇರಿ ಬಿಡುಗಡೆ ಮಾಡಿರುವ ಹೇಳಿಕೆಯಲ್ಲಿ ತಿಳಿಸಲಾಗಿದೆ.

ಗ್ರಾಮೀಣಾಭಿವೃದ್ಧಿ ಇಲಾಖೆ ಕಾರ್ಯದರ್ಶಿಗಳು ಮತ್ತು ಜಲಸಂಪನ್ಮೂಲ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು ಸ್ಥಳಕ್ಕೆ ಭೇಟಿ ನೀಡಬೇಕು. ಮಾನವ, ಜಾನುವಾರು ಮತ್ತು ಪ್ರಾಣಿಗಳ ಜೀವ ನಷ್ಟವಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಬೇಕು. ಸಂತ್ರಸ್ತ ಜನರಿಗೆ ಪರಿಹಾರ ಕೇಂದ್ರಗಳನ್ನು ವ್ಯವಸ್ಥೆ ಮಾಡಬೇಕು ಮತ್ತು ಪ್ರಾಣಿಗಳಿಗೆ ಸಾಕಷ್ಟು ಮೇವು ಒದಗಿಸಬೇಕು ಎಂದು ಸೂಚಿಸಿದ್ದಾರೆ.

ಜಿಲ್ಲಾ ಅಧಿಕಾರಿಗಳು ಈಗಾಗಲೇ ನೆರೆಪೀಡಿತ ಕುಟುಂಬಗಳನ್ನು ಸುರಕ್ಷಿತ ಆಶ್ರಯ ತಾಣಗಳಿಗೆ ಸ್ಥಳಾಂತರಿಸಲು ಪ್ರಾರಂಭಿಸಿದ್ದಾರೆ. ದೋಣಿಗಳ ಮೂಲಕ ರಕ್ಷಣಾ ತಂಡಗಳು ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಗಸ್ತು ತಿರುಗುತ್ತಿದ್ದಾರೆ. ಶಾಲೆಗಳು ಮತ್ತು ಸಮುದಾಯ ಭವನಗಳನ್ನು ತಾತ್ಕಾಲಿಕ ಪರಿಹಾರ ಶಿಬಿರಗಳಾಗಿ ಪರಿವರ್ತಿಸಲಾಗುತ್ತಿದೆ ಎಂದು ಕಂದಾಯ ಇಲಾಖೆಯ ಮೂಲಗಳು ತಿಳಿಸಿವೆ.

ಗ್ರಾಮಸ್ಥರು, ಅವರಲ್ಲಿ ಹಲವರು ರೈತರು, ತಮ್ಮ ಬೆಳೆಗಳು ಮತ್ತು ಜಾನುವಾರುಗಳ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ಮಹಾರಾಷ್ಟ್ರದ ಜಲಾಶಯಗಳು ನೀರನ್ನು ಹೊರಹಾಕುತ್ತಲೇ ಇರುವುದರಿಂದ, ಮೇಲ್ಭಾಗದ ಜಲಾನಯನ ಪ್ರದೇಶಗಳಲ್ಲಿ ಮಳೆ ಮುಂದುವರಿದರೆ ಬಿಕ್ಕಟ್ಟು ಉಲ್ಬಣಗೊಳ್ಳಬಹುದು ಎಂದು ಅಧಿಕಾರಿಗಳು ಎಚ್ಚರಿಸಿದ್ದಾರೆ.

# ಸಂತ್ರಸ್ತರ ನೆರವಿಗೆ ಸರ್ಕಾರ ಅವಿರತ ಪ್ರಯತ್ನ: ಸಚಿವ ಖರ್ಗೆ



**ಬೆಂಗಳೂರು:** ಮಹಾರಾಷ್ಟ್ರದಲ್ಲಿ ಸುರಿಯುತ್ತಿರುವ ಭಾರೀ ಮಳೆಯಿಂದಾಗಿ ಕಲಬುರಗಿ, ಯಾದಗಿರಿ, ವಿಜಯಪುರ ಜಿಲ್ಲೆಯ ಭೀಮಾನದಿ ಭಾಗದ ಹಲವು ಪ್ರದೇಶಗಳು ಮುಳು ಗಡೆಯಾಗಿದ್ದು, ಜನರ ಪುನರ್ ವಸತಿಗೆ ಸರ್ಕಾರ ಅವಿರತ ಪ್ರಯತ್ನ ನಡೆಯುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಪ್ರಿಯಾಂಕ ಖರ್ಗೆ ತಿಳಿಸಿದ್ದಾರೆ.

ತಮ ಸಾಮಾಜಿಕ ಜಾಲತಾಣದಲ್ಲಿ ಸಂತ್ರಸ್ಥ ಪ್ರದೇಶಗಳ ಡ್ರೋನ್ ವಿಡಿಯೋಗಳನ್ನು ಹಂಚಿಕೊಂಡಿರುವ ಅವರು, ಕರ್ನಾಟಕದ ಭೀಮಾ ಜಲಾಶಯ ಪ್ರದೇಶಗಳಲ್ಲಿನ ಜಿಲ್ಲೆಗಳ ಪರಿಸ್ಥಿತಿ ಸವಾಲಿನದ್ದಾಗಿದೆ. ನಿರಂತರ ಮಳೆ ಹಾಗೂ ಉಕ್ಕಿ ಹರಿಯುತ್ತಿರುವ ನದಿಗಳಿಂದಾಗಿ ಹಲವಾರು ಗ್ರಾಮಗಳು ಜಲಾವೃತಗೊಂಡಿವೆ, ರಸ್ತೆ ಸಂಪರ್ಕ ಕಡಿತಗೊಂಡಿವೆ ಎಂದು ತಿಳಿಸಿದ್ದಾರೆ.

ಜೀವಗಳ ರಕ್ಷಣೆ ಸರ್ಕಾರದ ಮೊದಲ ಆದ್ಯತೆ. ಸುಮಾರು 8 ಸಾವಿರ ಜನರನ್ನು ಈಗಾಗಲೇ ಸ್ಥಳಾಂತರಿಸಲಾಗಿದೆ. ಆಹಾರ, ನೀರು, ವೈದ್ಯಕೀಯ ಆರೈಕೆ ಒದಗಿಸಲಾಗುತ್ತಿರುವ ಪರಿಹಾರ ಕೇಂದ್ರಗಳಲ್ಲಿ ಅವರು ರಕ್ಷಣೆ ಪಡೆದಿದ್ದಾರೆ. ಜಾನುವಾರುಗಳನ್ನು ರಕ್ಷಿಸಲು ಮತ್ತು ಜೀವನೋಪಾಯಕ್ಕೆ ಹಾನಿ ಕಡಿಮೆ ಮಾಡಲು ಎಸ್‌ಡಿಆರ್‌ಎಫ್ ಹಾಗೂ ಎಲ್ಲಾ ಇಲಾಖೆಗಳು ಹಗಲಿರುಳು ಶ್ರಮಿಸುತ್ತಿವೆ ಎಂದು ತಿಳಿಸಿದ್ದಾರೆ.ಜನ ಜೀವನ ಸಹಜ ಸ್ಥಿತಿಗೆ ಬರುವವರೆಗೂ ಸಾಧ್ಯವಿರುವ ಎಲ್ಲಾ ಪ್ರಯತ್ನಗಳನ್ನು ಮಾಡಿ ಅಗತ್ಯ ಸಂಪನೂಲಗಳನ್ನು ಒದಗಿಸಲಾಗುವುದು. ತೊಂದರೆಗೊಳಗಾದ ಜನರಜೊತೆ ಸರ್ಕಾರ ನಿಲ್ಲಲಿದೆ ಎಂದು ತಿಳಿಸಿದ್ದಾರೆ.

ಹಂಚಿಕೊಳ್ಳಲಾದ ದೃಶ್ಯಗಳಲ್ಲಿ ಭೀಮಾನದಿ ತೀರದ ಭಾಗಗಳಲ್ಲಿ ಕಂಡು ಬರುತ್ತಿರುವ ದೃಶ್ಯಗಳು ಮಳೆಯ ಹಾನಿಯ ತೀವ್ರತೆಯನ್ನು ಅನಾವರಣ ಗೊಳಿಸುತ್ತಿವೆ. ಊರಿಗೆ ಊರೇ ಮುಳುಗಡೆಯಾಗಿದೆ. ರಸ್ತೆ, ಸೇತುವೆ ಹಾಗೂ ಮೂಲ ಸೌಕರ್ಯಗಳು ಕೊಚ್ಚಿಹೋಗಿವೆ.

## ಅಂಬಾರಿ ಮೆರವಣಿಗೆಗೆ ಸಿದ್ಧತೆ
### ಈ ಬಾರಿ ಪ್ರವಾಸಿಗರ ಸಂಖ್ಯೆ ಹೆಚ್ಚಳ

**ಮೈಸೂರು:** ನಾಡಹಬ್ಬ ದಸರಾದ ಆಕರ್ಷಣೀಯವಾದ ಜಂಬೂ ಸವಾರಿ ಮೆರವಣಿಗೆ ಹಿನ್ನೆಲೆಯಲ್ಲಿ ಅರಮನೆ ಆವರಣದಲ್ಲಿಂದು ತಾಲೀಮು ನಡೆಸಲಾಯಿತು. ವಿಜಯದಶಮಿ ದಿನ ನಾಡ ಅಧಿದೇವತಿ ಚಾಮುಂಡೇಶ್ವರಿ ತಾಯಿಯನ್ನು ಚಿನ್ನದ ಅಂಬಾರಿಯಲ್ಲಿ ಕುಳ್ಳರಿಸಿ ಕ್ಯಾಪ್ಟನ್ ಅಭಿಮನ್ಯು ಹೆಜ್ಜೆ ಹಾಕಲಿದ್ದಾನೆ.

ಈ ಹಿನ್ನೆಲೆಯಲ್ಲಿ ಅಭಿಮನ್ಯು ಆನಂದ್, ಪೊಲೀಸ್ ಬ್ಯಾಂಡ್ ಅಶ್ವಾರೂಢ ದಳ ಹಾಗೂ ಪೊಲೀಸ್ ಪಡೆಯೊಂದಿಗೆ ಮೆರವಣಿಗೆ ನಡೆಸುವ ಮೂಲಕ ತಾಲೀಮು ನಡೆಸಲಾಯಿತು. ಜಂಬೂ ಸವಾರಿಗೆ ಈಗಾಗಲೇ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು, ಗಜಪಡೆಗಳಿಗೆ ಅಂತಿಮ ಹಂತದ ತಾಲೀಮು ನಡೆಸಲಾಗುತ್ತಿದೆ.

**ಪ್ರವಾಸಿಗರ ಸಂಖ್ಯೆ ಹೆಚ್ಚಳ**

ಕಳೆದ ವರ್ಷ 8 ದಿನಗಳಲ್ಲಿ 4 ಲಕ್ಷ ಪ್ರವಾಸಿಗರು ಭೇಟಿ ನೀಡಿದ್ದರು. ಈ ಬಾರಿ 7 ದಿನಗಳಲ್ಲಿ 4 ಲಕ್ಷ ಪ್ರವಾಸಿಗರು ಭೇಟಿ ನೀಡಿ ದಾಖಲೆ ನಿರ್ಮಿಸಿದ್ದಾರೆ. ದಸರಾ ವೈಭವವನ್ನು ವೀಕ್ಷಿಸಲು ರಾಜ್ಯ ಹಾಗೂ ಹೊರರಾಜ್ಯಗಳಿಂದ ನಿರೀಕ್ಷೆಗೂ ಮೀರಿ ಪ್ರವಾಸಿಗರು ಆಗಮಿಸುತ್ತಿದ್ದಾರೆ. ಮುಂದಿನ ನಾಲ್ಕು ದಿನಗಳಲ್ಲಿ ಪ್ರವಾಸಿಗರ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಸಾಧ್ಯತೆಯಿದೆ. ಎಲ್ಲಾ ಹೋಟೆಲ್‌ಗಳು, ರೂಂಗಳು ಭರ್ತಿಯಾಗಿವೆ.

## ಪಾರದರ್ಶಕತೆ, ದಕ್ಷತೆ ಹೆಚ್ಚಳ
### ರಾಜ್ಯದಲ್ಲಿ ಏಕೀಕೃತ ಭೂಸ್ವಾಧೀನ ವ್ಯವಸ್ಥೆಗೆ ಚಾಲನೆ



**ಬೆಂಗಳೂರು:** ರಾಜ್ಯಾದ್ಯಂತ ಭೂಸ್ವಾಧೀನ ಪ್ರಸ್ತಾವನೆಗಳಿಗೆ ಪಾರದರ್ಶಕತೆ, ದಕ್ಷತೆ ಮತ್ತು ನ್ಯಾಯಸಮ್ಮತತೆಯನ್ನು ಜಾರಿಗೆತರುವ ಗುರಿ ಹೊಂದಿರುವ ಏಕೀಕೃತ ಭೂಸ್ವಾಧೀನ ವ್ಯವಸ್ಥೆ(ಯುಎಲ್‌ಎಂಎಸ್) 'ಡೇಟಾ ಮಾಡ್ಯೂಲ್ ಅನ್ನು ರಾಜ್ಯ ಸರ್ಕಾರ ಸೋಮವಾರ ಆರಂಭಿಸಿದೆ.

ಕರ್ನಾಟಕ ಏಕೀಕೃತ ಭೂಸ್ವಾಧೀನ ವ್ಯವಸ್ಥೆಯು ಭೂಸ್ವಾಧೀನ ಪ್ರಕ್ರಿಯೆಯನ್ನು ಸಮನ್ವಯಗೊಳಿಸಲು ಮತ್ತು ಪ್ರಸ್ತುತ ನಡೆಯುತ್ತಿರುವ ಮತ್ತು ಹಿಂದಿನ ಪ್ರಸ್ತಾವನೆಗಳಿಗೆ ಸಂಬಂಧಿಸಿದ ಮೊಕದ್ದಮೆಗಳನ್ನು ಪತ್ತೆಹಚ್ಚಲು ವಿನ್ಯಾಸಗೊಳಿಸಲಾದ ರಾಜ್ಯವ್ಯಾಪಿ ಡಿಜಿಟಲ್ ವೇದಿಕೆಯಾಗಿದೆ ಎಂದು ಸರ್ಕಾರ ತಿಳಿಸಿದೆ. "ಈ ಮಾಡ್ಯೂಲ್ ಅನ್ನು ಇ-ಆಡಳಿತ ಇಲಾಖೆಯ ಅಡಿಯಲ್ಲಿ ಸ್ಮಾರ್ಟ್ ಗವರ್ನನ್ಸ್ ಸೆಂಟರ್‌ನ ಯುಎಲ್‌ಎಂಎಸ್ ಪ್ರಾಜೆಕ್ಟ್ ಅಭಿವೃದ್ಧಿಪಡಿಸಿದೆ" ಎಂದು ಕಂದಾಯ ಇಲಾಖೆ ತಿಳಿಸಿದೆ. ಇಲಾಖೆಯ ಪ್ರಕಾರ, ಈ ಮಾಡ್ಯೂಲ್ ಎಲ್ಲಾ ಭೂಸ್ವಾಧೀನ ಸಂಸ್ಥೆಗಳು ಮತ್ತು ಇಲಾಖೆಗಳು ಪ್ರಕ್ರಿಯೆಯ ಉದ್ದಕ್ಕೂ ಭೂಸ್ವಾಧೀನದ ಸಂಪೂರ್ಣ ವಿವರಗಳನ್ನು ನಮೂದಿಸಲು ಅನುವು ಮಾಡಿಕೊಡುತ್ತದೆ. ಇವುಗಳಲ್ಲಿ ಕಂದಾಯ ಇಲಾಖೆ, ನೀರಾವರಿ ಇಲಾಖೆ, ನಗರಾಭಿವೃದ್ಧಿ ಮತ್ತು ಮೂಲಸೌಕರ್ಯ ಅಭಿವೃದ್ಧಿ ಇಲಾಖೆಗಳು, ಹಾಗೆಯೇ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ, ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಮತ್ತು ಕರ್ನಾಟಕ ರಾಜ್ಯ ಹೆದ್ದಾರಿ ಸುಧಾರಣಾ ಯೋಜನೆ ಸೇರಿವೆ. ಇದು ಮೆಟ್ರೋ, ಕೆ-ರೈಡ್, ಕರ್ನಾಟಕ ವಸತಿ ಮಂಡಳಿ ಮತ್ತು ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿಯನ್ನು ಸಹ ಒಳಗೊಳ್ಳುತ್ತದೆ. ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಹೇಳಿದರು.

# ಗ್ರೇಟರ್ ಬೆಂಗಳೂರು: ವಿದ್ಯುತ್, ನೀರು ಒದಗಿಸಲು ಸಭೆ



**ಬೆಂಗಳೂರು:** ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಹಾಗೂ ರಾಜ್ಯದ ಇತರೆ ಕಡೆಗಳಲ್ಲಿ ನಿರ್ಮಿಸಿರುವ ಕಟ್ಟಡಗಳಿಗೆ ವಿದ್ಯುತ್ ಮತ್ತು ನೀರಿನ ಸಂಪರ್ಕ ಕಲ್ಪಿಸುವಲ್ಲಿ ಇರುವ ತೊಡಕುಗಳ ಕುರಿತಂತೆ ನಗರಾಭಿವೃದ್ಧಿ, ಪೌರಾಡಳಿತ ಇಲಾಖೆ, ಬೆಂಗಳೂರು ಜಲಮಂಡಳಿ, ಕೆಪಿಟಿಸಿಎಲ್, ಬೆಸ್ಕಾಂನ ಹಿರಿಯ ಅಧಿಕಾರಿಗಳ ಜೊತೆ ಗೃಹ ಕಚೇರಿ ಕೃಷ್ಣದಲ್ಲಿ ಸಭೆ ನಡೆಸಿದರು.

ಸಭೆಯಲ್ಲಿ ಬಹುಕಾಲದಿಂದ ಇರುವ ಸಮಸ್ಯೆಗಳು ಮತ್ತು ಅವುಗಳ ಪರಿಹಾರ ಮಾರ್ಗೋಪಾಯಗಳ ಬಗ್ಗೆ ಚರ್ಚಿಸಿದರು. ಕಳೆದ 2024ರ ಡಿ.17ರ ಸರ್ವೋಚ್ಚ ನ್ಯಾಯಾಲಯದ ಆದೇಶದ ನಂತರ ಗ್ರೇಟರ್ ಬೆಂಗಳೂರು ಸೇರಿದಂತೆ ರಾಜ್ಯ ವ್ಯಾಪ್ತಿಯಲ್ಲಿ ಸಿಸಿ ಮತ್ತು ಓಸಿ ಇಲ್ಲದೇ ನಿರ್ಮಿಸಿರುವ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ನೀಡಲು ಸಮಸ್ಯೆ ಉಂಟಾಗಿರುವ ಬಗ್ಗೆ ಚರ್ಚೆ ನಡೆಸಲಾಯಿತು.

ಸುಪ್ರೀಂಕೋರ್ಟ್‌ನ ಆದೇಶ ಭಾರತದ ಎಲ್ಲ ರಾಜ್ಯಗಳಿಗೂ ಅನ್ವಯವಾಗುತ್ತಿದ್ದೂ, ಎಲ್ಲ ರಾಜ್ಯಗಳೂ ಆದೇಶವನ್ನು ಅನುಷ್ಠಾನ ಗೊಳಿಸುತ್ತಿವೆಯೇ ಎಂದು ಪರಿಶೀಲಿಸಲು ಮುಖ್ಯಮಂತ್ರಿಗಳು ಸೂಚಿಸಿದರು.

ನಿಯಮ ಉಲ್ಲಂಘಿಸಿ ನಿರ್ಮಾಣ ಗೊಂಡಿರುವ ಕಟ್ಟಡಗಳಿಗೆ ಒಂದು ಬಾರಿಗೆ ಅನ್ವಯವಾಗುವಂತೆ ಅನುಮತಿ ನೀಡುವ ಸಾಧ್ಯತೆ ಬಗ್ಗೆ ಚರ್ಚೆ ನಡೆಸಲಾಗಿ, ನಿರ್ಮಾಣಗೊಂಡಿರುವ ಕಟ್ಟಡಗಳನ್ನು ನೆಲಸಮಗೊಳಿಸಲು ಸಾಧ್ಯವಿಲ್ಲ. ಸರ್ಕಾರದ ನಿರ್ಧಾರದಿಂದ ಜನರಿಗೆ ಅನುಕೂಲವಾಗಬೇಕು. ಸೂಕ್ತ ಅನುಮತಿಗಳಿಲ್ಲದೇ ಈಗಾಗಲೇ ಮನೆ ನಿರ್ಮಿಸಿ ವಾಸವಿದ್ದಾರೆ. ಅಂತಹವರಿಗೆ ಒಂದು ಬಾರಿಗೆ ಅನ್ವಯವಾಗುವಂತೆ ನಿಯಮಿತಗೊಳಿಸಲು ಕಾನೂನಿನಲ್ಲಿ ಅವಕಾಶವಿರುವ ಬಗ್ಗೆಯೂ ಚರ್ಚೆ ನಡೆಸಲಾಯಿತು.

ಸುಪ್ರೀಂಕೋರ್ಟ್ ಆದೇಶ ಅನುಷ್ಠಾನ ಗೊಳ್ಳುವ ಮುಂಚೆ ಸಲ್ಲಿಕೆಯಾಗಿರುವ ಮಾರ್ಚ್ 2025ರವರೆಗಿನ ಅರ್ಜಿಗಳನ್ನು ಪರಿಗಣಿಸಿ ಒಸಿ ಮತ್ತು ಸಿಸಿಯಿಂದ ವಿನಾಯ್ತಿಗೊಳಿಸಿ ವಿದ್ಯುತ್ ಮತ್ತು ನೀರಿನ ಸಂಪರ್ಕ ನೀಡುವ ಬಗ್ಗೆ ಕಾನೂನಿನ ಸಾಧ್ಯತೆಗಳ ಬಗ್ಗೆ ಕೂಲಂಕುಷವಾಗಿ ಚರ್ಚಿಸಲು ಅಕ್ಟೋಬರ್ 8 ರಂದು ಸರ್ಕಾರದ ಮುಖ್ಯಕಾರ್ಯದರ್ಶಿಗಳು, ಸಂಬಂಧಪಟ್ಟ ಇಲಾಖಾ ಸಚಿವರು, ಸರ್ಕಾರದ ಅಡ್ವೋಕೇಟ್ ಜನರಲ್, ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರು ಹಾಗೂ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸೂಕ್ತ ನಿರ್ಧಾರ ಕೈಗೊಳ್ಳುವುದಾಗಿ ಮುಖ್ಯಮಂತ್ರಿಗಳು ತಿಳಿಸಿದರು. ಈ ಸಂದರ್ಭದಲ್ಲಿ ಇಂಧನ ಸಚಿವರಾದ ಕೆ.ಜೆ.ಜಾರ್ಜ್, ನಗರಾಭಿವೃದ್ಧಿ ಸಚಿವರಾದ ಬೈರತಿ ಸುರೇಶ್, ಪೌರಾಡಳಿತ ಸಚಿವರಾದ ರಹೀಂ ಖಾನ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಸರ್ಕಾರದ ಮುಖ್ಯಕಾರ್ಯದರ್ಶಿಗಳಾದ ಡಾ.ಶಾಲಿನಿ ರಜನೀಶ್ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯಲ್ಲಿ ನಿರ್ಲಕ್ಷ್ಯ: ಸಿಬ್ಬಂದಿ ಅಮಾನತು

**ಹುಬ್ಬಳ್ಳಿ:** ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ನಿರ್ಲಕ್ಷ್ಯವಹಿಸಿದ ಹಿನ್ನೆಲೆ ಮಹಾನಗರ ಪಾಲಿಕೆಯ ಇಬ್ಬರು ಸಿಬ್ಬಂದಿ ಅಮಾನತುಗೊಳಿಸಿ ಆದೇಶ ಹೊರಡಿಸಲಾಗಿದೆ.

ಕರುನಾಡಿನಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಬಗ್ಗೆ ಸಮೀಕ್ಷೆ ನಡೆಯುತ್ತಿದೆ. ಮಹಾನಗರಪಾಲಿಕೆ ವ್ಯಾಪ್ತಿಯ ಹುಬ್ಬಳ್ಳಿ ಶಹರದಲ್ಲಿ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆಯ ಕಾರ್ಯದಲ್ಲಿ ನಿರ್ಲಕ್ಷ್ಯವಹಿಸಿ, ಕರ್ತವ್ಯಲೋಪ ಮಾಡಿರುವ ಮಹಾನಗರಪಾಲಿಕೆಯ ಇಬ್ಬರು ಸಿಬ್ಬಂದಿಗಳನ್ನು ಅಮಾನತು ಮಾಡಿ, ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ ಘಾಳಿ ಅವರು ಆದೇಶಿದ್ದಾರೆ. ಈ ಕುರಿತು ಭಾನುವಾರ ಸಂಜೆ ಪ್ರಗತಿ ಪರಿಶೀಲನೆ ಮಾಡಿರುವ ಅವರು ಸಮೀಕ್ಷೆಯಲ್ಲಿ ನಿರ್ಲಕ್ಷ್ಯ ವಹಿಸಿರುವ ಇಬ್ಬರು ಸಿಬ್ಬಂದಿಗಳನ್ನು ಅಮಾನತುಗೊಳಿಸಿದ್ದಾರೆ.

ಸಿಬ್ಬಂದಿ ವಿರುದ್ಧ ಶಿಸ್ತು ಕ್ರಮ: ಸಮೀಕ್ಷೆಗೆ ನಿಯೋಜನೆಗೊಂಡಿರುವ ಎಲ್ಲ ಸಮೀಕ್ಷೆದಾರಿಗೆ ಅಗತ್ಯ ತರಬೇತಿ ನೀಡಿ, ಅಗತ್ಯ ಮಾರ್ಗದರ್ಶನ ಮಾಡಲಾಗಿದೆ. ಮತ್ತು ಸಮೀಕ್ಷೆಗೆ ಗುರಿ ನಿಗದಿ ಮಾಡಲಾಗಿದೆ. ಕರ್ತವ್ಯಲೋಪ, ನಿರ್ಲಕ್ಷ್ಯ ಮತ್ತು ಸಮೀಕ್ಷೆಯಲ್ಲಿ ಉದಾಸೀನತೆ ತೋರುವ ಅಧಿಕಾರಿ, ಸಿಬ್ಬಂದಿ ವಿರುದ್ಧ ಶಿಸ್ತು ಕ್ರಮಕೈಗೊಂಡು ಸರಕಾರಕ್ಕೆ ವರದಿ ಸಲ್ಲಿಸಲಾಗುವುದು. ಕಾಲಮಿತಿಯಲ್ಲಿ ಸಮೀಕ್ಷೆ ಪೂರ್ಣಗೊಳಿಸಲು ಸರ್ಕಾರವು ನಿರ್ದೇಶಿಸಿರುವುದರಿಂದ ಎಲ್ಲರೂ ಕಾಳಜಿ ಮತ್ತು ನಿರಂತರವಾಗಿ ಸಮೀಕ್ಷಾ ಕರ್ತವ್ಯ ನಿರ್ವಹಿಸಬೇಕು ಎಂದು ಅವರು ಸೂಚಿಸಿದ್ದಾರೆ.

ಪ್ರತಿಯೊಬ್ಬರು ನೀಡಿರುವ ಸಮೀಕ್ಷಾ ಗುರಿಯನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಬೇಕು. ತಾಂತ್ರಿಕ ಸಮಸ್ಯೆಗಳು ಉಂಟಾದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸ್ಥಾಪಿಸಿರುವ ಸಹಾಯವಾಣಿಗೆ ಸಂಪರ್ಕಿಸಿ, ಪರಿಹರಿಸಿಕೊಳ್ಳಬೇಕು ಎಂದು ಅವರು ತಿಳಿಸಿದ್ದಾರೆ.

**11 ಸಿಬ್ಬಂದಿ ಅಮಾನತು:** ನಿನ್ನೆ ಕೂಡ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಪಾಲ್ಗೊಳ್ಳದೇ ಗೈರು ಹಾಜರಾದ ಸಿಬ್ಬಂದಿ ಅಮಾನತುಗೊಳಿಸಿ ಆದೇಶ ಹೊರಡಿಸಲಾಗಿದೆ. ಮೈಸೂರು ಜಿಲ್ಲೆಯಲ್ಲಿ ಸಮೀಕ್ಷಾ ಕಾರ್ಯಕ್ಕೆ ಹಾಜರಾಗದೇ, ಅಧಿಕಾರಿಗಳ ದೂರವಾಣಿ ಕರೆಯನ್ನು ಸ್ವೀಕರಿಸದೇ ಬೇಜವಾಬ್ದಾರಿ ಹಾಗೂ ಅತೀವ ನಿರ್ಲಕ್ಷ್ಯ ತೋರಿದ 8 ಜನ ಸಹ ಶಿಕ್ಷಕರನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್. ಯುಕೇಶ್ ಕುಮಾರ್ ಅವರ ಆದೇಶದ ಮೇರೆಗೆ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಎಸ್. ಟಿ. ಜವರೇಗೌಡ ಅವರು ಅಮಾನತು ಮಾಡಿ ಆದೇಶ ಹೊರಡಿಸಿದ್ದರು.

ಹಾಗೇ ದಾವಣಗೆರೆಯಲ್ಲಿ ಸಮೀಕ್ಷಾ ಕಾರ್ಯ ಕೈಗೊಳ್ಳಲು ನಿರಾಸಕ್ತಿ ತೋರಿದ ಇಬ್ಬರು ಶಿಕ್ಷಕರು ಸೇರಿ ಒಟ್ಟು ಮೂವರು ಸಿಬ್ಬಂದಿಯನ್ನು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಅಮಾನತು ಮಾಡಿ ಆದೇಶ ಹೊರಡಿಸಿದ್ದರು.

## ಉದ್ಯೋಗಾಕಾಂಕ್ಷಿಗಳಿಗೆ ದಸರಾ ಗಿಫ್ಟ್

**ಬೆಂಗಳೂರು:** ರಾಜ್ಯ ಸರ್ಕಾರ ಉದ್ಯೋಗಾಕಾಂಕ್ಷಿಗಳಿಗೆ ದಸರಾ ಬಂಪರ್ ಗಿಫ್ಟ್ ನೀಡಿದ್ದು, ಸಿವಿಲ್ ಸೇವಾ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ಮೂರು ವರ್ಷ ವಯೋಮಿತಿ ಸಡಿಲಿಕೆ ಮಾಡಿ ಸೋಮವಾರ ಮಹತ್ವದ ಆದೇಶ ಹೊರಡಿಸಿದೆ.

ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಮೂಲಕ ನಡೆಸುವ ನೇರ ನೇಮಕಾತಿಯಲ್ಲಿ ಭಾಗವಹಿಸುವ ಎಲ್ಲ ಪ್ರವರ್ಗಗಳ ಅಭ್ಯರ್ಥಿಗಳಿಗೂ ಒಂದು ಬಾರಿಗೆ ಅನ್ವಯವಾಗುವಂತೆ ಮೂರು ವರ್ಷಗಳ ವಯೋಮಿತಿ ಸಡಿಲಿಕೆ ಮಾಡಿ ರಾಜ್ಯ ಸರ್ಕಾರ ಇಂದು ಅಧಿಕೃತ ಆದೇಶ ಹೊರಡಿಸಿದೆ.

ಇತ್ತೀಚೆಗೆ ಧಾರವಾಡದಲ್ಲಿ ಸ್ಪರ್ಧಾತ್ಮಕ ಪರೀಕ್ಷಾರ್ಥಿಗಳು ಹಾಗೂ ವಿದ್ಯಾರ್ಥಿ ಸಂಘಟನೆಗಳು 5 ವರ್ಷ ವಯೋಮಿತಿ ಸಡಿಲಿಕೆ ಹಾಗೂ ಪಿ ಎಸ್ ಐ / ಕಾನ್ಸ್‌ಟೇಬಲ್ ಹುದ್ದೆಗಳಿಗೆ ನೇಮಕಾತಿ ಆದೇಶಕ್ಕೆ ಆಗ್ರಹಿಸಿ ಪ್ರತಿಭಟನೆ ನಡೆಸಿ ಸರ್ಕಾರಕ್ಕೆ ಬಿಸಿ ಮುಟ್ಟಿಸಿದ್ದರು.

# ನವರಾತ್ರಿ: ಶ್ರೀದೇವಿಯ ಆರಾಧನೆ



**ಗೋಕಾಕ:** ತಾಲೂಕಿನ ಬೆಟಗೇರಿ ಗ್ರಾಮದಲ್ಲಿ ನವರಾತ್ರಿ ಹಬ್ಬದ ಪ್ರಯುಕ್ತ ಸೆ.22 ರಿಂದ ಸ್ಥಳೀಯ ಮಹಿಳೆಯರಿಂದ ಶ್ರೀದೇವಿಯ ಆರಾಧನೆ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಸಡಗರದಿಂದ ನಡೆಯುತ್ತಿವೆ.

ಸೆ.22 ರಿಂದ 9 ದಿನಗಳ ಕಾಲ ಸ್ಥಳೀಯ ಮಹಿಳೆಯರು ಮತ್ತು ಚಿಕ್ಕ ವಯಸ್ಸಿನ ಹೆಣ್ಣು ಮಕ್ಕಳು ದಿನಕ್ಕೊಂದು ಬಣ್ಣದ ಸೀರೆಯುಟ್ಟು ನವೋಲ್ಲಾಸದಿಂದ ಸಂಭ್ರಮಿಸುತ್ತಿದ್ದಾರೆ. ದಿನ ಬೆಳಗಾಗುವಷ್ಟರಲ್ಲಿ ಗ್ರಾಮದ ಹೊರವಲಯದಲ್ಲಿರುವ ಬನ್ನಿ ಗಿಡಕ್ಕೆ ಶುಭ ಗಳಿಗೆಯಲ್ಲಿ ಪೂಜೆ, ಪುನಸ್ಕಾರ, ಗಿಡಕ್ಕೆ ಪ್ರದಕ್ಷಣೆ ಹಾಕುವುದು, ನೂಲು ಸುತ್ತುವದು, ಆರತಿ, ನೈವೇದ್ಯ ಸಮರ್ಪನೆ ಜರುಗುತ್ತಿದೆ.

ಇಲ್ಲಿಯ ವಿವಿಧ ದೇವಾಲಯದಲ್ಲಿರುವ ದೇವರಿಗೆ ಮಹಾ ಪೂಜೆ, ವಿವಿಧ ಬಗೆಯ ಪುಷ್ಪಲಂಕಾರ, ದೀಪಾಲಂಕಾರ ಹಾಗೂ ನವರಾತ್ರಿಯ ಧಾರ್ಮಿಕ ಕಾರ್ಯಕ್ರಮಗಳು ಭಕ್ತಿಯ ಪರಾಕಾಷ್ಠೆ, ವೈಭವದಿಂದ ನಡೆಯುತ್ತಿವೆ. ಅದರಲ್ಲೂ ಸಡಗರದಿಂದ ಶ್ರೀದೇವಿಯ ಆರಾಧನೆಗೆ ಮಹಿಳೆಯರಿಂದ ನಡೆಯುತ್ತಿದೆ.

ಈ ವೇಳೆ ಶೋಭಾ ಮುಧೋಳ, ಮಹಾದೇವಿ ನೀಲಣ್ಣವರ, ಶಾಂತಾ ಮುಧೋಳ, ಅಕ್ಷತಾ ನೀಲಣ್ಣವರ, ಮಂಜುಳಾ ಮುಧೋಳ, ಸೀಮಾ ನೀಲಣ್ಣವರ, ಶೀವಲೀಲಾ ಮುಧೋಳ, ಗೌರವ್ವ ಪೂಜೇರಿ, ಮಹಾದೇವಿ ಮುಧೋಳ, ಶೀಲಾ ನೀಲಣ್ಣವರ, ಸೇರಿದಂತೆ ಹಲವಾರು ಜನ ಮಹಿಳೆಯರು, ಚಿಕ್ಕ ವಯಸ್ಸಿನ ಹೆಣ್ಣು ಮಕ್ಕಳು, ಇದ್ದರು.

# ವೀರರಾಣಿ ಕಿತ್ತೂರ ಚೆನ್ನಮ್ಮಾಜಿ ಮೂರ್ತಿ ಅನಾವರಣ



**ರಾಮದುರ್ಗ:** ಹಿಂದುಸ್ಥಾನದಲ್ಲಿರುವ ಲಿಂಗಾಯತರಿರಲಿ, ಯಾವುದೇ ಜಾತಿಯವರು ಇರಲಿ ಮೊದಲು ಹಿಂದುಗಳು ಎಂದು ಅರಿತುಕೊಳ್ಳಬೇಕು. ಧರ್ಮದ ಮಾನ್ಯತೆ ದೊರೆಯದೇ ಲಿಂಗಾಯತ ಎಂದು ಬರೆಯಿಸಿದರೆ ಅರ್ಥವಿಲ್ಲ. ಎಲ್ಲ ಸಮಾಜ ಬಾಂಧವರು ಧರ್ಮ ಎಂದು ಬಂದಾಗ ಹಿಂದು ಎಂದು ಬರೆಯಿಸಬೇಕು ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಹೇಳಿದರು.

ತಾಲೂಕಿನ ಕುನ್ನಾಳ ಗ್ರಾಮದ ಲಿಂಗಾಯತ ಪಂಚಮಸಾಲಿ ಸಮಾಜ ಹಾಗೂ ಕೇಸರಿ ಯುವ ಪಡೆಯ ನೇತೃತ್ವದಲ್ಲಿ ರವಿವಾರ ವೀರರಾಣಿ ಕಿತ್ತೂರ ಚೆನ್ನಮ್ಮಾಜಿ ಮೂರ್ತಿ ಅನಾವರಣಗೊಳಿಸಿ, ನಂತರ ಏರ್ಪಡಿಸಿದ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಬಿಜೆಪಿ ಸರಕಾರದ ಅವಧಿಯಲ್ಲಿ ಪಂಚಮಸಾಲಿ ಸಮಾಜ ಬಾಂಧವರು ಸೇರಿ ಉಳಿದ ಎಲ್ಲಾ 2ಏ ಮೀಸಲಾತಿ ಇಲ್ಲದ ಲಿಂಗಾಯತರಿಗೆ ಶೇ. 7ರಷ್ಟು ಮೀಸಲಾತಿ ನೀಡಿ, 2ಸಿ ಮೀಸಲಾತಿ ಘೋಷಣೆ ಮಾಡಿತ್ತು. ಅದನ್ನು ಸದ್ಯದ ಸರಕಾರ ಅನುಷ್ಠಾನಕ್ಕೆ ತಂದಿಲ್ಲ. ಮೀಸಲಾತಿ ಹೋರಾಟಕ್ಕೆ ಬಸವಜಯ ಮೃತ್ಯುಂಜಯ ಸ್ವಾಮೀಜಿ ಬದ್ಧರಿದ್ದಾರೆ. ಅವರಿಗೆ ನಾವೆಲ್ಲರೂ ಕೈ ಜೋಡಿಸಬೇಕು ಎಂದರು.

ಕಿತ್ತೂರ ಚೆನ್ನಮ್ಮನ ನಾಡಿನಲ್ಲಿ ನಾಲ್ಕು ಏಕರೆ ಜಮೀನು ಖರೀದಿ ಮಾಡಲಾಗಿದೆ. ಉನ್ನತ ವ್ಯಾಸಂಗ ಮಾಡುತ್ತಿರುವ ನಮ್ಮ ಸಮಾಜದ ಶೇಕಡಾ 50 ರಷ್ಟು ಹಾಗೂ ಉಳಿದೆಲ್ಲ ಸಮಾಜ ಬಾಂಧವರಿಗೆ 50 ರಷ್ಟು ಅವಕಾಶ ನೀಡುವಂತೆ ಸುಮಾರು 1000 ವಿದ್ಯಾರ್ಥಿಗಳಿಗೆ ವಸತಿ ಊಟದ ವ್ಯವಸ್ಥೆ ಮಾಡಲು ಮತ್ತೊಂದು ಪೀಠದಲ್ಲಿ ಅವಕಾಶ ನೀಡುತ್ತೇವೆ. ಅದಕ್ಕೆ ಸರ್ವ ಪಂಚಮಸಾಲಿ ಸಮಾಜ ಬಾಂಧವರು ಕೈ ಜೋಡಿಸಲಿದ್ದಾರೆ ಎಂದರು.

ಕೂಡಲ ಸಂಗಮ ಪೀಠವೇ ಬೇರೆ, ಟ್ರಸ್ಟ್ ಬೇರೆ, ಟ್ರಸ್ಟ್ ಕೆಲವು ಕುಟುಂಬಗಳಿಗೆ ಮಾತ್ರ ಸೀಮಿತವಾಗಿದೆ. ಸಮಾಜಕ್ಕೆ ದ್ರೋಹ ಬಗೆದವರು, ಜೋಳಿಗೆ ದುಡ್ಡು ತಿಂದವರು ಉದ್ಧಾರ ಆಗಿದ್ದು ಇತಿಹಾಸದಲ್ಲಿ ಇಲ್ಲ. ಸ್ವತ ಸಮಾಜದ ಉದ್ಧಾರಕ್ಕೆ ಶ್ರಮಿಸಿದ ಬಸವಣ್ಣನವರನ್ನೇ ಬಿಡದ ಸಮಾಜ ಇದು, ಇನ್ನು ಶ್ರೀಘಳ ಮೇಲೆ ಆರೋಪ ಮಾಡುವುದು ಹೊಸದಲ್ಲ. ಸಿ.ಡಿ ಇವೆ ದಾಖಲೆ ಇವೆ ಎಂದು ಹೇಳುವವರು ತಾಕತ್ತು ಇದ್ದರೆ ಬಹಿರಂಗ ಮಾಡಲಿ, ಸಮಾಜಕ್ಕೆ ದ್ರೋಹ ಬಗೆದ ಕಾಶಪ್ಪನವರ ಇನ್ನೆರಡುವರೆ ವರ್ಷದಲ್ಲಿ ಮಾಜಿ ಆಗುವುದು ಖಂಡಿತ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಮೂರ್ತಿ ಅನಾವರಣ ಹಾಗೂ ಗ್ರಾಮದಲ್ಲಿ ಏರ್ಪಡಿಸಿದ ಶ್ರೀಗಳ ಮೆರವಣಿಗೆ ಹಾಗೂ ಸತ್ಕಾರ ಸ್ವೀಕರಿಸಿ ಮಾತನಾಡಿದ ಕೂಡಲ ಸಂಗಮ ಪಂಚಮಸಾಲಿ ಪೀಠದ ಪ್ರಥಮ ಜಗದ್ಗುರು ಶ್ರೀ ಬಸವ ಜಯ ಮೃತ್ಯುಂಜಯ ಸ್ವಾಮೀಜಿ, ಯಾರು ನನ್ನ ಮೇಲೆ ಏನೇ ಆರೋಪಗಳನ್ನು ಮಾಡಲಿ ಭಕ್ತರ ಪ್ರೀತಿ ಇರುವಾಗ ನಾನು ಎದೆಗುಂದುವುದಿಲ್ಲ. ಭಕ್ತರು ತಮ್ಮ ಮಕ್ಕಳ ಭವಿಷ್ಯದ ಹೋರಾಟಕ್ಕೆ ಸರ್ವರೂ ಕೈ ಜೋಡಿಸಬೇಕು.

ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ, ಶಾಸಕ ಅರವಿಂದ ಬೆಲ್ಲದ, ಮಾಜಿ ಶಾಸಕ ಹಾಗೂ ಧನಲಕ್ಷ್ಮೀ ಸಹಕಾರಿ ಸಕ್ಕರೆ ಕಾರ್ಖಾನೆಯ ಅಧ್ಯಕ್ಷ ಮಹಾದೇವಪ್ಪ ಯಾದವಾಡ, ಮಾಜಿ ಜಿ.ಪಂ ಸದಸ್ಯೆ ರೋಹಿಣಿ ಪಾಟೀಲ, ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಲಿಂಗಾಯತ ಪಂಚಮಸಾಲಿ ಸಮಾಜದ ತಾಲೂಕಾ ಘಟಕದ ಅಧ್ಯಕ್ಷ ಸಿ.ಬಿ. ಪಾಟೀಲ ಮಾತನಾಡಿದರು.

# ಇಂದು ಲಕ್ಷ್ಮೀವೆಂಕಟೇಶ್ವರ ದೇವಸ್ಥಾನದ ಕಳಸಾರೋಹಣ



**ಜಮಖಂಡಿ:** ತಾಲೂಕಿನ ತುಂಗಳ ಗ್ರಾಮದಲ್ಲಿ ಸೆ.30ರಂದು ಶ್ರೀಲಕ್ಷ್ಮೀವೆಂಕಟೇಶ್ವರ ದೇವಸ್ಥಾನದ ನೂತನ ಗೋಪುರದ ಕಳಸಾರೋಹಣ ಸಮಾರಂಭ ನಡೆಯಲಿದೆ ಎಂದು ದೇವಸ್ಥಾನ ಕಮೀಟಿಯ ಅಧ್ಯಕ್ಷ ಶ್ರೀನಿವಾಸ ಹೊಸೂರ ಹೇಳಿದರು.

ನಗರದ ರಮಾನಿವಾಸ ಸಭಾಭವನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಲೂಕಿನ ತುಂಗಳ ಗ್ರಾಮದ ಶ್ರೀಲಕ್ಷ್ಮೀವೆಂಕಟೇಶ್ವರ ದೇವಸ್ಥಾನ ಆವರಣದಲ್ಲಿ ಅಂದಾಜು 50 ಲಕ್ಷ ವೆಚ್ಚದಲ್ಲಿ ಗೋಪುರ ನಿರ್ಮಾಣ ಮಾಡಲಾಗಿದೆ. ಶ್ರೀಬಸವೇಶ್ವರ ವೃತ್ತದಿಂದ ದೇವಸ್ಥಾನದವರೆಗೆ ಸಕಲ ಮಂಗಲವಾದ್ಯಮೇಳದೊಂದಿಗೆ ನೂರಾರು ಮಹಿಳೆಯರಿಂದ ಕುಂಭಮೇಳ ಜರುಗಲಿದೆ. ಸಚಿವ ಎಚ್.ಕೆ.ಪಾಟೀಲ ದೇವಸ್ಥಾನದ ಕಳಸಾರೋಹಣ ಉದ್ಘಾಟನೆ ನೆರವೇರಿಸಲಿದ್ದಾರೆ ಎಂದರು.

ಡಾ.ಟಿ.ಪಿ.ಗಿರಡ್ಡಿ ಮಾತನಾಡಿ, ಕೊಕಟನೂರ-ಮಂಜರಿ-ತುಂಗಳದ ಕಾಡಸಿದ್ದೇಶ್ವರ ಮಠ ಷ.ಬ್ರ.ಗುರುಶಾಂತಲಿಂಗ ದೇಶಿಕೇಂದ್ರ ಶಿವಾಚರ್ಯರು ದಿವ್ಯಸಾನ್ನಿಧ್ಯ ವಹಿಸುವರು. ಶಾಸಕ ಜಗದೀಶ ಗುಡಗುಂಟಿ ಅಧ್ಯಕ್ಷತೆ ವಹಿಸುವರು. ಮುಖ್ಯಅಥಿತಿಗಳಾಗಿ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ, ಬೀಳಗಿ ಶಾಸಕ ಜೆ.ಟಿ.ಪಾಟೀಲ, ಬಾಗಲಕೋಟೆ ಶಾಸಕ ಪಿ.ಎಚ್.ಪೂಜಾರ, ನವಲಗುಂದ ಶಾಸಕ ಎನ್.ಎಚ್.ಕೋನರೆಡ್ಡಿ, ಮಾಜಿಸಚಿವ ಎಸ್. ಆರ್.ಪಾಟೀಲ, ಜಿಲ್ಲಾ ಬಿಡಿಸಿಸಿ ಬ್ಯಾಂಕ ಅಧ್ಯಕ್ಷ ಅಜಯಕುಮಾರ ಸರನಾಯಕ, ಮಾಜಿ ಶಾಸಕರಾದ ಆನಂದ ನ್ಯಾಮಗೌಡ, ಶ್ರೀಕಾಂತ ಕುಲಕರ್ಣಿ, ಅರ್ಬನ ಬ್ಯಾಂಕ ಅಧ್ಯಕ್ಷ ರಾಹುಲ ಕಲೂತಿ ಸಹಿತ ಹಲವರು ಕಾರ್ಯಕ್ರಮಕ್ಕೆ ಆಗಮಿಸಲಿದ್ದಾರೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಗ್ರಾಮದ ಹಿರಿಯರಾದ ಬಸವನ್ನ ಸನಾಳ, ಕಲ್ಲಪ್ಪ ಗಿರಡ್ಡಿ, ಶ್ರೀನಿವಾಸ ಹೊಸಮನಿ, ಮಲಕಪ್ಪ ಗಿರಡ್ಡಿ, ಮಹೇಶ ನ್ಯಾಮಗೌಡ ಇದ್ದರು.

# ನವರಾತ್ರಿ ಉತ್ಸವದ ಶ್ರೀ ದೇವಿ ಪುರಾಣ ಕಾರ್ಯಕ್ರಮ



**ಹಳ್ಳೂರ:** ಭೂಮಿಯ ಮೇಲೆ ಸಂತ ಶರಣರಿಗೆ ಸಂಕಷ್ಟ, ಭೂಮಿಯ ಮೇಲೆ ಪಾಪ ಹೆಚ್ಚಾದಾಗ ದುಷ್ಟರ ಸಂಹಾರಕ್ಕೆ ಶಿಷ್ಟರ ಪರಿಪಾಲನೆ ಮಾಡಲು ದೇವಿಯು ಅವತಾರ ತಾಳಿ ಬಂದಿರುತ್ತಾರೆ.ಪ್ರಜೆಗಳ ಹಿತರಕ್ಷಣೆ ಕಾಪಾಡುವುವರೆ ನಿಜವಾದ ನಾಯಕರು ಒಬ್ಬರ ಮನ ನೋಯಿಸಿ ಬೆಂಕಿ ಹಚ್ಚುವ ಕೆಲಸ ಮಾಡುವ ಮೊದಲು ಬೆಂಕಿ ತಮಗೂ ತಟ್ಟುತ್ತದೆಂದು ನೆನಪಿಟ್ಟುಕೊಳ್ಳಬೇಕೆಂದು ಹೊಸ ಯರಗುದ್ರಿಯ ಸಿದ್ಧಪ್ರಭು ಶಿವಾಚಾರ್ಯ ಶ್ರೀಗಳು ಹೇಳಿದರು.

ಗ್ರಾಮದ ದ್ಯಾಮವ್ವಾ ದೇವಿ ದೇವಸ್ಥಾನದಲ್ಲಿ ನಡೆದ ನವರಾತ್ರಿ ಉತ್ಸವದ ಶ್ರೀ ದೇವಿ ಪುರಾಣ ಕಾರ್ಯಕ್ರಮದಲ್ಲಿ ರಾಕ್ಷಸರು ದೇವಿಯು ಮೇಲೇ ಯುದ್ಧ ಮಾಡಲು ಪ್ರಯತ್ನಿಸಿದಾಗ ದೇವೀ ಅಸ್ತ್ರ ಪ್ರಯೋಗಿಸಿ ದುಮ್ರಲೋಚನಂತ ದುಷ್ಟ ರಾಕ್ಷಸರನ್ನು ಸೆದೆ ಬಡಿದು ನಾಶ ಮಾಡುತ್ತಾರೆ .ಸಂಕಲ್ಪ ಶಕ್ತಿಯಿಂದ ಹಸಿವೂ ನೀಗಿಸುವ ಶಕ್ತಿ ಪಾರ್ವತಿ ಪರಮೇಶ್ವರನಲ್ಲಿದೆ ಒಳ್ಳೆಯದಕ್ಕೆ ಮಾತ್ರ ಪನ ತೊಡಬೇಕು ನುಡಿದರೆ ಮುತ್ತಿನ ಹಾರದಂತಿರಬೇಕು ನುಡಿದರೆ ಮಾಣಿಕ್ಯದ ದೀಪ್ತಿಯಂತಿರಬೇಕು ಒಳ್ಳೆಯದಕ್ಕೆ ಒಳ್ಳೆಯವರಿಗೆ ಪ್ರೋತ್ಸಾಹ ನೀಡಬೇಕು ದಾಸೋಹಕ್ಕೆ ಸಹಾಯ ನೀಡಬೇಕು. ಬಸವಣ್ಣವರು ಅನ್ನಕ್ಕೆ ಬ್ರಹ್ಮನ ಸ್ಥಾನ ನೀಡಿದ್ದಾರೆ ಇದ್ದಷ್ಟರಲ್ಲಿ ಹಂಚಿ ತಿನ್ನುವ ಆನಂದ ಇನ್ನೋದರಲಿಲ್ಲ. ಮತ್ತೊಬ್ಬರ ಏಳ್ಗೆಯನ್ನು ಸಹಿಸದವರು ರಾಕ್ಷಸ ಕುಲದವರು. ಒಳ್ಳೆಯವರಿಗೆ ಕಷ್ಟ ಕೊಟ್ಟವರ ಪರಿಸ್ಥಿತಿ ಅಧೋಗತಿ ಹೊಂದುತ್ತದೆ. ಸತ್ಯ ಧರ್ಮವಿದ್ದಕಡೆ ಜಯವಾಗಿ ದೇವರ ಆಶೀರ್ವಾದ ವಿರುತ್ತದೆ. ವಿದೇಶಿಗರು ನಮ್ಮ ದೇಶದ ಸಂಸ್ಕೃತಿಯನ್ನು ಪೂಜ್ಯನೀಯ ಭಾವನೆಯಿಂದ ಕಾಣುತ್ತಾರೆ .ಮಹಿಳೆಯರು ಶ್ರೇಷ್ಠವಾದ ದೇಶದ ಸಂಸ್ಕೃತಿಯನ್ನು ಉಳಿಸಿಕೊಂಡು ಹೋಗಬೇಕೆಂದು ಹೇಳಿದರು.

ದೇವಾದಿಗಳ ವೇಷಭೂಷಣ ಧರಿಸಿದ ಮುದ್ದು ಮಕ್ಕಳಿಗೆ ಉಡಿ ತುಂಬಿದರು.ಸರ್ವರಿಗೂ ಮಹಾ ಪ್ರಸಾದ ವ್ಯವಸ್ಥೆ ನಡೆಯಿತು. ಕಾರ್ಯಕ್ರಮವನ್ನು ಮುರಿಗೆಪ್ಪ ಮಾಲಗಾರ ಸ್ವಾಗತಿಸಿ, ನಿರೂಪಿಸಿದರು. ಗುರು ಹಿರಿಯರು ಉಪಸ್ಥಿತರಿದ್ದರು.

# 'ಕೈ' ಕಾರ್ಯಕರ್ತರಲ್ಲಿ ಗೊಂದಲ: ಹೈಕಮಾಂಡ್ ಪ್ರವೇಶಕ್ಕೆ ಪಟ್ಟು



**ರಬಕವಿ-ಬನಹಟ್ಟಿ:** ನೇಕಾರ ಪ್ರಧಾನ ಕ್ಷೇತ್ರವಾಗಿರುವ ತೇರದಾಳ ವಿಧಾನಸಭಾ ಕ್ಷೇತ್ರವು ನೂತನ ಕ್ಷೇತ್ರವಾದಾಗಿನಿಂದ ನಾಯಕತ್ವ ಕುರಿತಾಗಿ ರಾಷ್ಟ್ರೀಯ ಪಕ್ಷಗಳಾದ ಕಾಂಗ್ರೆಸ್-ಬಿಜೆಪಿಯಲ್ಲಿ ಗೊಂದಲದ ಗೂಡಾಗಿಯೇ ಈಗಲೂ ಮುನ್ನಡೆಯುತ್ತಿರುವದು ವಿಶೇಷ.

ಇದೀಗ ಕಾಂಗ್ರೆಸ್ ವಲಯದಲ್ಲಿ ನಾಯಕತ್ವದ ಗೊಂದಲದ ಮಧ್ಯೆ ಸಿಲುಕಿಕೊಂಡಿರುವ ಪಕ್ಷದ ಕಾರ್ಯಕರ್ತರಿಗೆ ಹೈಕಮಾಂಡ್ ಅಥವಾ ಜಿಲ್ಲಾ ನಾಯಕರು ಪ್ರವೇಶವಾಗಿ ಆಂತರಿಕ ಗೊಂದಲಗಳನ್ನು ನಿವಾರಿಸುವಲ್ಲಿ ಮುತುವರ್ಜಿ ವಹಿಸಬೇಕಾದ ಜವಾಬ್ದಾರಿಯಾಗಿದ್ದು, ವಿಳಂಬವಾದಲ್ಲಿ ಕಳೆದ ವಿಧಾನಸಭಾ ಚುನಾವಣೆಯ ಫಲಿತಾಂಶವನ್ನೇ ಬರುವ ಚುನಾವಣೆಯಲ್ಲಿ ಕಾಣುವಂತಾಗುತ್ತದೆಯೆಂದು ಪಕ್ಷದ ಯುವಘಟಕದ ಉಪಾಧ್ಯಕ್ಷ ಮಹ್ಮದ್ ಮಕಾನದಾರ ಬೇಸರ ವ್ಯಕ್ತಪಡಿಸಿದರು.

ಬನಹಟ್ಟಿಯಲ್ಲಿ ಪತ್ರಿಕೆಯೊಂದಿಗೆ ಮಾತನಾಡಿದ ಅವರು, ಈಗಾಗಲೇ ಕ್ಷೇತ್ರದ ಉಸ್ತುವಾರಿಯಾಗಿ ಪರಾಭವಗೊಂಡಿರುವ ಅಭ್ಯರ್ಥಿ ಸಿದ್ದು ಕೊಣ್ಣೂರ ನೇತೃತ್ವದಲ್ಲಿ ಪಕ್ಷ ಸಂಘಟನೆಯೊಂದಿಗೆ ಮುನ್ನಡೆಯಲಾಗುತ್ತಿದೆ. ಇದೀಗ ಮತ್ತೇ ಮೂರ್‍ನಾಲ್ಕು ಜನರಿಂದ ಪಕ್ಷದಲ್ಲಿಯೇ ಗೊಂದಲ ಸೃಷ್ಟಿ ಬಣಗಳಾಗಿ ಪರಿವರ್ತನೆಗಳಾಗುತ್ತಿರುವದು ಯುವ ಸಂಘಟನೆಗೆ ತೀವ್ರ ಮುಜುಗರದೊಂದಿಗೆ ಅಸಮಾಧಾನಕ್ಕೆ ಕಾರಣವಾಗಿದೆಯೆಂದು ಮಕಾನದಾರ ಸ್ಪಷ್ಟಪಡಿಸಿದರು.

ಯುವ ಘಟಕದ ಜಿಲ್ಲಾ ಉಪಾಧ್ಯಕ್ಷ ಸುನೀಲ ಬನಹಟ್ಟಿ ಮಾತನಾಡಿ, ಟಿಕೆಟ್ ಆಕಾಂಕ್ಷಿ ನೆಪದಲ್ಲಿ ಬಣ ಸೃಷ್ಟಿಸುತ್ತಿರುವ ಮುಖಂಡರು ಎಚ್ಚರದ ನಡೆ ಅನುಸರಿಸಬೇಕು.

ಈ ಕುರಿತಾಗಿ ಸಂಬಂಧಿಸಿದ ಮುಖಂಡರು ಆಗಮಿಸಿ ತೇರದಾಳ ಕ್ಷೇತ್ರದಲ್ಲಿನ ನೈಜ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಕಾರ್ಯಕರ್ತರ ಗೊಂದಲಕ್ಕೆ ತೆರೆ ಎಳೆಯಬೇಕಿದೆ.

ಇದೇ ಕಾರಣದಿಂದ ಈಗಾಗಲೇ ತೇರದಾಳ ಪಟ್ಟಣದ ಪ್ರಭಾವಿ ನಾಯಕ ಪ್ರವೀಣ ನಾಡಗೌಡ ಬೇರೆ ಪಕ್ಷಕ್ಕೆ ಸೇರ್ಪಡೆಗಂಡರು. ಇದೇ ರೀತಿ ಮುಂದುವರೆದಲ್ಲಿ, ಮತ್ತಷ್ಟು ಕ್ಷೇತ್ರದಲ್ಲಿನ ಪ್ರಭಾವಿ ನಾಯಕರುಗಳನ್ನು ಕಳೆದುಕೊಳ್ಳುವ ಭೀತಿ ಎದುರಾಗಿದೆ ಎಂದು ಸುನೀಲ ಬನಹಟ್ಟಿ ಬೇಸರ ವ್ಯಕ್ತಪಡಿಸಿದರು.

ಚಂದ್ರು ಇಮಡಿ, ಅನೀಲ ಬೀಳಗಿ, ಇಮ್ರಿಯಾಜ್ ಗೊಕಾಂವಿ, ಮುಜೇಫರ್ ಮುಲ್ಲಾ ಉಪಸ್ಥಿತರಿದ್ದರು.

## ಸ್ಥಳೀಯ ಸಮಸ್ಯೆ ಇತ್ಯರ್ಥ

ಕಾಂಗ್ರೆಸ್ ಪಕ್ಷದಲ್ಲಿ ಸ್ಥಳೀಯರಿಗೆ ಅಭ್ಯರ್ಥಿ ಸ್ಥಾನ ಕಲ್ಪಿಸಬೇಕೆಂಬ ಒಕ್ಕೊರಲಿನ ಕೂಗಿನ ಸಮಸ್ಯೆ ಇತ್ಯರ್ಥಗೊಂಡಿದೆ. ಮತ್ತೇ ಹೊರಗಿನವರಿಂದ ಕ್ಷೇತ್ರಕ್ಕೆ ಧಕ್ಕೆಯಾಗುವಲ್ಲಿ ಕಾರಣವಾಗಿದ್ದು, ಕ್ಷೇತ್ರಾದ್ಯಂತ ಪಕ್ಷ ಸಂಘಟನೆಗೆ ಸಾಮೂಹಿಕ ಬೆಂಬಲ ಹಾಗು ಹೋರಾಟ ನಡೆಸಬೇಕಿದೆ. ಅದನ್ನು ಬಿಟ್ಟು ಮನಬಂದಂತೆ ಕಾರ್ಯಕರ್ತರನ್ನು ಒಡೆದು ಆಳುವ ನೀತಿ ಪ್ರಯೋಗಿಸುತ್ತಿರುವ ಕಾಂಗ್ರೆಸ್ ಮುಖಂಡರ ವಿರುದ್ಧ ಯುವ ಘಟಕ ಕಿಡಿಕಾರಿತು.



# ರಾಜ್ಯಮಟ್ಟದ ಸ್ಪರ್ಧೆಗೆ ಆಯ್ಕೆ

**ಜಮಖಂಡಿ:** ಬಾಲಕರ ಸರಕಾರಿ ಪ.ಭಾ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಪುಟ್ಬಾಲ್ ಕ್ರೀಡೆಯಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದು ದಾವಣಗೆರೆಯಲ್ಲಿ ನಡೆಯುವ ರಾಜ್ಯಮಟ್ಟದ ಸ್ಪರ್ಧೆಗೆ ಆಯ್ಕೆಗೊಂಡಿದ್ದಾರೆ.

ತಂಡದ ನಾಯಕ ಆದಿತ್ಯ ಹೊಸಮನಿ ಮತ್ತು ಸಹ ಆಟಗಾರರು, ತಂಡದ ವ್ಯವಸ್ಥಾಪಕ ಕರಿಯಪ್ಪ ಪೂಜಾರಿ ಅವರನ್ನು ಶಾಸಕ ಜಗದೀಶ ಗುಡಗುಂಟಿ ಸನ್ಮಾನಿಸಿದರು. ವಿದ್ಯಾರ್ಥಿಗಳ ಸಾಧನೆಗೆ ಶಾಸಕ ಜಗದೀಶ ಗುಡಗುಂಟಿ, ಪ್ರಾಚರ‍್ಯ ಎಸ್.ಎಸ್.ಬಿರಾದಾರ, ಡಾ.ಎಲ್.ಕೆ.ಗವಿಮಠ, ಅಶೋಕ ರಾಮದುರ್ಗ, ಎಸ್.ಬಿ.ಜಿಂಜರವಾಡ, ಐ.ಎಸ್.ಹೆಬ್ಬಾಳ, ಸಿ.ಎಸ್.ಜನಗೊಂಡ,

# ನಾಳೆ ವಿಶ್ವ ಹಿರಿಯ ನಾಗರಿಕರ ದಿನಾಚರಣೆ

**ಗದಗ:** ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಗದಗ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಗದಗ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾ ಕಾನೂನು ಸೇವೆಗಳ ಪಾಧಿಕಾರ ಇವರುಗಳ ಸಹಯೋಗದಲ್ಲಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆ 2025 ಅಕ್ಟೋಬರ್ 1 ಬುದುವಾರ ಬೆಳಗ್ಗೆ 11:00 ಘಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜರಗುವುದು.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು ಶ್ರೀಮತಿ ಲಕ್ಷಿ ?ಮ ಹೆಬ್ಬಾಳಕರ್ ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಅಧ್ಯಕ್ಷತೆ ಹಾಗೂ ಕಾರ್ಯಕ್ರಮವನ್ನು ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಬಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರುಗಳಾದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕರಾದ ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಬಿ.ಅಸೂಟಿ, ಅವರುಗಳು ಆಗಮಿಸುವರು.

ಸರ್ಕಾರದ ಕಾರ್ಯದರ್ಶಿಗಳು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಕಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಡಾ.ಶಮ್ಲಾ ಇಕ್ಬಾಲ್, ಕರ್ನಾಟಕ ಯೋಜನೆ ಕಾರ್ಯಕ್ರಮ ಸಂಯೋಜನೆ ಮತು ಸಾಂಖ್ಯಿಕ ಇಲಾಖೆಯ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ರೋಹನ ಜಗದೀಶ, ಹಿರಿಯ ದಿವಾಣಿ ನ್ಯಾಯಾದೀಶರು ಹಾಗೂ ಸದಸ್ಯ ಕಾರ್ಯದಶಿಗಲು ಜಿಲ್ಲಾ ಸೇವಾ ಪ್ರಾಧಿಕಾರ ಗದಗ ಇವರು ವಿಶೇಷ ಆಹ್ವಾನಿತರು, ಉಪನಿರ್ದೇಶಕರು ಮಹಿಳಾ ಮತ್ತು ಬಮಕ್ಕಳ ಅಭಿವೃದ್ಧಿ ಇಲಾಖೆಯ ಪದ್ಮಾವತಿ ಗದಗ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಕೆ ಮಹಾಂತೇಶ ಸರ್ವರಿಗೂ ಸ್ವಾಗತ ಕೂರಿದ್ದಾರೆ.

# ರಾಜ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಗದಗ:** ಕರ್ನಾಟಕ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಮಕ್ಕಳ ದಿನಾಚರಣೆ-2025 ರ ಪ್ರಯುಕ್ತ ಮಕ್ಕಳು ತಮ್ಮ ಪ್ರಾಣದ ಹಂಗನ್ನು ತೊರೆದು ಹಾಗೂ ಸಮಯ ಪ್ರಜ್ಞೆಯಿಂದ ಇತರರ ಪ್ರಾಣದ ರಕ್ಷಣೆಗಾಗಿ ಧೈರ್ಯ ಸಾಹಸ ಪ್ರದರ್ಶಿಸಿದ 6 ರಿಂದ 18 ವರ್ಷದೊಳಗಿನ ಬಾಲಕರಿಗೆ "ಹೊಯ್ಸಳ" ಮತ್ತು ಬಾಲಕಿಯರಿಗೆ 'ಕೆಳದಿ ಚೆನ್ನಮ್ಮ" ಶೌರ್ಯ ಪ್ರಶಸ್ತಿಯನ್ನು ಪ್ರಧಾನ ಮಾಡಲಾಗುತ್ತದೆ.

ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳಿಗೆ ತಲಾ ರೂ. 10,000/-ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಒಳಗೊಂಡಿರುತ್ತದೆ. ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 05 ವರ್ಗಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿಗಳಿಗೆ ತಲಾ ರೂ.25,000/- ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಹಾಗೂ ಸಂಸ್ಥೆಗಳಿಗೆ ತಲಾ ರೂ.1,00,000/- ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರವನ್ನು ನೀಡಿ ಗೌರವಿಸಲಾಗುವುದು.

ಮಕ್ಕಳ ದಿನಾಚರಣೆ-2025ನೇ ಸಾಲಿನ ಪ್ರಶಸ್ತಿಗಾಗಿ ನಿಗದಿಪಡಿಸಿರುವ ಅರ್ಜಿ ನಮೂನೆಗಳನ್ನು ಉಪನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಗದಗ, ಕೊಠಡಿ ಸಂ.006, ಜಿಲ್ಲಾ ಆಡಳಿತ ಭವನ ಗದಗ (ದೂರವಾಣಿ ಸಂ.08372-220711) ಇಲ್ಲಿ ಕಛೇರಿ ಸಮಯದಲ್ಲಿ ದಿನಾಂಕ:10.10.2025 ರೊಳಗೆ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಅರ್ಜಿಗಳನ್ನು ಕನ್ನಡ ಭಾಷೆಯಲ್ಲಿಯೇ ಸಲ್ಲಿಸತಕ್ಕದ್ದು ಎಂದು ಉಪನಿರ್ದೇಶಕರು ತಿಳಿಸಿರುತ್ತಾರೆ.

# ಅನಧಿಕೃತ ಮಾವಿನಗಿಡಗಳು ವಶಕ್ಕೆ



**ಯರಗಟ್ಟಿ:** ತಾಲೂಕಿನ ಯರಗಣವಿ ಗ್ರಾಮದ ಸರ್ವೇ ನಂ.34ರ ಸರ್ಕಾರಿ ಜಮೀನನ್ನು ಗುಡುಮಕೇರಿ ಗ್ರಾಮದ ಲಕ್ಷ್ಮಣ ಮಹದೇವಪ್ಪ ನಾಯ್ಕಪ್ಪಗೋಳ ಎಂಬಾತನು ಅನಧಿಕೃತವಾಗಿ ಸಾಗು ಮಾಡಿ ಮಾವಿನಗಿಡಗಳನ್ನು ಹಚ್ಚುತ್ತಿರುವದನ್ನು ಗಮನಿಸಿದ ತಹಸೀಲ್ದಾರ ಎಮ್. ವ್ಹಿ. ಗುಂಡಪ್ಪಗೋಳ ತಕ್ಷಣ ಸಿಬ್ಬಂದಿಗಳೊಂದಿಗೆ ಸ್ಥಳಕ್ಕೆ ಹೋಗಿ ಮಾವಿನ ಅಗಿಗಳನ್ನು ವಶಪಡಿಸಿಕೊಂಡು ಅನಧಿಕೃತವಾಗಿ ಸಾಗು ಮಾಡುತ್ತಿರುವದನ್ನು ತೆರವುಗೊಳಿಸಿದರು.

ಈ ವೇಳೆ ಕಂದಾಯ ನಿರೀಕ್ಷಕ ವಾಯ್ ಎಫ್ ಮುರ್ತೆಣ್ಣವರ, ಗ್ರಾಮ ಆಡಳಿತಾಧಿಕಾರಿ ಯಲ್ಲಪ್ಪ ಬಾಂಗಿ ಸೇರಿದಂತೆ ಗ್ರಾಮ ಸಹಾಯಕರು ಇದ್ದರು.

## ನೂತನ ಮಾದರಿ ದಾಸ್ತಾನುಗಳ ಮಾರಾಟ

**ಹುಬ್ಬಳ್ಳಿ:** ಇಲ್ಲಿನ ಐಟಿ ಪಾರ್ಕ್‌ನಲ್ಲಿರುವ ಲಿಡಕರ್ ಮಾರಾಟ ಮಳಿಗೆಯಲ್ಲಿ ಎಲ್ಲ ದಾಸ್ತಾನುಗಳ ಮೇಲೆ ಶೇ.20 ರಷ್ಟು ಆಕರ್ಷಿತ ರಿಯಾಯಿತಿ ಬೆಲೆಗಳಲ್ಲಿ ಮಾರಾಟ ಮಾಡಲಾಗುತ್ತಿದೆ.

ಒಂದೇ ಸೂರಿನಡಿ ನೂತನ ಮಾದರಿಯ ಪುರುಷ ಮತ್ತು ಮಹಿಳೆಯರ ಪಾದರಕ್ಷೆ, ಶೂ, ಬೆಲ್ಟ, ಪರ್ಸ್, ಬ್ಯಾಗ್‌ಗಳು ಮತ್ತು ಶಾಲಾ ಬೂಟು ಬ್ಯಾಗ್‌ಗಳು ಸೆಪ್ಟೆಂಬರ್ 29 ರಿಂದ ಅಕ್ಟೋಬರ್ 18 ರವರೆಗೆ ರಿಯಾಯಿತಿ ದರದಲ್ಲಿ ದೊರೆಯುತ್ತವೆ. ಗ್ರಾಹಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಲಿಡಕರ್ ಮಾರಾಟ ಮಳಿಗೆಯ ವ್ಯವಸ್ಥಾಪಕರಾದ ವಿ.ಪಿ.ಮೊರಬ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಅ.2ರಂದು ಮಾಂಸದ ಅಂಗಡಿ ಬಂದ್

**ಹುಬ್ಬಳ್ಳಿ:** ಅಕ್ಟೋಬರ್ 2 ರಂದು ಗಾಂಧಿ ಜಯಂತಿ ಇರುವುದರಿಂದ ಪಾಲಿಕೆಯ ಹುಬ್ಬಳ್ಳಿ ಮತ್ತು ಧಾರವಾಡ ವಧಾಲಯಗಳು ಹಾಗೂ ಎಲ್ಲ ಮಾಂಸದ ಅಂಗಡಿಗಳನ್ನು ಬಂದ್ ಮಾಡಲು ಸೂಚಿಸಲಾಗಿದೆ. ಮಾಂಸದ ಅಂಗಡಿಗಳನ್ನು ತೆರೆದಿದ್ದಲ್ಲಿ ಪಾಲಿಕೆಯಿಂದ ಅವರ ಲೈಸೆನ್ಸ್ ರದ್ದು ಪಡಿಸಿ, ಸರ್ಕಾರದ ನಿಯಮಗಳನ್ವಯ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಮುಖ್ಯ ಪಶು ವೈದ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕುಟುಂಬ ಸದಸ್ಯರು ದೇಹತ್ಯಾಗಕ್ಕೆ ಮುಂದಾಗಿದ್ದ ಪ್ರಕರಣ

# ಮೋಕ್ಷ ಬಯಸಿದವರು ಮರಳಿ ಗೂಡು ಸೇರಿದರು

ವರದಿ ಸಿದ್ದಯ್ಯ ಹಿರೇಮಠ.

**ಅಥಣಿ:** ತಮಗೆ ದೇವರು ಪ್ರತ್ಯಕ್ಷವಾಗಿದ್ದು, ತಮ್ಮನ್ನು ಕೈಲಾಸಕ್ಕೆ ಕರೆದುಕೊಂಡು ಹೋಗುತ್ತಾನೆ. ಅಂದು ನಾವು ದೇಹತ್ಯಾಗ ಮಾಡುವುದಾಗಿ ನಿರ್ಧರಿಸಿದ್ದ ಕುಟುಂಬವೊಂದು ಅದೃಷ್ಟವಶಾತ್ ಮರಳಿ ಗೂಡು ಸೇರಿದೆ.

ಹೌದು, ರಾಮ್‌ಪಾಲ್ ಮಹಾರಾಜರ ಪರಮ ಶಿಷ್ಯರು ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ಅನಂತಪೂರ ಗ್ರಾಮದ ಹೊರವಲಯದಲ್ಲಿ ವಾಸವಾಗಿರುವ ಈರಕರ ಕುಟುಂಬದ ಸದಸ್ಯರು ಸುರಕ್ಷಿತವಾಗಿ ಮನೆಗೆ ಮರಳಿದ್ದಾರೆ.

ರಾಮ್‌ಪಾಲ್ ಮಹಾರಾಜರ ಶಿಷ್ಯರಾಗಿ ಆಧ್ಯಾತ್ಮಕದತ್ತ ವಾಲಿದ್ದ ಈ ಕುಟುಂಬ, ಬಾಬಾ ಪ್ರತಿನಿತ್ಯ ಪ್ರತ್ಯಕ್ಷನಾಗಿ ಮಾತನಾಡುತ್ತಾನೆ. ಆತ ಸೆ.8ರಂದು ನಮ್ಮನ್ನು ಕೈಲಾಸಕ್ಕೆ ಕರೆದುಕೊಂಡು ಹೋಗುತ್ತಾನೆ. ಅಂದು ನಾವು ದೇಹತ್ಯಾಗ ಮಾಡುವುದಾಗಿ ಮಾಧ್ಯಮಗಳ ಮುಂದೆ ಹೇಳಿಕೊಂಡಾಗ ಈ ಪ್ರಕರಣ ಬೆಳಕಿಗೆ ಬಂದಿತ್ತು.

ಜಿಲ್ಲಾ ಹಾಗೂ ತಾಲೂಕಾ ಆಡಳಿತ, ಮಠಾಧೀಶರು, ಜನಪ್ರತಿನಿಧಿಗಳು, ಸ್ವಯಂಸೇವಾ ಸಂಘಗಳು, ಪತ್ರಕರ್ತರು ಹಲವಾರು ಬಾರಿ ಮನವೊಲಿಸಲು ಪ್ರಯತ್ನಿಸಿದಾಗ ಆ ಸಂದರ್ಭದಲ್ಲಿ ಒಪ್ಪಿಕೊಂಡು ಮತ್ತೆ ಅವರು ದೇಹತ್ಯಾಗದ ಬಗ್ಗೆ ಆಲೋಚನೆ ಮಾಡಿದ್ದರು. ಈ ವಿಚಾರ ಗಮನಿಸಿದ ಜಿಲ್ಲಿಡಳಿತ ವೈದ್ಯರು, ಪೊಲೀಸರ ಮುಖಾಂತರ ಅವರನ್ನು ಚಿಕಿತ್ಸೆಗಾಗಿ ಧಾರವಾಡದ ನಿಮಾನ್ಸ್ ಗೆ ಸೇರಿಸಿದ್ದರು. ಈಗ ಅವರು ಗುಣಮುಖರಾಗಿದ್ದು, ಮರಳಿದ್ದಾರಲ್ಲದೇ, ಎಂದಿನಂತೆ ನಿತ್ಯದ ಕೃಷಿ ಕಾಯಕದಲ್ಲಿ ತೊಡಗಿರುನುದು ವಿಶೇಷ.



## ಮಾನವೀಯತೆಗೆ ಮೆಚ್ಚುಗೆ

ಸೆ.8ರಂದು ದೇಹತ್ಯಾಗಕ್ಕೆ ನಿರ್ದರಿಸಿದ್ದ ತುಕಾರಾಮ ಈರಕರ, ಸೇರಿದಂತೆ ನಾಲ್ವರು ಚಿಕಿತ್ಸೆ ಪಡೆದು ಈಗ ಸ್ವ ಗ್ರಾಮ ಅನಂತಪೂರ ಗ್ರಾಮಕ್ಕೆ ಆಗಮಿಸಿದ್ದು, ತಮ್ಮ ದೈನಂದಿನ ಕಾಯಕದಲ್ಲಿ ನಿರತರಾಗಿದ್ದಾರೆ. ಇವರಿಗೆ ಕಂದಾಯ, ಆರೋಗ್ಯ, ಹಾಗೂ ಪೊಲೀಸ್ ಇಲಾಖೆಯವರು ಬಂದು ಮಾನವೀಯತೆ ಕಾರ್ಯಕ್ಕೆ ಜಿಲ್ಲೆಯಾದ್ಯಂತ ಅಭಿನಂಧನೆಗಳು ವ್ಯಕ್ತವಾಗಿವೆ.

**ಏನಾಗಿತ್ತು....:** ಅಗಷ್ಟ ತಿಂಗಳಿನಿಂದ ಸಪ್ಟೆಂಬರ 8 ರವರೆಗೆ ರಾಮ್‌ಪಾಲ್ ಮಹಾರಾಜರ ಆಧ್ಯಾತ್ಮಿಕದಲ್ಲಿ ಮುಳುಗಿ ಪ್ರತಿನಿತ್ಯ ತಮ್ಮ ಕೃಷಿ ಕಾಯಕವನ್ನು ಬಿಟ್ಟು ಕೇವಲ ಪೂಜೆ, ಪ್ರಾರ್ಥನೆಯಲ್ಲಿ ತೊಡಗಿದ್ದ ಈ ಕುಟುಂಬದವರು ಇದರಿಂದ ಮೋಕ್ಷ ಪ್ರಾಪ್ರತಿಯಾಗುತ್ತದೆ ಎಂಬ ಮೂಢನಂಬಿಕೆ ಹೊಂದಿದ್ದರು. ಈ ಕುರಿತು ತಾಲೂಕಾ ಆಡಳಿತದ ಗಮನಕ್ಕೆ ತಂದಾಗ ತುಕಾರಾಮ ಈರಕರ, ಮಗ ರಮೇಶ ಈರಕರ, ಪತ್ನಿ ಸಾವಿತ್ರಿ, ಸೊಸೆ ವೈಷ್ಣವಿ ಮಗಳು ಮಾಯಾ ಅವರನ್ನು ಹಲವಾರು ಮಠಾಧೀಶರು, ಉಪವಿಭಾಗಾಧಿಕಾರಿ ಸುಭಾಷ ಸಂಪಗಾಂವಿ, ಡಿವೈಎಸ್‌ಪಿ ಪ್ರಶಾಂತ ಮುನ್ನೊಳ್ಳಿ, ತಹಸೀಲ್ದಾರ ಸಿದರಾಯ ಭೋಸಗಿ, ವೈದ್ಯಾಧಿಕಾರಿ ಡಾ ಬಸಗೌಡ ಕಾಗೆ, ಸಿಪಿಐ ಸಂತೋಷ ಹಳ್ಳೂರ, ಪಿಎಸ್‌ಐ ಗಿರಮಲ್ಲಪ್ಪ ಉಪ್ಪಾರ, ಮಾಧ್ಯಮದವರು, ವಕೀಲರ ಸಂಘ ಸೇರಿದಂತೆ ಹಲವರು ಸೇರಿಕೊಂಡು ಆ ಕುಟುಂಬದವರನ್ನು ಭೇಟ್ಟಿಯಾಗಿ ಮನಸ್ಸನ್ನು ಪರಿವರ್ತನೆ ಮಾಡಲು ಪ್ರಯತ್ನಿಸಿದರಾದರು ಫಲಕಾರಿಯಾಗಲಿಲ್ಲ.

ಅವರ ಪ್ರಾಣ ಉಳಿಸಲು ಸ.7 ರಂದು ಆರೋಗ್ಯ,ಕಂದಾಯ ಹಾಗೂ ಪೊಲೀಸ್ ಇಲಾಖೆ ಮೂಲಕ ಬೆಳಗಾವಿಯ ಬೀಮ್ಸ್ ಆಸ್ಪತ್ರೆಗೆ ದಾಖಲಿಸಿದರು, ನಂತರ ಧಾರವಾಡದ ನಿಮಾನ್ಸ್ ಕಳುಹಿಸಿಕೊಡಲಾಯಿತು. ಅಲ್ಲಿ ಚಿಕಿತ್ಸೆ ನೀಡಿ ಗುಣಮುಖರನ್ನಾಗಿ ಮಾಡಿ ಮರಳಿ ಅನಂತಪೂರ ಗ್ರಾಮಕ್ಕೆ ತಲುಪಿಸಿದ್ದಾರೆ.



ಈರಕರ ಕುಟುಂಬ ಮೌಢ್ಯತೆಯಿಂದ ಹೊರಬಂದಿದ್ದಾರೆ. ಇಲ್ಲದಿದ್ದರೆ ಅವರು ಪ್ರಾಣ ಕಳೆದುಕೊಳ್ಳುವ ಸ್ಥಿತಿ ಎದುರಾಗಿತ್ತು. ಮರಳಿ ಗ್ರಾಮಕ್ಕೆ ಬಂದು ಮೂರು ದಿನಗಳು ಗತಿಸಿವೆ. ಅವರು ಆರೋಗ್ಯವಾಗಿದ್ದು, ತಮ್ಮ ದೈನಂದಿಕ ಕೃಷಿ ಮತ್ತಿತರ ಕಾಯಕದಲ್ಲಿ ತೊಡಗಿದ್ದಾರೆ. ಇದು ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ.

**ಪ್ರಶಾಂತ ಮುನ್ನೊಳ್ಳಿ**
**ಡಿವೈಎಸ್‌ಪಿ ಅಥಣಿ**

## ಅಂಗನವಾಡಿ ಹೊಸ ಕಟ್ಟಡ ನಿರ್ಮಾಣಕ್ಕೆ ಭೂಮಿಪೂಜೆ



**ಯರಗಟ್ಟಿ:** ಸಮೀಪದ ಮೆಳ್ಳಿಕೇರಿ ತೋಟದ ಅಂಗನವಾಡಿ ಕೇಂದ್ರದ ಹೊಸ ಕಟ್ಟಡ ನಿರ್ಮಾಣಕ್ಕೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಾಗೂ ನರೇಗಾ ಯೋಜನೆಯಡಿಯಲ್ಲಿ ಸುಮಾರು 20 ಲಕ್ಷ ರೂಪಾಯಿ ವೆಚ್ಚದಡಿಯಲ್ಲಿ ಕಟ್ಟಡದ ಭೂಮಿ ಪೂಜೆಯನ್ನು ನೆರವೇರಿಸಿ ಮಾತನಾಡಿದ ಬೇಮೂಲ್ ನಿರ್ದೇಶಕ ಶಂಕರ ಇಟ್ನಾಳ " ನೂತನ ಅಂಗನವಾಡಿ ಕಟ್ಟಡದಿಂದ ಗಂಡು ಮಕ್ಕಳ ಮತ್ತು ಹೆಣ್ಣುಮಕ್ಕಳ ಆರೈಕೆ, ಪೋಷಣಾ ಸೇವೆಗಳು, ಪ್ರಾಥಮಿಕ ಶಿಕ್ಷಣ ಮತ್ತು ಆರೋಗ್ಯ ಪರಿಪಾಲನೆ ಸುಗಮವಾಗಲಿದೆ. ಇದು ಸ್ಥಳೀಯ ಮಕ್ಕಳ ಭವಿಷ್ಯವನ್ನು ಮತ್ತಷ್ಟು ಉತ್ತಮಗೊಳಿಸಲು ನೆರವಾಗಲಿದೆ.

ಮಕ್ಕಳ ಕಲಿಕೆಗೆ ಪೂರಕ ಶಿಕ್ಷಣ ನೀಡುವಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಹೆಚ್ಚು ಶ್ರಮವಹಿಸಬೇಕು ಎಂದು ಸಲಹೆ ನೀಡಿದರು. ಸವದತ್ತಿ ಸಿಡಿಪಿಓ ಅಮೃತ ಸಾಣಿಕೊಪ್ಪ,ಇಂಜಿನಿಯರ್ ಮಂಜುನಾಥ ಅಗೀಸಿಮನಿ,ಮೇಲ್ವಿಚಾರಕಿ ಮಾಯವ್ವ ಮುಗಳಿಹಾಳ, ಗ್ರಾ. ಪ. ಸದಸ್ಯ ಶಿವಪ್ಪ ಇಟ್ನಾಳ, ಗ್ರಾ. ಯೋ. ಅಧ್ಯಕ್ಷ ಗೋಪಾಲ ದಳವಾಯಿ, ವಿಠ್ಠಲ ತೋರಣಗಟ್ಟಿ, ಯಲ್ಲಪ್ಪ ಭಾವಿಕಟ್ಟಿ, ಮಣಿಕಂಠ ಬಡಿಗೇರ, ಲಕ್ಕಪ್ಪ ಬ್ಯಾಕೋಡ, ಲಕ್ಕಪ್ಪ ಕೊರಕೊಪ್ಪ, ಸ್ಥಳೀಯ ಮುಖಂಡರುಗಳು, ಅಂಗನವಾಡಿ ಕಾರ್ಯಕರ್ತರು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

### ಸಿಂದಗಿ-ಇಂಡಿ ತಾಲೂಕಿನ ಪ್ರವಾಹಪೀಡಿತ ಸ್ಥಳಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಸಚಿವ ಎಂ.ಬಿ.ಪಾಟೀಲ್ ಭೇಟಿ

## ಭಯಪಡುವ ಅವಶ್ಯಕತೆ ಇಲ್ಲ, ಜನರ ಸುರಕ್ಷತೆಯೇ ನಮ್ಮ ಆದ್ಯತೆ

**ವಿಜಯಪುರ:** ಯಾರೂ ಭಯಪಡುವ ಅವಶ್ಯಕತೆ ಇಲ್ಲ, ಸರ್ಕಾರ-ಜಿಲ್ಲಾಡಳಿತ ನಿಮ್ಮೊಂದಿಗಿದೆ. ನಿಮ್ಮ ಸಮಸ್ಯೆಗಳಿಗೆ ಸದಾ ಸ್ಪಂದಿಸಿ, ಪರಿಹಾರ ಕಲ್ಪಿಸಲಿದೆ. ಪ್ರವಾಹದಿಂದ ಹಾನಿಗೊಳಗಾದ ಬೆಳೆ ನಾಶ- ಮನೆ ಹಾನಿಯನ್ನು ಸಂಪೂರ್ಣವಾಗಿ-ಸಮಗ್ರವಾಗಿ ಸಮೀಕ್ಷೆ ನಡೆಸಿ ಪರಿಹಾರ ಒದಗಿಸಲು ಕ್ರಮ ವಹಿಸಲಾಗುವುದು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಂ.ಬಿ.ಪಾಟೀಲ ತಿಳಿಸಿದರು.

ಪ್ರವಾಹ ಪೀಡಿತ ಜಿಲ್ಲೆಯ ಸಿಂದಗಿ ಹಾಗೂ ಇಂಡಿ ತಾಲೂಕಿನ ವಿವಿಧ ಗ್ರಾಮಗಳಿಗೆ ಭಾನುವಾರ ಭೇಟಿ ನೀಡಿ ಪರಿಶೀಲನೆ ನಡೆಸಿದ ಸಚಿವರು, ಪ್ರವಾಹಕ್ಕೊಳಗಾಗಿ ಕಾಳಜಿ ಕೇಂದ್ರಗಳಲ್ಲಿ ಆಶ್ರಯ ಪಡೆದ ಸಂತ್ರಸ್ತರ ಅಹವಾಲುಗಳನ್ನು ಆಲಿಸಿದರು.

ದೇವರನಾವದಗಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಕುಮಸಗಿ ಗ್ರಾಮದ ಸರಕಾರಿ ಪ್ರಾಥಮಿಕ ಶಾಲೆಯಲ್ಲಿ ತೆರೆಯಲಾದ ಕಾಳಜಿ ಕೇಂದ್ರಕ್ಕೆ ಭೇಟಿ ನೀಡಿ ಸಚಿವರು, ಕಾಳಜಿ ಕೇಂದ್ರಗಳಲ್ಲಿ ಕಲ್ಪಿಸಿರುವ ಸೌಲಭ್ಯಗಳ ಕುರಿತು ಪರಿಶೀಲನೆ ನಡೆಸಿ, ಅಲ್ಲಿನ ಸಂತ್ರಸ್ಥರೊಂದಿಗೆ ಮಾತನಾಡಿ, ಕಾಳಜಿ ಕೇಂದ್ರಗಳಲ್ಲಿ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗಿದೆ.ಯಾರು ಸಹ ಭಯ ಪಡುವ ಅವಶ್ಯಕತೆ ಇಲ್ಲ. ಜಿಲ್ಲಾಡಳಿತ ನಿಮ್ಮ ಜೊತೆಗಿದ್ದು, ಪ್ರವಾಹ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಜಿಲ್ಲಾಡಳಿತ ಸನ್ನದ್ಧವಾಗಿದ್ದು, ಯಾವದೇ ಜನ ಜಾನುವಾರಗಳ ಪ್ರಾಣ ಹಾನಿಯಾಗದಂತೆ ಎಲ್ಲಾ ರೀತಿಯ ಸಕಲ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು.





ಪ್ರವಾಹಕ್ಕೊಳಗಾಗಿ ಹಾನಿಗೊಳಗಾದ ಕೃಷಿ, ತೋಟಗಾರಿಕೆ ಸೇರಿದಂತೆ ಬೆಳೆಗಳ ಸಮಗ್ರ ಸಮೀಕ್ಷೆಗೆ ಈಗಾಗಲೇ ಕೃಷಿ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಮನೆ ಹಾನಿಗೊಳಗಾದವರನ್ನು ಸೂಕ್ತವಾದ ಪರಿಹಾರ ಹಾಗೂ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರ ಮಾಡಲು ಕ್ಷೇತ್ರದ ಶಾಸಕರ ಸಹಯೋಗದೊಂದಿಗೆ ಕ್ರಮ ವಹಿಸಲಾಗುವುದು ಎಂದು ಅವರು ಹೇಳಿದರು.

ಉಜನಿ ಡ್ಯಾಂನಿಂದ ಸೀನಾ ನದಿಯ ಮೂರುವರೆ ಲಕ್ಷ ಕ್ಯೂಸೆಕ್ ನೀರು ಹರಿಬಿಡುವುದರಿಂದ ಸ್ವಾಭಾವಿಕವಾಗಿ ಜಿಲ್ಲೆಯ ಇಂಡಿ ಹಾಗೂ ಸಿಂದಗಿ ತಾಲೂಕಿನ ವಿವಿಧ ಭಾಗದಲ್ಲಿ ತೀವ್ರವಾದ ಪ್ರವಾಹ ಪರಿಸ್ಥಿತಿ ಎದುರಾಗಿದೆ. ಕುಮಸಿಯ 100 ಮನೆಗಳು ಸಂಪೂರ್ಣವಾಗಿ ನೀರಿನಲ್ಲಿ ಮುಳುಗಿದ್ದು, ಈ ಕುಟುಂಬಗಳಿಗೆ ಕಾಳಜಿ ಕೇಂದ್ರಗಳಲ್ಲಿ ಆಶ್ರಯ ನೀಡಿ, ಊಟೋಪಚಾರ, ಔಷಧ ವ್ಯವಸ್ಥೆ ಸೇರಿದಂತೆ ಎಲ್ಲ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗಿದೆ. ಈ ಕುಟುಂಬಗಳಿಗೆ ಶಾಶ್ವತ ಪರಿಹಾರ ದೊರಕಿಸುವ ನಿಟ್ಟಿನಲ್ಲಿ ಸರ್ಕಾರದಿಂದ ಅನುಮತಿ ಪಡೆದು, ಬೇರೆ ಜಾಗವನ್ನು ನೇರವಾಗಿ ಖರೀದಿಸಿ ಈ ಕುಟುಂಬಗಳಿಗೆ ನೀಡಿ ಸ್ಥಳಾಂತರ ಮಾಡಲು ಕ್ರಮ ವಹಿಸಲಾಗುವುದು. ಜನರ ನೋವುಗಳಿಗೆ ಸ್ಪಂದಿಸಲಾಗುವುದು. ನಾನೂ ಕೂಡ ಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರನ್ನು ಈ ಕುರಿತು ಮನವಿ ಮಾಡಿಕೊಳ್ಳುತ್ತೇನೆ ಎಂದು ಅವರು ಹೇಳಿದರು.

ಪ್ರವಾಹ ಪರಿಸ್ಥಿತಿಯಿಂದ ಈ ಭಾಗದ ಹತ್ತಿ, ಈರುಳ್ಳಿ, ತೊಗರಿ ಬೆಳೆ ಸಂಪೂರ್ಣವಾಗಿ ನಾಶವಾಗಿದೆ. ಈ ಭಾಗದಲ್ಲಿ ಕಬ್ಬು ಬೆಳೆ ಕೂಡ ಶೇ.50 ರಷ್ಟು ನಾಶವಾಗಿದೆ. ಕ್ಷೇತ್ರದ ಶಾಸಕರಾದಿಯಾಗಿ, ಜಿಲ್ಲಾಡಳಿತ ಜನರ ಕಷ್ಟ-ನೋವುಗಳಿಗೆ ಸ್ಪಂದಿಸಿ, ಕಾಳಜಿಪೂರ್ವಕವಾಗಿ ಕಾರ್ಯನಿರ್ವಹಿಸುತ್ತಿದೆ. ಮುಖ್ಯಮಂತ್ರಿಗಳು ಸಹ ಶೀಘ್ರದಲ್ಲೇ ಪ್ರವಾಹಕ್ಕೊಳಗಾಗಿ ಹಾನಿಗೊಳಗಾದ ಪ್ರದೇಶಗಳನ್ನು ವೈಮಾನಿಕ ಸಮೀಕ್ಷೆ ನಡೆಸಲಿದ್ದಾರೆ ಎಂದು ಅವರು ಹೇಳಿದರು.

ಜಿಲ್ಲೆಯ ಆಲಮೇಲ ತಾಲೂಕಿನ ದೇವರ ನಾವದಗಿ ಗ್ರಾಮದ ರೈತ ಬಸಪ್ಪ ನಿಂಗಪ್ಪ ಪೂಜಾರಿ ಅವರ ಜಮೀನಿನಲ್ಲಿ ಈರುಳ್ಳಿ ಬೆಳೆ ಹಾನಿ ವೀಕ್ಷಣೆ, ಜಿಲ್ಲೆಯ ಆಲಮೇಲ ತಾಲೂಕಿನ ದೇವರ ನಾವದಗಿ ಗ್ರಾಮದ ಶರಣಪ್ಪ ಯರಗಲ ಅವರ ಕಬ್ಬು ಹಾನಿ ಹಾಗೂ ದೇವಣಗಾಂವ ಗ್ರಾಮದ ಬಳಿ ಹೊಲದಲ್ಲಿ ನಿಂತಿರುವ ನೀರನ್ನು ಸಚಿವರು ವೀಕ್ಷಣೆ ಮಾಡಿದರು.

ಜಿಲ್ಲೆಯ ದೇವಣಗಾಂವ ಗ್ರಾಮದ ಬಳಿ ಸೇತುವೆಗೆ ಭೇಟಿ ನೀಡಿ, ವೀಕ್ಷಿಸಿದ ಸಚಿವರು, ನಂತರ. ದೇವಣಗಾಂವದ ಸರ್ಕಾರಿ ಶಾಲೆಯಲ್ಲಿ ಸ್ಥಾಪಿಸಿದ. ಕಾಳಜಿ ಕೇಂದ್ರಕ್ಕೆ ಭೇಟಿ ನೀಡಿ, ಸಂತ್ರಸ್ತರ ಅಹವಾಲು ಆಲಿಸಿದರು.

ಈ ಸಂದರ್ಭದಲ್ಲಿ ಶಾಸಕರಾದ ಅಶೋಕ ಮನಗೂಳಿ, ಜಿಲ್ಲಾಧಿಕಾರಿ ಡಾ.ಆನಂದ.ಕೆ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಲಕ್ಷ್ಮಣ ನಿಂಬರಗಿ ಸೇರಿದಂತೆ ವಿವಿಧ ಅಧಿಕಾರಿಗಳು ಅಧಿಕಾರಿಗಳು ಉಪಸ್ಥಿತರಿದ್ದರು.

## ಅಭಿನವಶ್ರೀ ಸೌಹಾರ್ದ ಸಹಕಾರಿ ಸಂಘದ ವಾರ್ಷಿಕ ಮಹಾಸಭೆ

**ಬಸವನಬಾಗೇವಾಡಿ:** ಮನಗೂಳಿ ಪಟ್ಟಣದ ಯುವಕರು ಕೂಡಿಕೊಂಡು ಸಂಘ ರಚನೆ ಮಾಡಿ ಮನಗೂಳಿ ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಜನರಿಗೆ ಆರ್ಥಿಕ ಸಹಾಯ ಮಾಡುವ ಉದ್ದೇಶದಿಂದ ಸೌಹಾರ್ದ ಸಂಘ ಆರಂಭಿಸಿರುವದು ಶ್ಲಾಘನೀಯ ಎಂದು ಮನಗೂಳಿ ಹಿರೇಮಠದ ಅಭಿನವ ಸಂಗನಬಸವ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ತಾಲೂಕಿನ ಮನಗೂಳಿ ಸಂಸ್ಥಾನ ಹಿರೇಮಠದಲ್ಲಿ ಭಾನುವಾರ ಜರುಗಿದ ಅಭಿನವಶ್ರೀ ಸೌಹಾರ್ದ ಸಹಕಾರಿ ಸಂಘ ನಿಯಮಿತ ಮೂರನೇ ವಾರ್ಷಿಕ ಮಹಾಸಭೆಯ ಸಾನಿಧ್ಯ ವಹಿಸಿ ಉದ್ಘಾಟಿಸಿ ಮಾತನಾಡಿದ ಅವರು, ಈ ಸೌಹಾರ್ದದಿಂದ ವ್ಯಾಪಾರ ಮಾಡುವ ಜನರಿಗೆ ಹಾಗೂ ಹಣದ ಅವಶ್ಯಕತೆ ಇರುವ ಮಧ್ಯಮ ವರ್ಗದ ವ್ಯಾಪಾರಸ್ಥರಿಗೆ ಅನುಕೂಲವಾಗುವ ದೃಷ್ಟಿಯಿಂದ ತಮ್ಮಲ್ಲಿ ಶೇರನ್ನು ಮಾಡಿಕೊಂಡು ಕಡಿಮೆ ಬಡ್ಡಿ ಯಲ್ಲಿ ಸಾಲವನ್ನು ನೀಡಿ ಅವರ ಉದ್ಯಮವನ್ನು ಬೆಳೆಸುವ ಇಚ್ಛಾಶಕ್ತಿ ಹೊಂದಿರುವದು ಒಳ್ಳೆಯ ಬೆಳವಣಿಗೆ. ಕೇವಲ ಮೂರು ವರ್ಷದಲ್ಲಿ ಈ ಸಂಘ ಬೆಳೆಯದಿದ್ದರೂ ಸಂಘದ ಶೇರುದಾರರು ಬೆಳೆಯಬೇಕು ಎಂಬ ದೃಷ್ಟಿಯಿಂದ ಇಷ್ಟು ಸಾಧನೆಯನ್ನು ಮಾಡಿದ್ದಾರೆ.





ಮುಂದಿನ ದಿನಮಾನಗಳಲ್ಲಿ ಇನ್ನೂ ಹೆಚ್ಚಿಗೆ ಈ ಸಂಘದಿಂದ ಎಲ್ಲ ವ್ಯಾಪಾರಸ್ಥರಿಗೆ ಹಾಗೂ ರೈತರಿಗೆ ಸಹಾಯ ಸೌಲತ್ತುಗಳು ದೊರೆಯುವಂತಾಗಲೆಂದ ಅವರು, ಸಂಘ ಇನ್ನೂ ಉನ್ನತ ಮಟ್ಟದಲ್ಲಿ ಬೆಳೆಯಲಿ ಎಂದು ಆಶೀರ್ವಚನ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಅಭಿನವಶ್ರೀ ಸೌಹಾರ್ದ ಸಹಕಾರಿ ಸಂಘದ ಅಧ್ಯಕ್ಷ ಮಹಾಂತೇಶ ಅಮರನಾಥ ಅವರು ಸಂಘದ ಕುರಿತು ಮಾತನಾಡಿದರು.

ಸಭೆಯಲ್ಲಿ ಸಂಘದ ಉಪಾಧ್ಯಕ್ಷ ಮಲ್ಲಿಕಾರ್ಜುನ ಹಣಮಂತ ಬೀರಲದಿನ್ನಿ ಮಾತನಾಡಿ,ಇನ್ನು ಹೆಚ್ಚಿನ ಮಟ್ಟದಲ್ಲಿ ಸದಸ್ಯರು ಸಂಘದ ಮೇಲೆ ವಿಶ್ವಾಸವನ್ನು ಇಡಬೇಕೆಂದರು.

ಸಂಘದ ವ್ಯವಸ್ಥಾಪಕ ಬಸವರಾಜ ಲೆಸಪ್ಪಗೊಳ ಇವರು ಮೂರನೇ ವಾರ್ಷಿಕ ಮಹಾಸಭೆಯ ವರದಿಯನ್ನು ಮಂಡನೆ ಮಾಡಿದರು.

ಸಭೆಯಲ್ಲಿ ಸಂಘದ ನಿರ್ದೇಶಕರಾದ ಪ್ರಕಾಶ ಶಿವಪ್ಪ ಪತಂಗಿ, ಅಜಿತ್ ಗೋಟೆ, ಸಂತೋಷ ಮುತ್ತಪ್ಪನವರ, ಸೋಮನಗೌಡ ಬಿರಾದಾರ, ಶ್ರೀಶೈಲ ಮನಗೂಳಿ, ಅಜಯ್ ಮಬೂರ್ಕರ, ಸಾಜಿದ ನದಾಫ, ಸಂಘದ ಸಿಬ್ಬಂದಿ ಜ್ಯೋತಿ ಅಶೋಕ ಉಪ್ಪಾರ, ಬಸವರಾಜ ಅನಂತಪುರ,ಆದಿತ್ಯ ಗೂಗಿಹಾಳ, ಸಂಘದ ಸದಸ್ಯರಾದ ರಮೇಶ ಔರಸಂಗ, ಸಂತೋಷ ಬಾವಿಕಟ್ಟಿ, ಶಿವು ಬಬಲೇಶ್ವರ, ವಿರುಪಾಕ್ಷಿ ಹರಿಹರ, ಮಂಜು ಬನಸೋಡೆ, ರವಿ ತಪಶೆಟ್ಟಿ, ಬಸವರಾಜ ಇಬ್ರಾಹಿಂಪುರ, ಸಿದ್ದನಗೌಡ ಬಿರಾದಾರ, ಮಲ್ಲಿಕಾರ್ಜುನ್ ಕೋಟ್ಯಾಳ ಇತರರು ಇದ್ದರು.

## ‘ಕೈ’ ಪಡಸಾಲೆಯಲ್ಲಿ ಹೊಸಬರು-ಹಳಬರ ಮಧ್ಯ ಸ್ಥಳೀಯರು


**ವರದಿ ಮಲ್ಲಿಕಾರ್ಜುನ ತುಂಗಳ**

**ರಬಕವಿ-ಬನಹಟ್ಟಿ:** ಬಾಗಲಕೋಟೆ ಜಿಲ್ಲೆಯಲ್ಲಿಯೇ ವಿಶೇಷ ಸ್ಥಾನ-ಮಾನ ಹೊಂದಿರುವ ತೇರದಾಳ ವಿಧಾನಸಭಾ ಕ್ಷೇತ್ರವು ಕಳೆದ 2008 ರಲ್ಲಿ ಗುಳೇದಗುಡ್ಡದಿಂದ ವರ್ಗಾವಣೆಗೊಂಡು ಹೊಸ ವಿಧಾನಸಭಾ ಕ್ಷೇತ್ರವಾಗಿದೆ.

ಅಂದಿನಿಂದಲೂ ಬಿಜೆಪಿ-ಕಾಂಗ್ರೆಸ್ ನೇರ ಸ್ಪರ್ಧೆಯಿಂದ ಒಂದು ಬಾರಿ ಕಾಂಗ್ರೆಸ್‌ನಿಂದ ಸಚಿವೆಯಾಗಿದ್ದ ಉಮಾಶ್ರೀ ಗೆಲುವು ಸಾಧಿಸಿದ್ದರೆ, ಮೂರು ಬಾರಿ ಹಾಲಿ ಶಾಸಕ ಸಿದ್ದು ಸವದಿಗೆ ನೇಕಾರರ ಆಶೀರ್ವಾದವಾಗಿದೆ.

ಇದೀಗ ಕಾಂಗ್ರೆಸ್ ಪಡಸಾಲೆಯಲ್ಲಿ ‘ಹೊಸಬರು-ಹಳಬರ’ ಮಧ್ಯ ‘ಸ್ಥಳೀಯರ’ ಪೈಪೋಟಿ ಮತ್ತೇ ಶುರುವಾಗಿದ್ದು, ಕಾಂಗ್ರೆಸ್ ವಲಯದಲ್ಲಿ ಆಂತರಿಕ ಬಿರುಗಾಳಿ ಎದ್ದಿದೆ.

ಕಳೆದೊಂದು ವರ್ಷದಿಂದ ಮಾಜಿ ಉಪರಾಷ್ಟ್ರಪತಿ ಬಿ.ಡಿ. ಜತ್ತಿಯವರ ಮೊಮ್ಮಗ ದ್ರುವ ಜತ್ತಿ ಹಾಗು ದಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಕೀರ್ತಿ ಗಣೇಶ್ ಎನ್.ಜಿ.ಯವರ ಪ್ರವೇಶ ತೇರದಾಳ ಕ್ಷೇತ್ರದಲ್ಲಾಗಿದ್ದು, ಇದೀಗ ರಾಜಕೀಯವಾಗಿ ಸಕ್ರಿಯಗೊಂಡಿರುವದೇ ಕಾರ್ಯಕರ್ತರ ಪಡೆಯಲ್ಲಿ ತೀವ್ರ ಆಂತರಿಕ ಅಸಮಾಧಾನಕ್ಕೆ ಕಾರಣವಾಗಿದೆ.



ಈಗಾಗಲೇ ಕ್ಷೇತ್ರ ಆಳುವಲ್ಲಿ ಕಾಂಗ್ರೆಸ್‌ನಿಂದ ಮಾಜಿ ಸಚಿವೆ, ಹಾಲಿ ವಿಧಾನಪರಿಷತ್ ಸದಸ್ಯೆ ಉಮಾಶ್ರೀ ಹಾಗು ಕಳೆದ ಚುನಾವಣೆಯಲ್ಲಿ ಸವದಿ ವಿರುದ್ಧ ಪರಾಭವಗೊಂಡಿರುವ ಸಿದ್ದು ಕೊಣ್ಣೂರ ಮುಂಚೂಣಿಯಲ್ಲಿದ್ದಾರೆ. ಇವರ ಮಧ್ಯ ಮತ್ತಿಬ್ಬರ ಪ್ರವೇಶ ಕಾರ್ಯಕರ್ತರಲ್ಲಿ ಗೊಂದಲ ಸೃಷ್ಟಿಗೆ ಕಾರಣವಾಗಿದ್ದು, ನಾಲ್ಕೂ ಮುಖಂಡರ ಬೆಂಬಲಿಗರು ಇದೀಗ ತೇರದಾಳ ಕ್ಷೇತ್ರಾದ್ಯಂತ ಬಿಡಾರ ಹೂಡಿದ್ದು, ‘ಹೊಸಬರ’ ಪ್ರವೇಶಕ್ಕೆ ‘ಹಳಬರ’ ಆಕ್ರೋಶ ಎದ್ದು ಕಾಣುತ್ತಿದ್ದು, ‘ಸ್ಥಳೀಯರು’ ಗೊಂದಲಕ್ಕೀಡಾಗಲು ಕಾರಣವಾಗಿದೆ. ಒಟ್ಟಾರೆ ಕಾಂಗ್ರೆಸ್ ವಲಯದಲ್ಲಿ ಚುನಾವಣೆ ಇನ್ನೂ ಎರಡು ವರ್ಷಗಳಿರುವಾಗಲೇ ಹೊಸಬರಿಂದ ತಾಲೀಮು ನಡೆಯುತ್ತಿರುವದಂತು ಸುಳ್ಳಲ್ಲ.

**ಬಿಜೆಪಿಗೊಬ್ಬರೇ ಸಿದ್ದ:** ಇತ್ತ ಬಿಜೆಪಿ ವಲಯದಲ್ಲಿ ಯಾವದೇ ಪೈಪೋಟಿ ಅಥವಾ ಹೊಸಬರ ಪ್ರವೇಶಾತಿಯಾಗದೆ, ಹಾಲಿ ಶಾಸಕ ಸಿದ್ದು ಸವದಿ ಒಬ್ಬರೇ ಪಕ್ಷದ ನೊಗ ಹೊತ್ತು ಮುನ್ನಡೆಯುತ್ತಿರುವದು ವಿಶೇಷ.

ಕಾಂಗ್ರೆಸ್ ಪಕ್ಷದಲ್ಲಿ ಮತ್ತೇ ಮುಂದಿನ ವಿಧಾನಸಭೆಗೆ ತೀವ್ರ ಪೈಪೋಟಿಗೆ ಈಗಲೇ ನಾಂದಿಯಾಗುತ್ತಿರುವ ಸಂಕೇತ ಸ್ಪಷ್ಟವಾಗಿ ಗೋಚರಿಸುತ್ತಿರುವದಂತು ಸುಳ್ಳಲ್ಲ.



ಬಸವನಬಾಗೇವಾಡಿ ತಾಲೂಕಿನಲ್ಲಿ ನಿರಂತರ ಮಳೆಯಿಂದಾಗಿ ತಾಲೂಕಿನ ಕಾನ್ನಾಳ ಗ್ರಾಮದ ಬಾಲಚಂದ್ರ ಪೂಜಾರಿ ಅವರ ತೋಟದಲ್ಲಿರುವ ಬೋರವೆಲ್ ದಲ್ಲಿ ತನ್ನಿಂದ ತಾನೆ ನೀರು ಉಕ್ಕಿ ಹರಿಯುವದು ಕಂಡುಬರುತ್ತಿದೆ.

## ಉತ್ತಮ ಬದುಕಿಗೆ ಆರೋಗ್ಯ ಅಗತ್ಯ: ಡಾ ನಾಯಕ

**ಬಸವನಬಾಗೇವಾಡಿ:** ತಾರುಣ್ಯದಲ್ಲೇ ಇಂದು ಯುವ ಸಮೂಹ ಸದೃಢ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು. ಉತ್ತಮ ಬದುಕಿಗೆ ಆರೋಗ್ಯಯೊಂದೇ ಕೊನೆಯ ಆಯ್ಕೆಯಾಗಿದೆ ಎಂದು ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಪ್ರಭಾರಿ ಪ್ರಾಚಾರ್ಯ ಡಾ. ವೈ.ಬಿ.ನಾಯಕ ಹೇಳಿದರು.

ಪಟ್ಟಣದ ಬಿ.ಎಲ್.ಡಿ.ಇ.ಸಂಸ್ಥೆಯ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ವಿಜಯಪುರದ ಬಿ.ಎಮ್.ಪಾಟೀಲ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಕೇಂದ್ರ, ಮಹಾವಿದ್ಯಾಲಯದ ಆಯ್.ಕ್ಯೂ.ಎ.ಸಿ, ಎನ್.ಎಸ್.ಎಸ್ ಹಾಗೂ ಮಹಿಳಾ ಸಬಲೀಕರಣ ಘಟಕಗಳ ಸಹಯೋಗದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರಸ್ತುತ ದಿನಮಾನದಲ್ಲಿ ಆಹಾರವು ಕಲಬೆರಕೆ ಹಾಗೂ ರಾಸಾಯನಿಕಯುಕ್ತವಾಗಿರುವುದರಿಂದ ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ ನಾವು ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳುವಲ್ಲಿ ಮುಂಚೂಣಿಯಲ್ಲಿರಬೇಕೆಂದು ಅಭಿಪ್ರಾಯಪಟ್ಟರು.

ಶಿಬಿರದಲ್ಲಿ ಸಾಮಾನ್ಯ ವೈದ್ಯಕೀಯ ಚಿಕಿತ್ಸಕ ಡಾ.ಮೂಲಿಮನಿ, ಸ್ತ್ರೀರೋಗ ಹಾಗೂ ಪ್ರಸೂತಿತಜ್ಞೆ ಡಾ.ಜ್ಯೋತಿ ಲೋಕಾಪೂರ, ಶಸ್ತ್ರಚಿಕಿತ್ಸಕ ಡಾ.ವೀಣಾ ಕೋರಿಶೆಟ್ಟಿ, ಡಾ.ಮಾನಸಾ ಲಕ್ಷ್ಮೀ, ಡಾ.ಆಹಿಶ ಕುಲಕರ್ಣಿ, ಡಾ.ಗೋಪಿನಾಥ, ಡಾ.ಸುಶ್ಮಿತಾ ರೆಡ್ಡಿ, ಡಾ.ವಾಸವಿ ಬಿ.ಎಸ್, ಡಾ.ಜಯೇಶ, ದೀಪಕ ಔರಂಗಾಬಾದ, ಕಲಾವತಿ ಗುಲಗಂಜಿ, ರೂಪಾ ಮಮದಾಪೂರ, ಅನಿಲಕುಮಾರ ಎಮ್, ಬಿ.ಎಸ್. ಹಡಲಗಿ ಅವರು ರಕ್ತದಲ್ಲಿ ಸಕ್ಕರೆ ಪ್ರಮಾಣ, ರಕ್ತದ ಗುಂಪು, ಚರ್ಮವ್ಯಾಧಿ, ಅಶಕ್ತಿ ಹೀಗೆ ಅನೇಕ ಸಾಮಾನ್ಯ ರೋಗಗಳನ್ನು ಪರೀಕ್ಷಿಸಿ ಸಲಹೆ ನೀಡಿದರು. ಶಿಬಿರದಲ್ಲಿ ಮಹಾವಿದ್ಯಾಲಯದ ಸಿಬ್ಬಂದ ಸೇರಿದಂತೆ 145 ವಿದ್ಯಾರ್ಥಿಗಳು ಆರೋಗ್ಯ ತಪಾಸಣೆಯನ್ನು ಮಾಡಿಸಿಕೊಂಡು ವೈದ್ಯರ ಸಲಹೆ ಪಡೆದುಕೊಂಡರು.





ಮಹಾವಿದ್ಯಾಲಯದ ಪ್ರಾಧ್ಯಾಪಕರಾದ ಡಾ. ಶ್ರೀರಾಮ ಬಿಜಾಪುರ, ಎಸ್.ಕೆ.ಚಿಕ್ಕನರ್ತಿ, ಡಾ.ಎಸ್.ಬಿ.ಜನಗೊಂಡ, ಎಮ್.ಕೆ.ಯಾದವ, ಎಸ್.ಜೆ.ಸೂರ್ಯವಂಶಿ, ಆರ್.ಎನ್.ರಾಠೋಡ, ಪಿ.ಎಸ್.ನಾಟೀಕಾರ, ಆರ್.ಎಮ್.ಮುಜಾವರ, ಡಾ.ಕೆ.ಸೂಡಿ ಎಲ್ಲ ಬೋಧಕೇತರ ಸಿಬ್ಬಂದಿ ಇದ್ದರು. ಬಿ.ಎಲ್.ಡಿ.ಇ. ಪಿ.ಯು.ಕಾಲೇಜ್ ಮಹಾವಿದ್ಯಾಲಯದ ಆವರಣದಲ್ಲಿರುವ ಪದವಿ ಪೂರ್ವ ಕಾಲೇಜಿನ 165 ವಿದ್ಯಾರ್ಥಿಗಳು ಹಾಗೂ 15 ಬೋಧಕ ಬೋಧಕೇತರ ಸಿಬ್ಬಂದಿಯವರು ಉಚಿತ ಆರೋಗ್ಯತ ಪಾಸಣೆಯಲ್ಲಿ ಭಾಗವಹಿಸಿ ಆರೋಗ್ಯದ ಕುರಿತಾದ ಸೂಕ್ತ ಸಲಹೆಗಳನ್ನು ಪಡೆದುಕೊಂಡರು. ಈ ಸಂದರ್ಭದಲ್ಲಿ ಪ್ರಾಚಾರ್ಯ ಆರ್.ಎ.ಪವಾರ,ಸಿಬ್ಬಂದಿ ಇದ್ದರು.

## ಉಚಿತ ಆರೋಗ್ಯ ತಪಾಸಣೆ ಶಿಬಿರ

**ವಿಜಯಪುರ:** ಭಾರತೀಯ ಜನತಾ ಪಾರ್ಟಿ ವಿಜಯಪುರ ಜಿಲ್ಲಾ ವೈದ್ಯಕೀಯ ಪ್ರಕೋಷ್ಠ ಆಶ್ರಯದಲ್ಲಿ ಭಾರತದ ಹೆಮ್ಮೆಯ ಪ್ರಧಾನ ಮಂತ್ರಿಗಳಾದ ಶ್ರೀ ನರೇಂದ್ರ ಮೋದಿಜೀ ಅವರ 75ನೇ ಜನ್ಮದಿನದ ಪ್ರಯುಕ್ತ ಯೋಗಾಪುರ್ ಹನುಮಾನ ದೇವಸ್ಥಾನ ಆವರಣ, ಉಚಿತ ಆರೋಗ್ಯ ತಪಾಸಣೆ ಶಿಬಿರ ಉದ್ಘಾಟಿಸಿ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಮಾತನಾಡಿ ಮಾತನಾಡಿದರು.

ನರೇಂದ್ರ ಮೋದಿ ನಾವು ಕಂಡ ಅದ್ಭುತ ಜನನಾಯಕ, ಕೇವಲ ಜನಸೇವೆಯನ್ನೇ ತಮ್ಮ ಬದುಕಿನ ಧ್ಯೇಯವಾಗಿಸಿಕೊಂಡು ಹೋರಾಟ ಹಾಗೂ ದಿವ್ಯ ದೇಶಭಕ್ತಿಯ ಮೂಲಕ ಈ ದೇಶದ ಚುಕ್ಕಾಣಿ ಹಿಡಿದಿರುವ ಈ ಅವಧಿಯಲ್ಲಿ ಭಾರತ ಅಭಿವೃದ್ಧಿಯಲ್ಲಿ ನಾಗಾಲೋಟ ಬೀರುತ್ತಿದೆ, ಮೊನ್ನೆಯಷ್ಟೇ ಜೀವನಾವಶಕ್ಯ ವಸ್ತುಗಳನ್ನು ಜಿಎಸ್‌ಟಿಯ ಪರಿಧಿಯಲ್ಲಿ ಹೊರಗಿಡುವ ಮೂಲಕ ದೊಡ್ಡ ಕೊಡುಗೆ ಕೊಟ್ಟಿದ್ದಾರೆ, ಕಪ್ಪುಹಣದ ಸಮರ ಸೇರಿದಂತೆ ಅನೇಕ ದಿಟ್ಟ ಹೆಜ್ಜೆಗಳನ್ನು ಇರಿಸಿದ ಮೋದಿ ನಮ್ಮ ಹೆಮ್ಮೆಯ ನಾಯಕ ಎಂದರು.



ಪಕ್ಷದ ಬೆಳಗಾವಿ ವಿಭಾಗದ ಪ್ರಭಾರಿ ಚಂದ್ರಶೇಖರ್ ಕವಟಗಿ, ಮುಖಂಡರಾದ ವಿಜುಗೌಡ ಪಾಟೀಲ್, ಡಾ.ಸುರೇಶ್ ಬಿರಾದಾರ್, ಎಸ್.ಸಿ. ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಉಮೇಶ ಕಾರಜೋಳ್, ಸಂಜೀವ ಐಹೊಳೆ, ಮಹೇಂದ್ರ ನಾಯಕ್ ಭೀಮ್ ಸಿಂಗ್ ರಾಥೋಡ್ ಉಮೇಶ ಕೋಳಕುರ, ಮಲ್ಲಿಕಾರ್ಜುನ್ ಜೋಗುರ್ ಮಲ್ಲು ಕಲಾದಗಿ ,ಸಾಬು ಮಶ್ಯಾಳ , ಡಾ ವಿರೇಶ ಪಾಟೀಲ ಈರಣ್ಣ ರಾವೂರ , ಡಾ॥ ಅರವಿಂದ ಡಾಣಕಶಿರೂರ ,ಡಾ॥ ಅಶೋಕ ವಾಲಿ ವಿಜು ಜೋಶಿ ಭರತ್ ಕುಲಕರ್ಣಿ ವಿಶ್ವನಾಥ ಪತ್ತಾರ , ಸಿದ್ದನಗೌಡ ಬಿರಾದಾರ. ಡಾ ಸಂಜು ಶಿಳ್ಳಿನ. ಚನಬಸಪ್ಪ ಮರೆಗುದ್ದಿ, ಸೇರಿದಂತೆ ಮುಂತಾದವರು ಉಪಸ್ಥಿತರಿದ್ದು.

## ಗಾಂಧಿ ಜಯಂತಿ: ಮಾಂಸ ಮಾರಾಟ ನಿಷೇಧ

**ವಿಜಯಪುರ:** ಅಕ್ಟೋಬರ್ 2ರಂದು ಮಹಾತ್ಮ ಗಾಂಧೀಜಿ ಜಯಂತಿ ಆಚರಣೆ ಹಿನ್ನೆಲೆಯಲ್ಲಿ ಅಂದು ಪ್ರಾಣಿವಧೆ ಹಾಗೂ ಮಾಂಸ ಮಾರಾಟ ನಿಷೇಧಿತ ದಿನವೆಂದು ಸರ್ಕಾರ ಘೋಷಿಸಿದೆ. ವಿಜಯಪುರ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ರಾಣಿವಧೆ ಹಾಗೂ ಮಾಂಸ ಮಾರಾಟ ಮಾಡುವುದನ್ನು ನಿಷೇಧಿಸಿ ಆದೇಶ ಹೊರಡಿಸಲಾಗಿದೆ ಎಂದು ವಿಜಯಪುರ ಮಹಾನಗರಪಾಲಿಕೆಯ ಆರೋಗ್ಯಾಧಿಕಾರಿಗಳು ಪ್ರಟಕಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಸಲ್ಲಿಸಲು ಅ.31 ವರೆಗೆ ಅವಧಿ ವಿಸ್ತರಣೆ

**ಧಾರವಾಡ:** ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1 ರ ಅಲೆಮಾರಿ, ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಂದ 2025-26ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡುಲಾಗುತ್ತಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಅಲೆಮಾರಿ, ಅರೆ ಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿವೇತನ, ಶುಲ್ಕ ವಿನಾಯಿತಿ ಮತ್ತು ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿತ್ತು. ಅರ್ಜಿ ಸಲ್ಲಿಸಲು ಅಕ್ಟೋಬರ 31, 2025 ವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ: 8050770005 ಗೆ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯೋಜನೆಗಳಿಗೆ ಅರ್ಜಿ: ಅ.15 ವರೆಗೆ ಅವಧಿ ವಿಸ್ತರಣೆ

**ಧಾರವಾಡ:** 2025-26ನೇ ಸಾಲಿನಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಇಲಾಖೆಯಿಂದ 13 ಫಲಾನುಭವಿ ಆಧಾರಿತ ಯೋಜನೆಗಳಾದ ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ, ಶಿಶುಪಾಲನಾ ಭತ್ಯೆ, ನಿರುದ್ಯೋಗ ಭತ್ಯೆ, ಸ್ವಯಂ ಉದ್ಯೋಗಕ್ಕಾಗಿ ಆಧಾರ ಯೋಜನೆ, ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಿಗೆ ಮರಣ ಪರಿಹಾರ ನಿಧಿ, ಪ್ರತಿಭೆ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ ಯೋಜನೆ, ಸಾಧನೆ ಸಲಕರಣೆ, ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ. ದೃಷ್ಟಿದೋಷ ಹೊಂದಿರುವ ವಿಕಲಚೇತನರಿಗೆ ಬ್ರೈಲ್‌ಕಿಟ್ ಯೋಜನೆ, ವಿಕಲಚೇತನ ವ್ಯಕ್ತಿಗಳಿಗೆ ಬ್ಯಾಟರಿ ವ್ಹೀಲ್ ಚೇರ್ ಯೋಜನೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿತ್ತು, ಅರ್ಜಿ ಸಲ್ಲಿಸಲು ಅಕ್ಟೋಬರ 15, 2025 ರವರೆಗೆ ಅವಧಿ ವಿಸ್ತರಿಸಲಾಗಿದೆ.

ಆಸಕ್ತ ಅರ್ಹ ಅಭ್ಯರ್ಥಿಗಳು ಅಕ್ಟೋಬರ 15, 2025 ರೊಳಗಾಗಿ https://sevasindhu.karnataka.gov.in/Sevasindhu/Kannada ಮೂಲಕ ಅರ್ಜಿ ಸಲ್ಲಿಸಬೇಕು. ವಿಕಲಚೇತನ ಫಲಾನುಭವಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ, ಹಾರ್ಡಕಾಫಿಗೆ ಅವಶ್ಯಕ ದಾಖಲಾತಿಗಳನ್ನು ಲಗತ್ತಿಸಿ ಸಂಬಂಧಪಟ್ಟ ತಾಲೂಕಾ ಪಂಚಾಯತನಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿದೋದ್ಧೇಶ ಪುನರ್ವಸತಿ ಕಾರ್ಯಕರ್ತರು (ಎಂ.ಆರ್.ಡಬ್ಲ್ಯೂ) ಗಳಿಗೆ ಕಡ್ಡಾಯವಾಗಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ತಾಲೂಕಾ ಪಂಚಾಯತಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿದೋದ್ಧೇಶ ಪುನರ್ವಸತಿ ಕಾರ್ಯಕರ್ತರು (ಎಂ.ಆರ್.ಡಬ್ಲ್ಯೂ)ಗಳಾದ ಧಾರವಾಡ-ಬಸವರಾಜ ಬೆಳಾರದ (9742757903), ಹುಬ್ಬಳ್ಳಿ-ಮಹಾಂತೇಶ ಕುರ್ತಕೋಟಿ(9164347001) ಮತ್ತು (8073194053), ಕಲಘಟಗಿ-ಕಲಾವತಿ ಹೊಸುರು(6363695794), ನವಲಗುಂದ-ಸರೋಜಾ ಮಾವಿನಕಾಯಿ(9663271200) ಮತ್ತು ಕುಂದಗೋಳ-ಸುಲೋಚನಾ ಇಟಗಿ (8880570833) ಹಾಗೂ ಕಛೇರಿ ದೂರವಾಣಿ ಸಂಖ್ಯೆ:0836-2744474 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಗತಸಿಂಗ ಕ್ರಾಂತಿಕಾರಿ ವಿಚಾರಗಳು ಇಂದಿಗೂ ಸ್ಫೂರ್ತಿ





**ಬಸವನಬಾಗೇವಾಡಿ;** ಪ್ರತಿಯೊಬ್ಬ ಭಾರತೀಯ ಪ್ರಜೆಗೂ ಸಮಾನತೆ, ಜಾತಿ ಧರ್ಮಗಳಿಂದ ಮುಕ್ತವಾದ ಯುವ ಭಾರತದ ಪರಿಕಲ್ಪನೆಯ ಸ್ವಾತಂತ್ರ್ಯವನ್ನು ಕ್ರಾಂತಿಕಾರಿ ಭಗತ್ ಸಿಂಗ್ ಹೊಂದಿದ್ದರು. ಇಂತಹ ಕ್ರಾಂತಿಕಾರಿ ವಿಚಾರಗಳು, ಆದರ್ಶಗಳು ಇಂದಿನ ಯುವ ಜನತೆಗೆ ದಾರಿ ದೀಪವಾಗಬೇಕೆಂದು ರಾಷ್ಟ್ರೀಯ ಬಸವ ಸೈನ್ಯದ ಸಂಸ್ಥಾಪಕ ಅಧ್ಯಕ್ಷರಾದ ಶಂಕರಗೌಡ ಬಿರಾದಾರ ಹೇಳಿದರು

ಪಟ್ಟಣದ ವೀರರಾಣಿ ಕಿತ್ತೂರು ಚೆನ್ನಮ್ಮ ವೃತ್ತದಲ್ಲಿ ರಾಷ್ಟ್ರೀಯ ಬಸವ ಸೈನ್ಯ ಸಂಘಟನೆ ಭಾನುವಾರ ಹಮ್ಮಿಕೊಂಡಿದ್ದ ಕ್ರಾಂತಿಕಾರಿ ಭಗತ್ ಸಿಂಗ್ ಅವರ 117 ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು,ಅಸಮಾನತೆಯ ವ್ಯವಸ್ಥೆಯನ್ನು ಹೋಗಲಾಡಿಸಿ ಬದಲಾವಣೆ ತರಲು ಹೋರಾಡಿದ ಮಹಾನ್ ಕ್ರಾಂತಿಕಾರಿ ಭಗತ್ ಸಿಂಗ್. ದೇಶಭಕ್ತ ಭಗತ್ ಸಿಂಗ್ ಅವರ ಜೀವನ ರಾಷ್ಟ್ರ ನಿರ್ಮಾಣಕ್ಕೆ ಪ್ರೇರಣೆಯಾಗಿದೆ ಎಂದರು. ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಪಾಲ್ಗೊಂಡು ಸಣ್ಣ ವಯಸ್ಸಿನಲ್ಲೇ ನೇಣುಕಂಬಕ್ಕೆ ಏರಿದವರು. ಜಲಿಯನ್ ವಾಲಾಬಾಗ್ ದುರಂತದ ನಂತರದಲ್ಲಿ ಭಗತ್ ಸಿಂಗ್ ಒಬ್ಬ ಕ್ರಾಂತಿಕಾರಿಯಾಗಿ ಬದಲಾಗುತ್ತಾರೆ. ಭಗತ್ ಸಿಂಗ್ ಅವರು ಬ್ರಿಟಿಷರಿಗೆ ಸಿಂಹಸ್ವಪ್ನರಾಗಿದ್ದರು.

ಭಗತ್ ಸಿಂಗ್, ರಾಜಗುರು ಸುಖದೇವ್ ಮೂವರು ಕೇವಲ 24 ವರ್ಷದ ಪ್ರಾಯದಲ್ಲಿ ದೇಶಕ್ಕಾಗಿ ಜೀವವನ್ನು ತ್ಯಾಗ ಮಾಡಿದ್ದಾರೆ ಎಂದ ಅವರು, ಯುವ ಜನರು ಕ್ರಾಂತಿಕಾರಿ ವಿಚಾರಗಳಿಂದ ದೂರವಾಗುತ್ತಿದ್ದಾರೆ. ಭಗತ್ ಸಿಂಗ್ ಕಂಡಂತಹ ಕನಸು ನನಸಾಗದೆ ಉಳಿದಿದೆ ಎಂದರು.

ಈ ಸಂದರ್ಭದಲ್ಲಿ ರಾಷ್ಟ್ರೀಯ ಬಸವಸೈನ್ಯದ ಸಂಚಾಲಕ ಶ್ರೀಕಾಂತ ಕೊಟ್ರಶೆಟ್ಟಿ, ಮುಖಂಡರಾದ ಮನ್ನಾನ ಶಾಬಾದಿ, ಸಂಗಮೇಶ ಜಾಲಗೇರಿ, ಪ್ರಶಾಂತ ಮುಂಜಾನೆ, ಜಟ್ಟಿಂಗರಾಯ ಮಾಲಗಾರ, ಮುತ್ತುರಾಜ ಡಂಬಳ, ಶಂಕರಗುರು ರಜಪೂತ, ಮಹಾಂತೇಶ ಹೆಬ್ಬಾಳ, ಅಮೀನ ಚೌದರಿ, ಶ್ರೀಶೈಲ ಚೌರಿ, ಅಣ್ಣು ಪಾತಂಗಿ, ಬಸಲಿಂಗ ನಂದಿ, ವಿಠ್ಠಲ ಲಮಾಣಿ, ಸುನೀಲ ಬೇದರಕರ, ಶಾಂತು ಚೌರಿ ಇತರರು ಇದ್ದರು.

## ಭಾಗ್ಯಲಕ್ಷ್ಮಿ ಯೋಜನೆ: ದಾಖಲೆಗಳ ಸಲ್ಲಿಕೆಗೆ ಅವಕಾಶ

**ಹುಬ್ಬಳ್ಳಿ:** ಭಾಗ್ಯಲಕ್ಷ್ಮಿ ಯೋಜನೆಯ ಫಲಾನುಭವಿಗಳು ಭಾಗ್ಯಲಕ್ಷ್ಮಿ ಯೋಜನೆಯಡಿ ಪರಿಪಕ್ವ ಮೊತ್ತವನ್ನು ಪಡೆಯಲು ಅವಶ್ಯಕ ದಾಖಲೆಗಳ ಸಲ್ಲಿಕೆಗೆ ಅವಕಾಶ ಕಲ್ಪಿಸಲಾಗಿದೆ. 2006 – 2007ನೇ ಸಾಲಿನಲ್ಲಿ ಜನಿಸಿದ 18 ವರ್ಷ ಪೂರ್ಣಗೊಂಡ ಭಾಗ್ಯಲಕ್ಷ್ಮಿ ಯೋಜನೆಯ ಫಲಾನುಭವಿಗಳು ಪರಿಪಕ್ವ ಮೊತ್ತ ಪಡೆಯಲು ಅರ್ಜಿಗಳನ್ನು ಪಡೆದು ಮಂಜೂರಾತಿಗಾಗಿ ಸಲ್ಲಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ಪರಿಪಕ್ವ ಮೊತ್ತಕ್ಕಾಗಿ ಅರ್ಜಿ ಸಲ್ಲಿಸದೆ ಇರುವ ಫಲಾನುಭವಿಗಳು ಅಕ್ಟೋಬರ್ 30ರ ಒಳಗಾಗಿ ಹುಬ್ಬಳ್ಳಿ ಧಾರವಾಡ ಶಹರ ಯೋಜನಾ ವ್ಯಾಪ್ತಿಯ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಗೆ ಖುದ್ದಾಗಿ ಭೇಟಿ ನೀಡಿ ಮೂಲ ದಾಖಲಾತಿಗಳನ್ನು ಸಲ್ಲಿಸಬೇಕು. ಅವಧಿ ಮುಗಿದ ಮೇಲೆ ಬಂದ ಅರ್ಜಿಗಳನ್ನು ಆನಲೈನ್‌ನಲ್ಲಿ ಅಳವಡಿಸಲು ಸಾಧ್ಯವಾಗದ ಕಾರಣ ಪರಿಗಣಿಸಲಾಗುವುದಿಲ್ಲ ಎಂದು ಹುಬ್ಬಳ್ಳಿ ಧಾರವಾಡ ಶಹರ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿಕಲಚೇತನರಿಗೆ ಒಟ್ಟು 34 ತ್ರಿಚಕ್ರ ವಾಹನಗಳಗಳನ್ನು ವಿತರಿಸಿದ ಶಾಸಕ ಸಿ.ಎಸ್.ನಾಡಗೌಡ

# ಸರಕಾರದ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಿ

**ಮುದ್ದೇಬಿಹಾಳ:** ತಾಪಂ ಅನುದಾನ ಒಟ್ಟು 5 ತ್ರಿಚಕ್ರ ಬೈಕ್, ಶಾಸಕರ ಅನುದಾನ ಅಡಿಯಲ್ಲಿ 29 ತ್ರಿಚಕ್ರ ಬೈಕ್ ಒಟ್ಟು 34 ವಾಹನಗಳನ್ನು ಫಲಾನುಭವಿಗಳಿಗೆ ವಾಹನಗಳನ್ನು ನೀಡುತ್ತಿದ್ದೇವೆ.

ವಿಕಲಚೇತನರು ಈ ಯೋಜನೆಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಕೆಎಸ್ ಡಿ ನಿಗಮದ ಅಧ್ಯಕ್ಷ ಹಾಗೂ ಶಾಸಕ ಸಿ.ಎಸ್.ನಾಡಗೌಡ ಹೇಳಿದರು.

ಪಟ್ಟಣದ ತಹಶಿಲ್ದಾರ ಕಚೇರಿ ಆವರಣದಲ್ಲಿ ಮುಂದೆ,ತಾಪಂ ಅನುದಾನ, ಶಾಸಕರ ಅನುದಾನದಲ್ಲಿ ವಿಕಲಚೇತನರಿಗೆ ಒಟ್ಟು 35 ತ್ರಿಚಕ್ರ ವಾಹನ ವಿತರಿಸಿ ಅವರು ಮಾತನಾಡಿದ

ಅವಗಳನ್ನು ಸರಿಯಾಗಿ ಸರ್ವಿಸ್ ಮಾಡಿಸಿಕೊಳ್ಳಿ ಏಕೆಂದರೆ ಒಮ್ಮೆ ನೀಡಿದವರಿಗೆ ಮತ್ತೊಮ್ಮೆ ನೀಡುವುದಿಲ್ಲ. ಈ ತ್ರಿಚಕ್ರ ಬೈಕ್ ವಾಹನ ಮೇಲೆ ಮೂರುನಾಲ್ಕು ಜನರು ಕುಡಿಸಿ ವಾಹನ ಚಾಲನೆ ಮಾಡಬಾರದು ಕಿವಿ ಮಾತು ನೀಡಿದರು. ಬೈಕ್ ಗಾಲಿ ತೆಗೆದು ಹೊಡೆಯುವುದು, ದುರುಪಯೋಗ ಮಾಡಿಕೊಳ್ಳಬೇಡಿ.



ಸರ್ಕಾರ ನಿಮಗೆ ಯಾವ ಉದ್ದೇಶಕ್ಕಾಗಿ ನೀಡಿದೆ. ಇದನ್ನು ಸದುಪಯೋಗ ಮಾಡಿಕೊಳ್ಳಲು ಶಾಸಕರು ವಿಕಲಚೇತನರಿಗೆ ಕರೆ ನೀಡಿದರು.

ಈ ವೇಳೆ ಪ್ರಾಸ್ತಾವಿಕವಾಗಿ ಎಸ್ ಕೆ ಘಾಟಿಗೆ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ತಹಶಿಲ್ದಾರ ಕೀರ್ತಿ ಚಾಲಕ,ತಾ.ಪಂ ಇಓ ವೆಂಕಟೇಶ ವಂದಾಲ,ಅಬಕಾರಿ ಇಲಾಖೆ ನಿರೀಕ್ಷಕಿ ಜ್ಯೋತಿ ಮೇತ್ರಿ,ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಎಂ.ಎಂ.ಬೆಳಗಲ್ಲ,ಬಿಇಓ ಬಿ.ಎಸ್.ಸಾವಳಗಿ,ಸಿಡಿಪಿಓ ಶಿವಮೂರ್ತಿ ಕುಂಬಾರ, ಡಾ ಸತೀಶ್ ತಿವಾರಿ,ಪಶುಸಂಗೋಪನೆ ಇಲಾಖೆ ಅಧಿಕಾರಿ ಶಿವಾನಂದ ಮೇಟಿ,ಪಿಎಸ್ಐ ಆರ್.ಎಲ್. ಮನ್ನಾಬಾಯಿ,ತಾಲ್ಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರಣ್ಣ ತಾರನಾಳ, ಶಂಕರಗೌಡ ಹಿರೇಗೌಡರ, ಅಪ್ಪುಧಣಿ ಕೇಸಾಪುರ.ವಾಯ್ ಹೆಚ್ ವಿಜಯಕರ, ಶಿವು ಶಿವಪುರ.ರಾಮಣ್ಣ ರಾಜನಾಳ,ತಿಪಣ್ಣ ದೊಡಮನಿ,

ವಿವಿಧ ಇಲಾಖೆ ಅಧಿಕಾರಿಗಳು, ವಿಕಲಚೇತನರು, ಸೇರಿದಂತೆ ಉಪಸ್ಥಿತರಿದ್ದರು.



## ಭಾಷಣಕಾರ ಮಹದೇವ ಸತ್ತಿಗೇರಿಗೆ ಸನ್ಮಾನ

**ರಾಮದುರ್ಗ:** ವಿಯೆಟ್ನಾಂ ದೇಶದಲ್ಲಿ ಅಂತಾರಾಷ್ಟ್ರೀಯ ಭಾವ ಜಾನಪದ ಝೇಂಕಾರ ಕಾರ್ಯಕ್ರಮ ದಲ್ಲಿ ತಾಲೂಕಿನ ಹುಲಕುಂದ ಗ್ರಾಮದ ಅಂತಾರಾಷ್ಟ್ರೀಯ ನಗೆ ಭಾಷಣಕಾರ ಹಾಗೂ ಸರಸ್ವತಿಯ ಆರಾಧಕ ಮಹದೇವ ಸತ್ತಿಗೇರಿಗೆ ಗೌರವ ಸನ್ಮಾನ.

ವೃತ್ತಿಯಲ್ಲಿ ಶಿಕ್ಷಕರಾದ ಮಹದೇವ ಸತ್ತಿಗೇರಿ ಅವರು ಸುಮಾರು 20 ಕ್ಕೂಅಧಿಕ ದೇಶಗಳಲ್ಲಿ ಹಾಸ್ಯದ ರಸದೌತಣ ನೀಡಿದ ಕೀರ್ತಿ ಇವರದು ವಿಯೆಟ್ನಾಂ ದೇಶದ ಮೊಂಗ್ ಗ್ರಾಂಡ್ ಹೋಟೇಲ್ ಸಭಾಂಗಣದಲ್ಲಿ ಇತ್ತೀಚೆಗೆ ಜರುಗಿದ ಅಂತಾರಾಷ್ಟ್ರೀಯ ಭಾವ ಜಾನಪದ ಝೇಂಕಾರ ಕಾರ್ಯಕ್ರಮದಲ್ಲಿ ತಮ್ಮ ಹಾಸ್ಯ ಸಾಹಿತ್ಯದ ಮೂಲಕ ನೆರೆದ ಸಭಿಕರ ಮನ ರಂಜಿಸಿದರು ಈ ಸಮಾರಂಭದಲ್ಲಿ ಜಾನಪದ ಸಂರಕ್ಷಣಾ ಪರಿಷತ್ ಅಧ್ಯಕ್ಷ ಗೋ ನಾ ಸ್ವಾಮಿ ಪ್ರಾಸ್ತಾವಿಕವಾಗಿ ಮಾತನಾಡಿದರು ಈ ವೇಳೆ ಟಿ ವ್ಹಿ ಬಾಬು ,ವಿಶ್ರಾಂತ ಜಿಲ್ಲಾಧಿಕಾರಿ ವಿಶ್ವನಾಥ್, ಓಂ ಸಾಯಿ ಆನಂದ ಆಶ್ರಮದ ಎಸ್ ಜಾನಕಿ, ಆಂಜನೇಯನ ಈಡಿಗ ಮೊಂಗ್ ಹೋಟೇಲ್ ಮ್ಯಾನೇಜರ್ ಅಯಾನ್, ಬೆಂಗಳೂರಿನ ಅಬಕಾರಿ ಇಲಾಖೆಯ ಅಧಿಕಾರಿ ರಾಜಶೇಖರ್, ಡಾ.ಪ್ರಹ್ಲಾದ್ ಬೋಯಿ, ಇನ್ನೂ ಅನೇಕ ಗೌರವಾನ್ವಿತರು ಇದ್ದರು



## ಗಾಯಾಳು ವಿಚಾರಿಸಿದ ತಹಸೀಲ್ದಾರ

**ಬಸವನಬಾಗೇವಾಡಿ:** ತಾಲೂಕಿನ ಮುತ್ತಗಿ ಗ್ರಾಮದಲ್ಲಿ ನಿರಂತರ ಸುರಿಯುತ್ತಿರುವ ಮಳೆಯಿಂದಾಗಿ ಮನೆಯ ಗೋಡೆ ಕುಸಿದ ಪರಿಣಾಮ ಶ್ರೇಯಾ ಮಲ್ಲಪ್ಪ ಪಟ್ಟಣದ(15) ಇವರ ಕಾಲಿಗೆ ಗಾಯವಾದ ಘಟನೆ ಜರುಗಿದೆ. ಗಾಯಗೊಂಡ ಶ್ರೇಯಾ ಪಟ್ಟಣದ ಅವರು ಬಸವನಬಾಗೇವಾಡಿಯ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿದ್ದಾರೆ. ಗಾಯ ಗೊಂಡ ಶ್ರೇಯಾ ಅವರನ್ನು ಶನಿವಾರ ಸಂಜೆ ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ ಭೇಟಿ ನೀಡಿ ಆರೋಗ್ಯ ವಿಚಾರಿಸಿದರು.




## ಲೇಖಕನಿಗೆ ತನ್ನದೇ ಆದ ಜವಾಬ್ದಾರಿಯಿದೆ: ಸಾಹಿತಿ ಹತ್ತಿ

**ಕೊಪ್ಪಳ:** ಸಮಾಜದಲ್ಲಿ ಲೇಖಕನಿಗೆ ತನ್ನದೇ ಆದ ಬಹುದೊಡ್ಡ ಜವಾಬ್ದಾರಿಯಿದೆ ಎಂದು ಹಿರಿಯ ಸಾಹಿತಿ ಈಶ್ವರ ಹತ್ತಿ ಹೇಳಿದರು.

ನಗರದ ರಾಜ್ಯ ಸರಕಾರಿ ನೌಕರರ ಸಾಂಸ್ಕೃತಿಕ ಭವನದಲ್ಲಿ ಭಾನುವಾರ ಆಯೋಜಿಸಲಾಗಿದ್ದ ಶ್ರೀ ಅನ್ನದಾನೇಶ್ವರ ಶಿಕ್ಷಣಾ ಸೇವಾ ಟ್ರಸ್ಟ್( ರಿ) ಬೆಣಕಲ್ ಪ್ರಕಾಶನ ಪ್ರಕಟಿಸಿರುವ ಲೇಖಕ ಪಿ.ಎಸ್.ಅಮರದೀಪ್ ಅವರ ಪ್ರಥಮ ಕೃತಿ ಮರಳಿ ಮನ ಸಾಗಿದೆ ಪುಸ್ತಕ ಬಿಡುಗಡೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ತನ್ನ ವೈಯಕ್ತಿಕ ನೆಲೆಯ ವಿಷಯಗಳನ್ನು ಸಾರ್ವತ್ರಿಕಗೊಳಿಸಿ, ಜನರೊಂದಿಗೆ ಹಂಚಿಕೊಳ್ಳುತ್ತಾನೆ. ಇದಕ್ಕೆ ತಾಳ್ಮೆ, ವ್ಯವದಾನ ಅವಶ್ಯ ಅಂತೆಯೇ ಅಮರದೀಪ ಮತ್ತೊಬ್ಬ ಪ್ರಬಂಧಕರರಾಗಿ ಸಾಹಿತ್ಯ ಲೋಕಕ್ಕೆ ಹೊಸದಾಗಿ ಬಂದಿದ್ದಾರೆ. ಅವರು ಬರೆದಿರುವ ಕಥನಗಳನ್ನು ಓದುತ್ತಾ ಹೋದಂತೆ ನಾನು ಇಂತಹ ಪರಿಸ್ಥಿತಿಯಲ್ಲಿದ್ದೆ ಎಂಬ ಅನುಭವ ಓದುಗರಿಗೆ ತಮ್ಮದಾಗುತ್ತದೆ.

ಪ್ರಮುಖವಾಗಿ ಈ ಪುಸ್ತಕದಲ್ಲಿ ಕಲ್ಪನೆಯಿಲ್ಲ. ಕಲ್ಪನೆ ಹೆಚ್ಚಾದಾಗ ವಾಸ್ತವತೆ ಕಡಿಮೆಯಾಗುತ್ತದೆ. ಲೇಖಕರು ತಮ್ಮ ಬದುಕಿನ ಅನುಭವಗಳನ್ನು ಬರಹರದ ರೂಪದಲ್ಲಿ ಕಟ್ಟಿ ಕೊಟ್ಟಿದ್ದಾರೆ. ಮಧ್ಯಮ ವರ್ಗದ ವ್ಯಕ್ತಿಯ ತೋಳಲಾಟಗಳು ಈ ಪುಸ್ತಕದಲ್ಲಿ ಅಡಕವಾಗಿವೆ.




ಬಡತನ, ಅವಮಾನ, ಸಂಘರ್ಷ, ಪ್ರೀತಿ, ದ್ವೇಷ ಒಳಗೊಂಡ ಎಲ್ಲ ಅಂಶಗಳು ಪುಸ್ತಕದಲ್ಲಿ ಸೇರ್ಪಡೆಯಾಗಿವೆ ಎಂದರು.

ಪುಸ್ತಕ ಬಿಡುಗಡೆಗೊಳಿಸಿದ ಕೇಂದ್ರ ಜಿಎಸ್‌ಟಿ ಇಲಾಖೆಯ ಆಯುಕ್ತ ಡಾ.ಕೊಟ್ರಸ್ವಾಮಿ.ಎಂ. ಮಾತನಾಡಿ, ಲೇಖಕ ತನ್ನ ಜೀವನದಲ್ಲಾದ ಘಟನೆಗಳನ್ನು ಪುಸಕ್ತದ ರೂಪದಲ್ಲಿ ದಾಖಲಿಸಿದ್ದಾರೆ. ಮರಳಿ ಮನ ಸಾಗಿದೆ ಎನ್ನುವ ಪುಸ್ತಕ ಓದಿದರೇ ಅಮರದೀಪ ಅವರ ಜೀವನ ಚಿತ್ರಣ ಕಣ್ಣಿಗೆ ಕಂಡು ಬರುತ್ತದೆ.

ಒಬ್ಬ ವ್ಯಕ್ತಿಯ ಮಧ್ಯಮ ವರ್ಗದ ತೋಳಲಾಟಗಳು ಪುಸ್ತಕದಲ್ಲಿ ಕಂಡು ಬರುತ್ತವೆ ಎಂದರು.ಕನ್ನಡದ ಸಾಹಿತ್ಯ ಲೋಕಕ್ಕೆ ಅಮರದೀಪ ಅವರು ಪುಸ್ತಕ ಕೊಡುವ ಮೂಲಕ ಸಾಹಿತ್ಯ ಲೋಕಕ್ಕೆ ಕಾಲಿಟ್ಟಿದ್ದಾರೆ. ಒಬ್ಬ ಅಧಿಕಾರಿಯಾಗಿ ಕೆಲಸದ ಒತ್ತಡದ ಮಧ್ಯೆ ಬರಹದ ಅಭಿರೂಚಿ ಒಳಗೊಂಡಿರುವುದು ಸಂತಸ ತಂದಿದೆ ಎಂದರು.ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ನಾಗರಾಜ್ ಜುಮ್ಮನ್ನವರ ಮಾತನಾಡಿ, ಅಮರದೀಪ ಅವರ ಪುಸ್ತಕ ಓದಿದರೇ ಅವರೊಂದಿಗೆ ಮತ್ತಷ್ಟು ಹತ್ತಿರವಾಗುತ್ತೇವೆ. ಇದೇ ರೀತಿ ಅವರ ಅನೇಕ ಕೃತಿಗಳು ಹೊರ ಬರಲಿ ಎಂದರು. ಪಂಜು ಅಂತರ್ಜಾಲ ಪತ್ರಿಕೆಯ ಸಂಪಾದಕ ಡಾ.ನಟರಾಜು ಎಸ್.ಎಂ ಕಾರ್ಯಕ್ರಮ ಉದ್ಘಾಟಿಸಿದರು. ಕಿನ್ನಾಳ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ರಾಜಶೇಖರ ಪಾಟೀಲ್ ಅವರು ಪ್ರಾಸ್ತವಿಕವಾಗಿ, ಹಿರಿಯ ಲೇಖಕ ಈರಪ್ಪ ಕಂಬಳಿ ಅವರು ಪುಸ್ತಕ ಕುರಿತು ಮಾತನಾಡಿದರು. ಕಾರ್ಯಕ್ರಮದಲ್ಲಿ ಕಡ್ಲಿ ಸುವರ್ಣ ಶಿವರಾಜ, ಕಡ್ಲಿ ಹೇಮಲತಾ ಗುರುಬಸವರಾಜ ಅವರನ್ನು ಸನ್ಮಾನಿಸಲಾಯಿತು.

## ಸರ್ಕಾರದ ಆರೋಗ್ಯ ಸಂಜೀವಿನಿ ಯೋಜನೆ ಜಾರಿ: ಸ್ವಾಗತಾರ್ಹ

**ಅಥಣಿ:** ರಾಜ್ಯ ಸರ್ಕಾರ ಲಕ್ಷಾಂತರ ಸರ್ಕಾರಿ ನೌಕರರಿಗೆ ಅವರ ಅವಂಬಿ ಕುಟುಂಬದ ಸದಸ್ಯರಿಗೆ ಇದೆ ಅಕ್ಟೋಬರ್ 1 ರಿಂದ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ ನಗದು ರಹಿತ ಚಿಕಿತ್ಸಾ ಸೌಲಭ್ಯವನ್ನು ಜಾರಿಗೊಳಿಸಿ ಆದೇಶ ಮಾಡಿರುವುದ ಸ್ವಾಗತಾರ್ಹ ಕ್ರಮ ಎಂದು ಕಾಗವಾಡ ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಎಸ್.ಎಸ್ ಭಾವಿ ಹೇಳಿದರು.



ಅವರು ಕಾಗವಾಡದಲ್ಲಿ ಮಾತನಾಡಿ ಲಕ್ಷಾಂತರ ನೌಕರರ ಪ್ರಮುಖ ಬೇಡಿಕೆಯಾದ ಆರೋಗ್ಯ ಸಂಜೀವಿನಿ ಯೋಜನೆ ಜಾರಿಗೆ ಮಾನ್ಯ ಮುಖ್ಯಮಂತ್ರಿಗಳಿಗೆ, ಉಪಮುಖ್ಯಮಂತ್ರಿಗಳಿಗೆ, ಸ್ಥಳೀಯ ಶಾಸಕರಾದ ರಾಜು ಕಾಗೆಯವರಿಗೆ,ಜಾರಿಗೆ ಶ್ರಮಿಸಿದ ನೌಕರರ ಸಂಘದ ರಾಜ್ಯಾಧ್ಯಕ್ಷರಾದ ಸಿ.ಎಸ್.ಷಡಾಕ್ಷರಿಯವರಿಗೆ ಹಾಗೂ ರಾಜ್ಯದ ಪದಾಧಿಕಾರಿಗಳಿಗೆ ಕಾಗವಾಡ ತಾಲ್ಲೂಕು ನೌಕರರ ಪರವಾಗಿ ಧನ್ಯವಾದಗಳು ಹೇಳಿದರು. ಈ ವೇಳೆ ಶಿಕ್ಷಕರ ಸಂಘದ ಅಧ್ಯಕ್ಷ ಎಂ ಜಿ ಸಂಕಪಾಳ, ಆರೋಗ್ಯಾಧಿಕಾರಿ ಡಾ. ಪುಷ್ಪಲತಾ ಸುನ್ನದಕಲ್ಲ,ಡಾ. ಅಭಿನಂದ ಪಾಟೀಲ,ರವೀಂದ್ರ ನಾಂದಣಿ,ಆಕಾಶಿ ಲಾಟವಡೆ,ಸುಜಾತಾ ಪಾಟೀಲ,ಗುಲಾಬ ಮಾಂಜರೆ, ಆನಂದ ಮೇತ್ರಿ,ಅಪ್ಪು ಕೋಳಿ, ಆನಂದ ಕಂಬಾರ,ಅಮಸಿದ್ಧ ಖೋತ ಅಶೋಕ ಮಗದುಮ್ಮ, ಎಸ್ ಟಿ ನಾಂದ್ರೆ, ಡಿ ಕೆ ಹಿರೇಮಠ ಇದ್ದರು.

## ಪುಟ್ಟರಾಜ ಗವಾಯಿಗಳ 15ನೇ ಪುಣ್ಯಾರಾಧನೆ

**ಗದಗ:** ಪರಮಪೂಜ್ಯ ಪದ್ಮ ಭೂಷಣ, ಡಾ ಪಂಡಿತ ಪುಟ್ಟರಾಜ ಗವಾಯಿಗಳವರ 15 ನೇ ಪುಣ್ಯಾರಾದನೆ, ಹಾಗೂ ನಾದಶ್ರೀ ಸಂಗೀತ ಪಾಠಶಾಲೆ ವಾರ್ಷಿಕೋತ್ಸವ, ಗಾನಗಂದ ವ್ರ ಕಲಾ ಟ್ರಸ್ಟ್ ಗದಗ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರ ಇವರ ಸಹಯೋಗದಲ್ಲಿ ನಡೆಯಿತು.

ದಿವ್ಯ ಸಾನಿದ್ಯವನ್ನು ಪೂಜ್ಯ ಶ್ರೀ ಮನಿಪ್ರ ಡಾ ಕೊಟ್ಟೂರೇಶ್ವರ ಮಹಾಸಾಗರ ದಿವ್ಯ ಸಾನಿದ್ಯ ಹಾಗೂ ಪೂಜ್ಯ ಶ್ರೀ ವೀರೇಶ್ವರ ಶರಣರ ಸಮ್ಮುಖದಲ್ಲಿ ನಡೆಯಿತು.

ಕಾರ್ಯಕ್ರಮ ವನ್ನು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಪೊಲೀಸ ಇನ್ಸ್ಪೇಕ್ಟರ ಮಾರುತಿ ಎಸ್ ಜಗದಂಡಕರ ಉದ್ಘಾಟಿಸಿ ಮಾತನಾಡಿ,ಆಟೋ ಡ್ರೈವರ್ ಆಗಿದ್ದ ನಾನು ಇಂದು ರಾಷ್ಟ್ರ ಪ್ರಶಸ್ತಿ ಪಡೆದು ಪಿ ಎಸ್ ಐ ಆಗಿ ನಿಮ್ಮ ಮುಂದೆ ನಿಂತಿದ್ದೇನೆ ಇದಕ್ಕೆ ಕಾರಣ ನನ್ನಲ್ಲಿದ್ದ ಸ್ಪಷ್ಟ ಗುರಿ, ಅಚಲ ನಿರ್ಧಾರ, ಹಾಗೂ ಕಠಿಣ ಶ್ರಮ ಲಕ್ಷ ಲಕ್ಷ ಖರ್ಚು ಮಾಡಿ ಮನೆ ಕಟ್ಟಿಸುವ ನೀವು ಸಾವಿರಾರು ರೂಪಾಯಿ ಸಿ ಸಿ ಕ್ಯಾಮೆರಾ ಅಳವಡಿಸಲು ಹಿಂಜರಿಯಬೇಡಿ ಇದು ನಿಮ್ಮ ರಕ್ಷಣೆ ಅಪರಾಧ ಪತ್ತೆ ಹಚ್ಚಲು ತುಂಬಾ ಅವಶ್ಯಕವಾಗಿದೆ ಎಂದು ಹೇಳಿದರು.

ಇದೆ ವೇಳೆ ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಪೊಲೀಸ ಇನ್ಸ್ಪೇಕ್ಟರ ಮಾರುತಿ ಎಸ್ ಜಗದಂಡಕರ ಸನ್ಮಾನಿಸಲಾಯಿತು.

ಪೂಜ್ಯ ಮನೀಪ್ರ ಅಭಿನವ ಡಾ ಕೊಟ್ಟೂರೇಶ್ವರ ಮಹಾಸ್ವಾಮಿಗಳು ಗುರು ಕಾರುಣ್ಯ ಎಂಬುವುದು ಸ್ಪರ್ಶ ಮಣಿಯಂತೆ ಗವಾಯಿಗಳವರ ಕಾರುಣ್ಯ ಬಿಕ್ಷಾ ಪಾತ್ರೆ ಹಿಡಿಯಬೇಕಿದ್ದ ಕೈಗಳು ಸಂಗೀತ ವಾದ್ಯ ಹಿಡಿದು ಸ್ವಾಭಿಮಾನದ ಬದುಕು ಹಿಡಿದರು ಎಂದು ಹೇಳಿದರು. ಈ ಸಂದರ್ಭದಲ್ಲಿ ಉಮೇಶ, ದ್ರುವಕುಮಾರ,ಅಂಬಾದಾಸ, ಬಸಪ್ಪ ಗುಡಿಮನಿ, ಕಲಾವಿದ ಇದ್ದರು.

## ನಿರಂತರ ಮಳೆ ಬೆಳೆಗಳಲ್ಲಿ ನೀರು



**ಬಸವನಬಾಗೇವಾಡಿ:** ಪಟ್ಟಣ ಸೇರಿದಂತೆ ತಾಲೂಕಿನಲ್ಲಿ ಶನಿವಾರ ಬೆಳಗ್ಗೆ ಮಳೆ ಕೊಂಚ ವಿರಾಮ ನೀಡಿದರೂ ನಂತರ ಸುಮಾರು 9 ಗಂಟೆಯ ನಂತರ ಮತ್ತೆ ಮಳೆ ಆರಂಭವಾಯಿತು. ಮಧ್ಯಾನ್ಹ ಹೊತ್ತಿಗೆ ಸಂಪೂರ್ಣ ಮಳೆ ವಿರಾಮ ನೀಡಿದ್ದರಿಂದಾಗಿ ಮಾರುಕಟ್ಟೆ ಪ್ರದೇಶದಲ್ಲಿ ಜನರ ಸಂಚಾರ ಹೆಚ್ಚು ಕಂಡುಬಂದಿತ್ತು.

ಇಡೀ ದಿನ ಮೋಡ ಕವಿದ ವಾತಾವರಣ ಕಂಡುಬಂದಿತ್ತು.ನಿರಂತರ ಮಳೆಯಿಂದಾಗಿ ಜನರು ಮನೆಯಿಂದ ಅಷ್ಟಾಗಿ ಹೊರಗೆ ಬರಲಿಲ್ಲ. ನಾಲ್ಕನೇ ಶನಿವಾರ ಸರ್ಕಾರಿ ರಜೆ ಇರುವದರಿಂದಾಗಿ ಬ್ಯಾಂಕು, ಸರ್ಕಾರಿ ಕಚೇರಿಗಳಿಗೆ ರಜೆ ಇತ್ತು.ಇದರಿಂದಾಗಿ ಜನರು ಅಷ್ಟಾಗಿ ಕಂಡುಬರಲಿಲ್ಲ. ನಿರಂತರ ಮಳೆಯಿಂದಾಗಿ ಕೆಲ ಜಮೀನುಗಳಲ್ಲಿರುವ ಬೆಳೆ ನೀರಲ್ಲಿ ನಿಂತಿರುವದು ಕಂಡುಬಂದಿತ್ತು.

ನಿರಂತರ ಮಳೆಯಿಂದಾಗಿ ತಾಲೂಕಿನ ಮುತ್ತಿಗೆ ಗ್ರಾಮದಲ್ಲಿ ಎರಡು, ಬಿಸನಾಳ ಗ್ರಾಮದಲ್ಲಿ ಮೂರು, ಹಂಚಿನಾಳ ಗ್ರಾಮದಲ್ಲಿ ಒಂದು, ಮಸಬಿನಾಳ ಗ್ರಾಮದಲ್ಲಿ ಎರಡು, ಹೂವಿನಹಿಪ್ಪರಗಿ ಗ್ರಾಮದಲ್ಲಿ ಐದು, ದಿಂಡವಾರ ಗ್ರಾಮದಲ್ಲಿ ಒಂದು ಮನೆ ಹಾನಿಯಾಗಿವೆ ಎಂದು ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ ತಿಳಿಸಿದ್ದಾರೆ.

## ಬೆಳೆ ಹಾನಿ ಜಮೀನುಗಳಿಗೆ ಅಪರ ಜಿಲ್ಲಾಧಿಕಾರಿ ಭೇಟಿ

**ಬಸವನಬಾಗೇವಾಡಿ:** ತಾಲೂಕಿನ ಯರನಾಳ ಗ್ರಾಮ ಹಾಗೂ ಬಸವನಬಾಗೇವಾಡಿ ವ್ಯಾಪ್ತಿಯಲ್ಲಿ ನೈಸರ್ಗಿಕ ವಿಕೋಪಗಳಿಂದ ಉಂಟಾಗಿರುವ ಬೆಳೆ ಹಾನಿಯ ಪ್ರದೇಶಗಳಿಗೆ ಶನಿವಾರ ಸಂಜೆ ಅಪರಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ ಭೇಟಿ ನೀಡಿ ಪರಿಶೀಲನೆ ಮಾಡಿದರು.

ತಾಲೂಕಿನ ಯರನಾಳ,ಮನಗೂಳಿ ರೈತ ಬಾಂಧವರು ಅಪರ ಜಿಲ್ಲಾಧಿಕಾರಿಗಳನ್ನು ಭೇಟಿ ಮಾಡಿ, ತೊಗರಿ, ಮೆಕ್ಕೆಜೋಳ, ಹತ್ತಿ ಮತ್ತು ಈರುಳ್ಳಿ ಬೆಳೆಗಳು ಅತಿಯಾದ ಮಳೆಯಿಂದ ನಾಶವಾಗುತ್ತಿದೆ. ಎಲ್ಲ ರೈತ ಬಾಂಧವರಿಗೂ ಬೆಳೆ ಪರಿಹಾರ ನೀಡಬೇಕೆಂದು ಮನವಿ ಮಾಡಿದರು.

ಇದಕ್ಕೆ ಸ್ಪಂದಿಸಿದ ಅಪರ ಜಿಲ್ಲಾಧಿಕಾರಿಗಳು ಕಂದಾಯ, ಕೃಷಿ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಸೆಪ್ಟಂಬರ್ ತಿಂಗಳಲ್ಲಿ ಅತಿಯಾದ ಮಳೆಯಿಂದ ಬೆಳೆ ಹಾನಿಯಾದ ತಾಲೂಕಿನ ಎಲ್ಲಾ ಪ್ರದೇಶಗಳಿಗೆ ಭೇಟಿ ನೀಡಿ ಜಂಟಿ ಸಮೀಕ್ಷೆ ಮಾಡುತ್ತಿದ್ದಾರೆ. ಜಂಟಿ ಸಮೀಕ್ಷಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿ ಪರಿಹಾರ ನೀಡಲಾಗುವುದು. ಬೆಳೆ ಹಾನಿಯಾದ ರೈತರು ಸಂಬಂಧಪಟ್ಟ ಗ್ರಾಮಾಡಳಿತಾಧಿಕಾರಿಗಳು, ಕೃಷಿ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ನೀಡಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ ವೈ. ಎಸ್.ಸೋಮನಕಟ್ಟಿ, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಎಂ.ಎಚ್.ಯರಝುರಿ, ತೋಟಗಾರಿಕೆ ಇಲಾಖೆಯ ಅಧಿಕಾರಿ ಸಿ.ಬಿ.ಪಾಟೀಲ, ಮನಗೂಳಿ ಕಂದಾಯ ನಿರೀಕ್ಷಕ ಸಂತೋಷ ಕುಂಟೋಜಿ, ಕೃಷಿ ಇಲಾಖೆಯ ಅಧಿಕಾರಿಗಳಾದ ಚಿದಾನಂದ ಹಿರೇಮಠ, ಎಸ್.ಎಫ್.ಖಾದ್ರಿ, ಬಿ.ಎಸ್.ಸಕ್ರಿ, ತೋಟಗಾರಿಕೆಯ ಇಲಾಖೆಯ ರಾಘವೇಂದ್ರ ಬಗಲಿ, ಗ್ರಾಮಾಡಳಿತಾಧಿಕಾರಿ ಸಿದ್ರಾಮ ಶಿರಶ್ಯಾಡ ಇತರರು ಇದ್ದರು.



## ಪ್ರವಾಹ ಹಿನ್ನಲೆ: ಮೂವರು ಗರ್ಭಿಣಿಯರ ಸ್ಥಳಾಂತರ



**ಸಿಂದಗಿ:** ಮತಕ್ಷೇತ್ರದ ಆಲಮೇಲ ತಾಲೂಕಿನ ಶಂಬೇವಾಡ ಗ್ರಾಮದ ಹಳೆ ಗ್ರಾಮದಲ್ಲಿದ್ದ ಮೂರು ಜನ ಗರ್ಭಿಣಿಯರನ್ನು ರಕ್ಷಿಸಿ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ.

ದೇವಣಗಾಂವ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಸಂಜೀವಕುಮಾರ ದೊಡಮನಿ, ಗ್ರಾಮ ಲೆಕ್ಕಾಧಿಕಾರಿ ಎಂ.ಕೆ.ಪೂಜಾರಿ ಅವರ ನೇತೃತ್ವದ ತಂಡ ಶಂಬೇವಾಡ ಗ್ರಾಮಕ್ಕೆ ತೆರಳಿ ಹೆರಿಗೆಗಾಗಿ ತವರು ಮನೆಗೆ ಆಗಮಿಸಿದ 9ತಿಂಗಳ ಗರ್ಭಿಣಿಯರಾದ ಸಂತೋಷಿ ನಾಗೇಶ ಕೋಳಿ, ಸವಿತಾ ಚಂದ್ರಕಾಂತ ಕೋಳಿ, ಸುನಂದಾ ಆಕಾಶ ತಳವಾರ ಅವರನ್ನು ಸುರಕ್ಷಿತ ಸ್ಥಳಗಳಿಗೆ ಕಳುಹಿಸಿಕೊಡಲಾಗಿದೆ.

ಪ್ರವಾಹ ಪೀಡಿತ ಗ್ರಾಮದಲ್ಲಿರುವುದನ್ನು ಮನಗಂಡು ಅವರಿಗೆ ಮನವೊಲಿಸಿ ಇಂಥ ಪರಿಸ್ಥಿತಿಯಲ್ಲಿ ತಾವುಗಳು ಸುರಕ್ಷಿತ ಸ್ಥಳದಲ್ಲಿರಬೇಕು. ಹೆರಿಗೆ ನೋವು ಕಾಣಿಸಿಕೊಂಡರೆ ತಮಗೆ ಹೋಗುವುದಕ್ಕೆ ದಾರಿಯ ಅನಾನುಕೂಲತೆಯಿದೆ.

ಆದಕಾರಣ ಈಗಾಗಲೇ ಸುರಕ್ಷಿತ ಸ್ಥಳಗಳಿಗೆ ತೆರಳಬೇಕೆಂದು ಮನವೊಲಿಸಿ ಅವರನ್ನು ಬೋಟ್‌ಗಳಲ್ಲಿ ಪ್ರವಾಹದ ನೀರನ್ನು ದಾಟಿಸಿ ನಂತರ ದೇವಣಗಾಂವ ಆರೋಗ್ಯ ಉಪಕೇಂದ್ರಕ್ಕೆ ಆರೋಗ್ಯ ತಪಾಸಣೆ ಮಾಡಿಸಿ ತಾಲೂಕು ಆಸ್ಪತ್ರೆಗೆ ಸ್ಥಳಾಂತರಿಸುವುದಾಗಿ ಹೇಳಿದಾಗ ಗರ್ಭಿಣಿಯರು ಮತ್ತು ಅವರ ಸಂಬಂಧಿಕರು ನಾವು ನಮ್ಮ ಸಂಬಂಧಿಕರ ಮನೆಗಳಿಗೆ ತೆರಳಿ ಅಲ್ಲಿಯೇ ಉಪಚಾರ ಮಾಡಿಕೊಳ್ಳುವುದಾಗಿ ತಿಳಿಸಿದ ನಂತರ ಅವರನ್ನು ಸುರಕ್ಷಿತವಾಗಿ ಕಳುಹಿಸಿಕೊಡಲಾಯಿತು.

ಅವರ ಜೊತೆಗೆ ಮೂವರು ಅವರ ಮನೆಯವರು ಇಬ್ಬರು ಮಕ್ಕಳು ಸೇರಿದಂತೆ ಒಟ್ಟು ಆರು ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ. ಈ ಸಂದರ್ಭದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾ ಅಧಿಕಾರಿ ಮಲ್ಲಿಕಾರ್ಜುನ ಪೂಜಾರಿ, ಆರೋಗ್ಯ ನಿರೀಕ್ಷಣಾ ಅಧಿಕಾರಿ ಸಂತೋಷ್ ಕೋರಿ, ಆಶಾ ಕಾರ್ಯಕರ್ತೆ ರೇಖಾ ತಳವಾರ, ಮಲಕಣ್ಣ ವಾಲಿಕಾರ ಅವರ ತಂಡ ಗರ್ಭಿಣಿಯರನ್ನು ಆಂಬುಲೆನ್ಸ್‌ನಲ್ಲಿ ಸುರಕ್ಷಿತ ಸ್ಥಳಕ್ಕೆ ಕರೆದೊಯ್ದಿದರು.



ಬನಹಟ್ಟಿಯ ಮಂಗಳವಾರ ಪೇಟೆಯ ಹಟಗಾರ ದೈವ ಮಂಡಳಿಯ ಕಾರ್ಯಾಲಯದಲ್ಲಿ ನಗರಸಭಾಧ್ಯಕ್ಷೆ ವಿದ್ಯಾ ಧಬಾಡಿ ಹಾಗೂ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷರಾಗಿ ಆಯ್ಕೆಯಾದ ದಾನಪ್ಪ ಹುಲಜತ್ತಿ ಅವರನ್ನು ಸನ್ಮಾನಿಸಲಾಯಿತು

### ಪಿ.ಎಮ್.ನಾಡಗೌಡ ಸ್ಮಾರಕ ದಂತ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಪದವಿ ಪ್ರದಾನ ಸಮಾರಂಭ

# ದೇಶದ ಅರಿವಿನೊಂದಿಗೆ ವೃತ್ತಿ ಜೀವನದಲ್ಲಿ ಶಿಸ್ತು ಅಗತ್ಯ

**ಬಾಗಲಕೋಟೆ:** ಪದವಿ ಪೂರ್ಣಗೊಳಿಸುವುದು ಬದುಕಿನ ಮಹತ್ವದ ಘಟ್ಟ. ವೃತ್ತಿಯಂಬ ಜೀವನ ಪರೀಕ್ಷೆಯಲ್ಲಿ ಧೈರ್ಯ ಮತ್ತು ಶಿಸ್ತು ಅಗತ್ಯವಾಗಿದ್ದು ಪ್ರತಿಯೊಬ್ಬರಿಗೂ ದೇಶದ ಅರಿವು ಕೂಡ ಅಷ್ಟೆ ಮುಖ್ಯ ಎಂದು ಕರ್ನಾಟಕ ರಾಜ್ಯ ಸರ್ಕಾರದ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಪೋಲಿಸ್ ಉಪಮಹಾನಿರೀಕ್ಷಕರಾದ ರವಿ ಚನ್ನಣ್ಣವರ್ ಹೇಳಿದರು.

ಅವರು ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಶತಾಬ್ಧಿ ಭವನದಲ್ಲಿ ಶುಕ್ರವಾರ ಬಿ,ವಿ,ವಿ.ಸಂಘದ ಪಿ.ಎಮ್.ನಾಡಗೌಡ ಸ್ಮಾರಕ ದಂತ ವೈದ್ಯಕೀಯ ವಿದ್ಯಾರ್ಥಿಗಳ 34 ನೇ ಪದವಿ ಪ್ರದಾನ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಪದವಿ ಪ್ರದಾನಮಾಡಿ ಮಾತನಾಡಿದ ಅವರು ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವುದು ಪಾಲಕರ ಅಭಿಲಾಷೆಯಾಗಿದೆ. ಅವರ ಅಪಾರ ತ್ಯಾಗ ಮತ್ತು ಪರಿಶ್ರಮದಿಂದ ಇಂದು ನೀವು ಉನ್ನತ ಶಿಕ್ಷಣ ಪಡೆಯಲು ಸಾಧ್ಯವಾಗಿದೆ. ದೌರ್ಬಲ್ಯಗಳನ್ನು ಬದಿಗೆ ಸರಿಸಿ ವೃತ್ತಿಯಲ್ಲಿ ಶ್ರೇಷ್ಠವಾದದ್ದನ್ನು ಸಾಧಿಸಿ. ತಂದೆ ತಾಯಿಯರನ್ನು ಗೌರವಿಸಿ, ಸಮಾಜ ದೌರ್ಬಲ್ಯಕ್ಕೆ ಮನ್ನಣೆ ನೀಡಲಾರದು. ಸಮಾಜಕ್ಕೆ ಕಾಡುವ ಎಲ್ಲ ಸಮಸ್ಯೆಗಳು ನಮ್ಮನ್ನು ಕಾಡಬಹುದು, ಕೋರ್ಟನಲ್ಲಿ 50ಮಿಲಿಯನ್ ದೂರುಗಳು ಬಾಕಿ ಇವೆ, ಬಾಗಲಕೋಟಯಂತಹ ಜಿಲ್ಲೆಯಲ್ಲಿ ವರ್ಷಕ್ಕೆ 6 ಸಾವಿರ ಅಪರಾದಗಳು ವರದಿಯಾಗುತ್ತವೆ, ಹಲವಾರು ಕಾರಣಗಳಿಂದ ವರದಿಯಾಗದ ಅಪರಾದಗಳು ಇನ್ನು ಜಾಸ್ತಿ ಇರುತ್ತವೆ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಹೋರಾಡಿ ಪಡೆಯುವ ಹಕ್ಕುಗಳೆ ಹೆಚ್ಚು, ಆಡಳಿತಶಾಹಿಯನ್ನು ಪ್ರಶ್ನಿಸದೆ ಓದರೆ, ಬಲಾಡ್ಯರು ಅಧಿಕಾರ ಸ್ಥಾನದಲ್ಲಿ ಕೂತರೆ ಜಿಲ್ಲೆ, ರಾಜ್ಯ ಕಪ್ಪು ಕಳಂಕವಾಗಿ ಮಾರ್ಪಾಡುವಾಗುವ ಸಾದ್ಯತೆ ಇರುತ್ತದೆ, ಪ್ರತಿ ಪ್ರಜೆ ನನ್ನನ್ನಾಳುವವನಾರು, ನಮ್ಮ ನಿಯಂತ್ರಣವೇನು ಅದನ್ನು ನಾವು ತಿಳಿದುಕೊಳ್ಳಬೇಕು, ಅದಕ್ಕೆ ಕಾನೂನಿನ ನಿಯಮಗಳು, ಪೋಲೀಸರ ಕಾರ್ಯವೈಖರಿ, ರಾಜಕಾರಣದ ದಿಕ್ಕು, ರಾಜ್ಯ ಹಾಗೂ ದೇಶದ ಅಭಿವೃದ್ಧಿ ಸೇರಿದಂತೆ ಎಲ್ಲದರ ಅರಿವು ಇಂದಿನ ಯುವ ವಿದ್ಯಾರ್ಥಿಗಳಿಗೆ ಅತ್ಯಗತ್ಯವಾಗಿದ್ದು, ಪ್ರಶ್ನಿಸುವ ದೈರ್ಯವನ್ನು ಬೆಳೆಸಬೇಕಾಗಿದೆ, ಒಬ್ಬ ಉತ್ತಮ ವ್ಯಕ್ತಿ ಜವಾಬ್ದಾರಿ ಸ್ಥಾನದಲ್ಲಿದ್ದರೆ, ಅವರಿಂದಾದಬಹುದಾದ ಎಲ್ಲ ಸಮಾಜಮುಖಿ ಕಾರ್ಯಗಳಿಗೆ ಕೆಲಸಕ್ಕೆ ಅನ್ವರ್ಥಕ ಇನ್ನೊಂದು ಹೆಸರು, ರಾಜಕಾರಣ ಎಂದರೆ ನಿರಾಸಕ್ತಿ ಹುಟ್ಟುತ್ತಿರುವ ಇಂದಿನ ಕಾಲದಲ್ಲಿ ಒಬ್ಬ ಋಷಿ ರಾಜಕಾರಣಿಯಾದರೆ ಹೇಗೆ ಕೆಲಸ ಮಾಡಬಹುದು ಎಂಬುದನ್ನು ರಾಜ್ಯಕ್ಕೆ ತೋರಿಸಿಕೊಟ್ಟವರು ಡಾ.ವೀರಣ್ಣ ಚರಂತಿಮಠರು, ಅವರ ಮುಂದಾಳತ್ವದಲ್ಲಿ ಬಿ.ವಿ.ವಿ ಸಂಘ ಶೈಕ್ಷಣಿಕ ಕ್ಷೇತ್ರದಲ್ಲಿ ಮಾಡಿರುವ ಸಾಧನೆ ಶ್ಲಾಘನೀಯ ಎಂದರು.



ಅಧ್ಯಕ್ಷತೆಯನ್ನು ವಹಿಸಿದ ಸಂಘದ ಕಾರ್ಯಾಧ್ಯಕ್ಷರಾದ ಡಾ.ವೀರಣ್ಣ ಚರಂತಿಮಠ ಅವರು ಮಾತನಾಡಿ ಶಿಕ್ಷಣ ಪಡೆದ ಕಾಲೇಜಿಗೆ ಕೀರ್ತಿ ತರುವ ಕೆಲಸ ವೈದ್ಯರಾಗಿ ಮಾಡಬೇಕು. ಬಿ.ವಿ.ವಿ ಸಂಘದ ದಂತ ಕಾಲೇಜು ಇಂದು ರಾಷ್ಟ್ರ ಮಟ್ಟದಲ್ಲಿ ಗುರುತಿಸುವಂತೆ ಬೆಳೆದು ನಿಂತಿದೆ. ಯುವ ವೈದ್ಯರಾಗಿ ಕರ್ತವ್ಯನಿಷ್ಠೆ ನಿಮ್ಮಲ್ಲಿರಲಿ. ಬಿ.ವಿ.ವಿ ಸಂಘದಲ್ಲಿ ಶಿಕ್ಷಣ ಪಡೆಯಲು ವಿದ್ಯಾರ್ಥಿಗಳಿಗೆ ಅಗತ್ಯವಾದ ಎಲ್ಲ ಸೌಲಭ್ಯಗಳಿವೆ. ವಿದ್ಯಾರ್ಥಿಗಳು ಈ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಹೇಳಿದರು.

**ಪದವಿ ಪ್ರಧಾನ:** 98 ಬಿ.ಡಿ.ಎಸ್ ಮತ್ತು 7 ಎಮ್.ಡಿ.ಎಸ್ ದಂತವೈದ್ಯ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು. ಮೂರು ರ್‍ಯಾಂಕ್ ವಿಜೇತ ವಿದ್ಯಾರ್ಥಿಗಳನ್ನು ಹಾಗೂ ರವಿ ಚನ್ನಣ್ಣವರ್ ಅವರನ್ನು ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ಬಿ.ವಿ.ವಿ ಸಂಘದ ಗೌರವ ಕಾರ್ಯದರ್ಶಿ ಮಹೇಶ.ಎನ್. ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್. ಸಜ್ಜನ (ಬೇವೂರ), ಪ್ರಾಚಾರ್ಯ ಡಾ.ಶ್ರೀನಿವಾಸ ವನಕಿ ಮತ್ತು ವಿವಿಧ ವಿಭಾಗಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

# ಶೇರುದಾರರು ಸಹಕಾರಿ ಸಂಘದ ನಿಜವಾದ ಆಸ್ತಿ

## ಸಂಗಮೇಶ್ವರ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘದ ಬ್ಯಾಂಕ 12.60 ಲಕ್ಷ ರೂ ನಿವ್ವಳ ಲಾಭ

**ಮುದ್ದೇಬಿಹಾಳ:** ಕೇಸಾಪೂರ ಶ್ರೀ ಸಂಗಮೇಶ್ವರ ಸಹಕಾರಿ ಸಂಘದ ನಿಜವಾದ ಆಸ್ತಿಯಂದರೆ ಅದು ಸಂಘದ ಶೇರುದಾರರು ಮತ್ತು ರೈತರು ಅವರ ವಿಶ್ವಾಸದಿಂದ ಇಂದು ಸಂಘ ರಾಜ್ಯದಲ್ಲಿ ಉತ್ತಮ ಸಹಕಾರಿ ಸಂಘವೆಂದು ಗುರುತಿಸಿಕೊಂಡಿದೆ ಎಂದು ಮುಖ್ಯ ಕಾರ್ಯನಿರ್ವಾಹಾಧಿಕಾರಿ ರಾಮಣ್ಣ ಖಾನಾಪೂರ ಹೇಳಿದರು.

ತಾಲ್ಲೂಕಿನ ಕೇಸಾಪೂರ ಗ್ರಾಮದ ಶ್ರೀ ಸಂಗಮೇಶ್ವರ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘದ 25 ನೇ ವಾರ್ಷಿಕ ಮಹಾಸಭೆ ವಾರ್ಷಿಕ ವರದಿ ವಾಚಿಸಿ ಮಾತನಾಡಿದರು ಸಂಘ ಆರಂಭದಲ್ಲಿ 350 ಸದಸ್ಯರು ಹಾಗೂ ,3.50 ಲಕ್ಷ ದುಡಿಯುವ ಬಂಡವಾಳದೂಂದಿದೆ ಆರಂಭಗೊಂಡ ಇಂದು 2610 ಸದಸ್ಯರು ಹಾಗೂ 22 ಕೋಟಿ ರೂ ದುಡಿಯುವ ಬಂಡವಾಳ ಹೊಂದಿದೆ ಪ್ರಸ್ತಕ ವರ್ಷ ಸಂಘ 12.60 ಲಕ್ಷ ರೂ ನಿವ್ವಳ ಲಾಭಗಳಿಸಿದೆ ಎಂದರು.

ಸಕಾಲದಲ್ಲಿ ತೆಗೆದುಕೊಂಡು ಸಾಲ ಮರುಪಾವತಿಸಬೇಕು ಕಟ್ ಬಾಕಿ ಆದಲ್ಲಿ ಕಾನೂನು ಕೈಗೊಳ್ಳಲು ಆದೇಶ ಬಂದಿರುತ್ತದೆ ಎಂದು ಮಾಹಿತಿ ನೀಡಿದರು.

ಸಂಘದ ಅಧ್ಯಕ್ಷ ಸಿದ್ದಪ್ಪ ತಳವಾರ, ಉಪಾಧ್ಯಕ್ಷ ಶರಣಪ್ಪ ಗಂಗಾವತಿ, ನಿರ್ದೇಶಕ ಜಗದೀಶ್ ಪಂಪಣ್ಣನವರ ಮಾತನಾಡಿ ಸಂಘದ



ಸದಸ್ಯರು ಸಂಘದಲ್ಲಿ ವ್ಯವಹರಿಸಬೇಕು ಇದರಿಂದ ಸಂಘದ ಏಳ್ಗೆಗೆ ಸಾಧ್ಯವಾಗುತ್ತದೆ ಮತ್ತು ಸಹಕಾರಿ ಸಂಘದಲ್ಲಿಯ ಸಾಲದ ಸದುಪಯೋಗ ಪಡಿಸಿಕೊಂಡು ನಿಯಮಾನುಸಾರ ಸಾಲ ಮರುಪಾವತಿಸಬೇಕು ಸಂಘದ ಸದಸ್ಯರಿಗೆ ವೈಯಕ್ತಿಕ ಅಪಘಾತ ವಿಮೆ, ಯಶಸ್ವಿನಿ ಯೋಜನೆ ಸೌಲಭ್ಯವಿದೆ ಎಂದರು.

ಸಭೆಯಲ್ಲಿ ನಿರ್ದೇಶಕರಾದ ಬಿ ಬಿ ತಳವಾರ,ಜಿ.ಜಿ ಗೌಡರ,ಸಿ.ಎಸ್ ದೇಸಾಯಿ, ಎಸ್ ವೈ ವಡ್ಡರ,ಹೆಚ ಎಂ ಕಂಗಳ, ಎ.ಹೆಚ್ ವಾಲಿಕಾರ, ಗಿರಿಜಾ ಪಾಟೀಲ್, ಜ್ಯೋತಿ ವಡ್ಡರ, ಭುವನೇಶ್ವರಿ ಪಡಶೆಟ್ಟಿ, ವೃತ್ತಿಪರ ನಿರ್ದೇಶಕರಾದ ಎಸ್ ಎ ಬಿರಾದಾರ, ಸಂತೋಷ ಎಚ ಎಂ, ಗಣ್ಯರಾದ ಸಿ.ಎಸ್ ಗೂಳಿ,ಬಸಪ್ಪ ಕೇಸಾಪೂರ, ಕಾಶಪ್ಪ ವಾಲಿಕಾರ, ನಾಗಪ್ಪ ದಡ್ಡಿ, ಶಾಂತಗೌಡ ಬಿರಾದಾರ, ಧರೆಯಪ್ಪ ಜಂಬಗಿ, ಶ್ರೀಶೈಲ ಗೌಡರ, ಮಲ್ಲಪ್ಪ ಊಗರಗೋಳ, ಬೈಲಪ್ಪ ಸಣ್ಣ ಅಯ್ಯನಗೌಡ, ರಾಜು ಚಿನಿವಾರ, ಸಂಗನಗೌಡ ಗೌಡರ, ಶ್ರೀನಿವಾಸ ಗೌಂಡಿ,ಗುರುಬಸಪ್ಪ ಸಜ್ಜನ ಯಮನಪ್ಪ ವಡ್ಡರ, ಅಯ್ಯಪ್ಪ ಕಂಗಳ, ಚನ್ನಪ್ಪ ಗಡಿಣ ಅಶೋಕ ಹಗರಗೊಂಡ, ಅಮಾತ್ಯಪ್ಪ ನಾರಗಲ್ಲ, ಸಂಗನಗೌಡ ಪಾಟೀಲ್ ಸಂಗಪ್ಪ ವಜ್ಜಲ ಸೇರಿದಂತೆ ಸಂಘದ ಸಿಬ್ಬಂದಿಗಳು ಸದಸ್ಯರು ಭಾಗವಹಿಸಿದ್ದರು. ಸ್ವಾಗತ ಎಸ್ ಎಸ್ ವಾಲಿಕಾರ, ಪ್ರಾಸ್ತಾವಿಕ ವೈ ಬಿ ತಳವಾರ,ಬಿ ಕೆ ಬಿರಾದಾರ ನಿರೂಪಿಸಿ ವಂದಿಸಿದರು.

# ಕೊಲೆ ಆರೋಪಿಗಳನ್ನು ಬಂಧಿಸುವಂತೆ ಆಗ್ರಹಿಸಿ ಧರಣಿ

**ಸಿಂದಗಿ:** ಬನ್ನೆಟ್ಟಿ ಪಿಎ ಗ್ರಾಮದ ಪರಿಶಿಷ್ಟ ಜಾತಿಯ ಮಹಾದೇವಪ್ಪ ಪೂಜಾರಿ(ಹರಿಜನ) ಕೊಲೆಗೆ ಸಂಬಂಧಿಸಿದಂತೆ ಆರೋಪಿ ಯಾರೆ ಆಗಿರಲಿ, ಎಷ್ಟೇ ಪ್ರಭಾವಿಯಾಗಿರಲಿ ತೀವ್ರ ಗತಿಯಲ್ಲಿ ಬಂಧಿಸಿ ಶಿಕ್ಷಗೆ ಒಳಪಡಿಸಲಾಗುವುದು ಎಂದು ವಿಜಯಪುರ ಎಸ್ಪಿ ಲಕ್ಷ್ಮಣ ನಿಂಬರಗಿ ಭರವಸೆ ನೀಡಿದರು.

ಸಿಂದಗಿ ಪಟ್ಟಣದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ವಿವಿಧ ದಲಿತಪರ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ಬನ್ನೆಟ್ಟಿ ಪಿಎ ಗ್ರಾಮದ ಪರಿಶಿಷ್ಟ ಜಾತಿಯ ವ್ಯಕ್ತಿಯ ಕೊಲೆ ಆರೋಪಿಗಳನ್ನು ಕೂಡಲೇ ಬಂಧಿಸುವಂತೆ ಆಗ್ರಹಿಸಿ ನಡೆಯುತ್ತಿರುವ ಅಹೋರಾತ್ರಿ ಧರಣಿ ಸ್ಥಳಕ್ಕೆ ಭೇಟಿ ನೀಡಿ ಮಾತನಾಡಿದ ಅವರು, ಈಗಾಗಲೇ ಪ್ರಕರಣವು ತನಿಖೆಯ ಹಂತದಲ್ಲಿದೆ. ಹೋರಾಟಗಾರರು ಆರೋಪಿಸುತ್ತಿರುವಂತೆ ಇಲ್ಲಿ ಯಾವುದೇ ಪ್ರಭಾವಕ್ಕೆ ಒಳಗಾಗದೇ ನ್ಯಾಯ ಸಮ್ಮತವಾದ ತನಿಖೆ ನಡೆಸಲಾಗುತ್ತಿದೆ. ಮೃತ ವ್ಯಕ್ತಿಯ ಶವವು ಕೊಳೆತ ಸ್ಥಿತಿಯಲ್ಲಿ ದೊರಕಿದಾಗ ವೈಜ್ಞಾನಿಕ ಪರೀಕ್ಷೆಗೊಳಪಡಿಸಿದಾಗ ತಲೆಗೆ ಬಲವಾದ ಗಾಯ ಹಾಗೂ ಶರೀರದ ಮೇಲೂ ಗಾಯವಾಗಿರುವುದು ಗಮನಕ್ಕೆ ಬಂದಾಗ ಇದೊಂದು ಕೊಲೆ ಪ್ರಕರಣವೆಂದು ದಾಖಲಿಸಿಕೊಳ್ಳಲಾಯಿತು.

ಎಲ್ಲ ಕೊಲೆ ಪ್ರಕರಣಗಳು ಒಂದೆ ತೆರನಾಗಿ ಇರುವುದಿಲ್ಲ, ಪ್ರತಿಯೊಂದಕ್ಕೂ ವಿವಿಧ ಆಯಾಮಗಳಿರುತ್ತವೆ. ಅವುಗಳ ಆಧಾರದ ಮೇಲೆ ತನಿಖೆ ಮಾಡುವಾಗ ವಿಳಂಬವಾಗುವುದು ಸಹಜ. ನ್ಯಾಯಾಲಯ ನೀಡಿದ ದಿನಾಂಕ



ಮತ್ತು ಅವಧಿಗಳು ಎಫ್‌ಎಸ್‌ಎಲ್ ವರದಿಗಳು ನೀಡಲು ತೆಗೆದುಕೊಂಡ ಕಾಲಾವಕಾಶದ ಮೇಲೆ ಒಂದು ಪ್ರಕರಣ ಇತ್ಯರ್ಥವಾಗುವ ಕಾಲಾವಕಾಶ ನಿರ್ಧಾರವಾಗುತ್ತದೆ. ಹಾಗಾಗಿ ಈ ಪ್ರಕರಣ ಒಂದು ಹಂತಕ್ಕೆ ಬರಲು 15ದಿವಸಗಳಾಗಬಹುದು ಅಥವಾ ನಾಲ್ಕಾರು ತಿಂಗಳುಗಳಷ್ಟು ಸಮಯವನ್ನಾದರು ತೆಗೆದುಕೊಳ್ಳಬಹುದು. ಹೋರಾಟ ಮಾಡಿದರೇನೆ ನ್ಯಾಯ ಸಿಗುತ್ತದೆ ಎನ್ನುವ ಭಾವನೆ ಇಟ್ಟುಕೊಳ್ಳದೇ ಪೊಲೀಸ್ ಇಲಾಖೆಯ ಮೇಲೆ ಭರವಸೆ ಇಟ್ಟು ಹೋರಾಟವನ್ನು ಹಿಂಪಡೆಯುವಂತೆ ಪ್ರತಿಭಟನಾಕಾರರಲ್ಲಿ ಮನವಿ ಮಾಡಿದರು.

ಈ ವೇಳೆ ರಾಜ್ಯ ಸಂಚಾಲಕ ರಮೇಶ ಆಸಂಗಿ, ಜಿಲ್ಲಾ ಸಂಚಾಲಕ ವಿನಾಯಕ ಗುಣಸಾಗರ, ಚಂದ್ರಕಾಂತ ಸಿಂಗೆ, ಶರಣು ಸಿಂಧೆ, ಅಶೋಕ ಛಲವಾದಿ, ಶ್ರೀನಿವಾಸ ಓಲೇಕಾರ, ಪ್ರಕಾಶ ಗುಡಿಮನಿ, ಸುಭದ್ರಾ ಮೇಲಿನಮನಿ ಮಾತನಾಡಿ, ಹಲವಾರು ಬಾರಿ ಸಂಶಯಾಸ್ಪದ ವ್ಯಕ್ತಿಗಳ ಹೆಸರುಗಳನ್ನು ಇಲಾಖೆಗೆ ತಿಳಿಯ ಪಡಿಸಲಾಗಿದ್ದರೂ ಇಲಾಖೆ ಕ್ರಮಕೈಗೊಂಡಿಲ್ಲ. ಇಲಾಖೆಯ ಮೇಲೆ ಅಥವಾ ಇನ್ನಾರನ್ನು ಗುರಿಯಾಗಿಟ್ಟುಕೊಂಡು ಹೋರಾಟ ಮಾಡುತ್ತಿಲ್ಲ. ಬಡ ದಲಿತ ನಿರ್ಗತಿಕ ಕುಟುಂಬಕ್ಕೆ ನ್ಯಾಯ ಸಿಗಬೇಕು ಅಪರಾಧಿ ಪತ್ತೆಯಾಗಿ ಶಿಕ್ಷಗೊಳಪಡಬೇಕು ಹಾಗೂ ಭಯ ಮತ್ತು ಪ್ರಾಣ ಭೀತಿಯಿಂದ ತತ್ತರಿಸಿ ಹೋಗಿರುವ ಸಂತ್ರಸ್ತ ಕುಟುಂಬಕ್ಕೆ ಸೂಕ್ತ ರಕ್ಷಣೆ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಈ ವೇಳೆ ರವಿ ಹೊಳಿ, ರವಿ ತಳಕೇರಿ, ರವಿ ಅಲಹಳ್ಳಿ, ಮುತ್ತು ಸುಲ್ಪಿ, ಸಾಗರ ಹೊಸಮನಿ, ಶ್ರೀಕಾಂತ ಸೋಮಜ್ಯಾಳ, ಲಕ್ಷ್ಮಣ ಬನ್ನೆಟ್ಟಿ, ಗುರು ಬಿದರಿ ಸೇರಿದಂತೆ ಬನ್ನೆಟ್ಟಿ ಗ್ರಾಮಸ್ಥರು, ಮಹಿಳೆಯರು ಧರಣಿಯಲ್ಲಿ ಪಾಲ್ಗೊಂಡಿದ್ದರು.

# 13ಯೋಜನೆಗಳಡಿ ಅರ್ಜಿ ಆಹ್ವಾನ

**ಗದಗ:** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಇಲಾಖೆಯ 13 ಫಲಾನುಭವಿ ಆಧಾರಿತ ಯೋಜನೆಗಳನ್ನು 2025–26ನೇ ಸಾಲಿನಲ್ಲಿ ಉಲ್ಲೇಖಿತ ಪತ್ರದನ್ವಯ ಸುವಿಧಾ ಯೋಜನೆ ಇವರಿಂದ ಡಿ.ಬಿ.ಟಿ (ನೇರ ನಗದು ವರ್ಗಾವಣೆ) ಆನ್‌ಲೈನ್ ವೇದಿಕೆ ತಂತ್ರಾಂಶದಡಿ ಅಳವಡಿಸಲಾಗುತ್ತಿದೆ. ಆನಲೈನ್ ವೇದಿಕೆಯಲ್ಲಿ ಅಳವಡಿಸಲಾಗಿರುವ ಯೋಜನೆಗಳ ಪಟ್ಟಿ. **ಯೋಜನೆಗಳ ವಿವರ** : ಆಧಾರ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ದೃಷ್ಟಿದೋಷ ಹೊಂದಿರುವ ವಿಕಲಚೇತನರಿಗೆ ಬ್ರೈಲ್‌ಕಿಟ್ ಯೋಜನೆ, ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಯೋಜನೆ, ದೈಹಿಕ ವಿಕಲಚೇತನರಿಗೆ ಯಂತ್ರ ಚಾಲಿತ ದ್ವಿಚಕ್ರ ವಾಹನ ಯೋಜನೆ, ನಿರುದ್ಯೋಗ ಭತ್ಯೆ ಯೋಜನೆ, ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ಶಿಶುಪಾಲನಾ ಭತ್ಯೆ ಯೋಜನೆ, ಸಾಧನೆ ಸಲಕರಣೆಗಳ ಯೋಜನೆ, ಮರಣ ಪರಿಹಾರ ನಿಧಿ ಯೋಜನೆ, ವಿಕಲಚೇತನ ವ್ಯಕ್ತಿಗಳಿಗೆ ಬ್ಯಾಟರಿ ಚಾಲಿತ ವ್ಹೀಲ್ ಚೇರ್ ಯೋಜನೆ, ಪ್ರತಿಭೆ ಯೋಜನೆಗಳು ಒಳಗೂಂಡಿವೆ. ಯೋಜನೆಗಳಿಗೆ 2025–26ನೇ ಸಾಲಿಗೆ ವಿಕಲಚೇತನ ಫಲಾನುಭವಿಗಳು ಆನಲೈನ್ ಸೇವಾ ಸೀಂಧು ತಂತ್ರಾಂಶದ ಮೂಲಕ ಮೂಲಕ ಗ್ರಾಮ ಒನ್, ಮತ್ತು ಕರ್ನಾಟಕ ಒನ್ ಹಾಗೂ ನೇರವಾಗಿಯು ಸಹ ವಿಕಲಚೇತನರ ವ್ಯಕ್ತಿಗಳು ಅರ್ಜಿ ಸಲ್ಲಿಸಲು ಸೇವಾಸಿಂಧು (https://sevasindhu.karnataka.gov.in/Sevasindhu/Kannda) ಪೋರ್ಟಲ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ:15/10/2025 ರವರೆಗೆ ದಿನಾಂಕವನ್ನು ಮುಂದೂವರೆಸಿಲಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲೆಯ ತಾಲ್ಲೂಕ ಪಂಚಾಯತಿ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಮ್.ಆರ್.ಡಬ್ಲ್ಯೂ ?ಯ ಖಾಜಾಹುಸೇನ ಕಾತರಕಿ, ತಾಲ್ಲೂಕ ಪಂಚಾಯತ ಗದಗ 8867556465, ಬಸವರಾಜ ಓಲಿ, ತಾಲ್ಲೂಕ ಪಂಚಾಯತ, ರೋಣ–9741615926, ಶಶಿಕಲಾ ವಡ್ಡಟ್ಟಿ, ತಾಲ್ಲೂಕ ಪಂಚಾಯತ, ಮುಂಡರಗಿ:9611922445, ಭಾರತಿ ಮುರಶಿಳ್ಳಿ, ತಾಲ್ಲೂಕ ಪಂಚಾಯತ, ಶಿರಹಟ್ಟಿ 8951128679 ಶಿವಾನಂದ ಹಾದಿಮನಿ, ತಾಲ್ಲೂಕ ಪಂಚಾಯತ, ನರಗುಂದ:9591679022 ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಗದಗ ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ: 029 ರ ದೂರವಾಣಿ ಸಂಖ್ಯೆ: 08372–220419 ಮೂಲಕ ಸಂಪರ್ಕಿಸಬಹುದು ಎಂದು ಅಂಗವಿಕಲರ ಕಲ್ಯಾಣಾಧಿಕಾರಿಗಳು ಕೆ. ಮಹಾಂತೇಶ ತಿಳಿಸಿರುತ್ತಾರೆ.



ಬಾಗಲಕೋಟೆ ಜಿಲ್ಲೆಯ ರಬಕವಿ–ಬನಹಟ್ಟಿ ತಾಲೂಕಿನ ಮಹಾಂತ ಮಂದಾರ ಮಠಕ್ಕೆ ಚಲನಚಿತ್ರ ನಟ ವಿನೋದರಾಜ ತಮ್ಮ ತಾಯಿ ಖ್ಯಾತ ನಟಿ ಎಂ.ಲೀಲಾವತಿ ಅವರ ಸ್ಮರಣಾರ್ಥವಾಗಿ ಮಠಕ್ಕೆ ಕಾರೊಂದನ್ನು ದಾನ ಮಾಡಿದ ಕಾರಣ ಮಠದ ಶ್ರೀಗಳಾದ ಮಹಾಂತ ದೇವರು ನಟ ವಿನೋದರಾಜ್‌ರನ್ನು ಗೌರವಿಸಿದರು.

# ವಿದ್ಯೆ ವ್ಯಕ್ತಿತ್ವ ರೂಪಿಸುವ ಸಾಧನವಾಗಲಿ

**ಧಾರವಾಡ:** ವಿದ್ಯೆ ವ್ಯಕ್ತಿತ್ವ ರೂಪಿಸುವ ಸಾಧನವಾಗಬೇಕು. ಸ್ವಾವಲಂಬಿ ಬದುಕಿಗೆ ದಾರಿಯಾಗಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಾಜಿ ಸಚಿವೆ ಲೀಲಾವತಿ ಆರ್. ಪ್ರಸಾದ ಅಭಿಪ್ರಾಯಪಟ್ಟರು.

ಕರ್ನಾಟಕ ವಿದ್ಯಾವರ್ಧಕ ಸಂಘವು, ಶಾಂತಲಾ ಪಾಟೀಲ ಸಾಹಿತ್ಯ ಪುರಸ್ಕಾರ ದತ್ತಿ ಅಂಗವಾಗಿ ಆಯೋಜಿಸಿದ್ದ ಸಮಾರಂಭದಲ್ಲಿ 'ಶಾಂತಲಾ ಪಾಟೀಲ ಸಾಹಿತ್ಯ ಪುರಸ್ಕಾರ–2025' ಪ್ರದಾನ ಮಾಡಿ ಅವರು ಮಾತನಾಡುತ್ತಿದ್ದರು.

ಇಂದಿನ ಸಂಧಿಗ್ದ ಪರಿಸ್ಥಿತಿಯಲ್ಲಿ ಮಹಿಳೆಯರಿಗೆ ಶಿಕ್ಷಣದ ಜೊತೆಗೆ ಉದ್ಯೋಗ ಸೃಷ್ಟಿಯಾಗಬೇಕು. ದಿನ ಬೆಳಗಾದರೆ ಮಹಿಳೆಯರ ಮೇಲೆ ಅತ್ಯಾಚಾರ, ದೌರ್ಜನ್ಯ ಪ್ರಕರಣಗಳು ಹೆಚ್ಚಾಗುತ್ತಿದ್ದು, ಅವರಿಗೆ ಸೂಕ್ತ ರಕ್ಷಣೆ ಇಲ್ಲದಾಗಿದೆ. ಇದು ನಾಗರಿಕ ಸಮಾಜಕ್ಕೊಂದು ಕಪ್ಪು ಚುಕ್ಕೆ. ಇಂದು ಪುರುಷರು ಸಹ ಈ ಸಮಸ್ಯ ಕುರಿತು ಚಿಂತಿಸಬೇಕಿದೆ ಎಂದು ಹೇಳಿದರು.

ಹುಬ್ಬಳ್ಳಿಯ ಸಾಹಿತಿ ಸುನಂದಾ ಕಡಮೆ ಅಭಿನಂದನಾ ಪರ ಮಾತನಾಡಿ, ಹಾಸನದ ಸಾಹಿತಿ ರೂಪ ಹಾಸನ 'ಪ್ರೇರಣಾ ವಿಕಾಸ ವೇದಿಕೆ'ಯ ಮೂಲಕ ಸಮಾಜದಲ್ಲಿ ನಡೆಯುತ್ತಿರುವ ಕ್ರೌರ್ಯ ಅತ್ಯಾಚಾರ, ಅನಾಚರ ಹಾಗೂ ಸಾಮಾಜಿಕ ಅನಿಷ್ಠ ಪದ್ಧತಿಗಳ ವಿರುದ್ಧ ನಿರಂತರ ಹೋರಾಟ ಮಾಡುತ್ತಿದ್ದಾರೆ. ಮಹಿಳೆಯರು ಸ್ವಾವಲಂಬಿ



ಬದುಕು ಕಟ್ಟಿಕೊಳ್ಳಲು ತಮಗೆ ಸಂದ ಪ್ರಶಸ್ತಿ ಮೊತ್ತವನ್ನೇ ವಿನಿಯೋಗಿಸುತ್ತಿದ್ದಾರೆ. ಇವರು ಸಾಹಿತ್ಯದಲ್ಲಿ ಟಾಲಸ್ಟಾಯರ ಪ್ರಭಾವವಿದೆ. ಎಸ್. ಅರ್. ಹಿರೇಮಠ ಕುರಿತು ಮಹಾಸಂಗ್ರಾಮಿ ಕೃತಿಯನ್ನು ಬರೆದಿದ್ದಾರೆ ಎಂದು ಹೇಳಿದರು.

ಪ್ರಶಸ್ತಿ ಪುರಸ್ಕೃತೆ ರೂಪ ಹಾಸನ್ ಮಾತನಾಡಿ, ನನಗೆ ಸಂದ ಈ ಪ್ರಶಸ್ತಿ ಮೊತ್ತವನ್ನು ಸಮಾಜದಲ್ಲಿ ನೊಂದವರ ವಿದ್ಯಾಭ್ಯಾಸಕ್ಕಾಗಿ ಖರ್ಚು ಮಾಡಲಾಗುತ್ತಿದೆ. ಇಂದು ಮಹಿಳೆಯರ ಮೇಲೆ ದೌರ್ಜನ್ಯ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿದ್ದು, ಕೊಲೆಗಡುಕರ ಸಮಾಜ ಸೃಷ್ಟಿಸುತ್ತಿದ್ದೆನೆಯೋ ಎಂಬ ಭಾವನೆ ಉಂಟಾಗುತ್ತಿದೆ. ಇಂತಹ ಅತ್ಯಾಚಾರ ನೋಡಿ, ಕೇಳಿ ಸುಮ್ಮನಿಸುರುತ್ತಿರುವುದು ಒಂದು ದುರಂತ. ಈ ಪ್ರಶಸ್ತಿಯು ನನ್ನನು ಇನ್ನಷ್ಟು ರಚನಾತ್ಮಕ ಕಾರ್ಯ ಮಾಡಲು ಜವಾಬ್ದಾರಿ ನೀಡಿದೆ ಎಂದರು.

ಕ.ವಿ.ವ. ಸಂಘದ ಅಧ್ಯಕ್ಷ ಚಂದ್ರಕಾಂತ ಬೆಲ್ಲದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರಾರಂಭದಲ್ಲಿ ಡಾ.ಎಸ್.ಎಲ್. ಭೈರಪ್ಪನವರ ನಿಧನಕ್ಕೆ ಒಂದು ನಿಮಿಷ ಮೌನ ಆಚರಿಸಿ, ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಶಂಕರ ಕುಂಬಿ ಸ್ವಾಗತಿಸಿದರು. ಶಂಕರ ಹಲಗತ್ತಿ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿಶ್ವೇಶ್ವರಿ ಬ. ಹಿರೇಮಠ ನಿರೂಪಿಸಿದರು. ವೀರಣ್ಣ ಒಡ್ಡೀನ ವಂದಿಸಿದರು.

ಕಾರ್ಯಕ್ರಮದಲ್ಲಿ ಡಾ. ಸಂಜೀವ ಕುಲಕರ್ಣಿ, ಸತೀಶ ತುರಮರಿ, ಡಾ. ವೀಣಾ ಶಾಂತೇಶ್ವರ, ಎಸ್.ಆರ್. ಹಿರೇಮಠ, ಪಾರ್ವತಿ ಹಾಲಭಾವಿ, ಪ್ರಕಾಶ ಕಡಮೆ ಸೇರಿದಂತೆ ಮುಂತಾದವರಿದ್ದರು.

# ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ಗದಗ:** 2025–26 ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1 ರ ಅಲೆಮಾರಿ/ಅರೆಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಅಲೆಮಾರಿ/ಅರೆಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿವೇತನ, ಶುಲ್ಕಮರುಪಾವತಿ, ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕವನ್ನು 31.10.2025 ರ ವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಅಧಿಕಾರಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಗದಗ ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ



ಬನಹಟ್ಟಿಯ ವಿಠ್ಠಲ ಮಂದಿರ ದೇವಸ್ಥಾನದ ಹತ್ತಿರ ದುರ್ಗಾದೇವಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು.

# ರೇಬಿಸ್ ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ

**ರಾಯಬಾಗ:** ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಉಚಿತ ರೇಬಿಸ್ ಲಸಿಕಾ ಕಾರ್ಯಕ್ರಮಕ್ಕೆ ಶಾಸಕ ಡಿ ಎಂ ಐಹೊಳೆ ರವಿವಾರ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, "ರೇಬಿಸ್ ಒಂದು ಜೀವಕ್ಕೆ ಅಪಾಯಕಾರಿಯಾದ ರೋಗ. ಈ ಲಸಿಕಾ ಅಭಿಯಾನದ ಮೂಲಕ ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳ ನಾಯಿ, ಬೆಕ್ಕು ಸೇರಿದಂತೆ ಸಾಕು ಪ್ರಾಣಿಗಳಿಗೆ ಉಚಿತ ಲಸಿಕೆ ನೀಡಲಾಗುತ್ತಿದ್ದು, ಜನರ ಜೀವ ಭದ್ರತೆಗೂ ಇದು ಅಗತ್ಯ" ಎಂದರು.

ಇದೆ ಸಂದರ್ಭದಲ್ಲಿ ಡಾ ಎಮ್ ಬಿ ಪಾಟೀಲ ಮುಖ್ಯ ಪಶುವೈದ್ಯಾಧಿಕಾರಿಗಳು (ಆಡಳಿತ), ಹಿರಿಯ ಪಶುವೈದ್ಯಾಧಿಕಾರಿ ಡಾ ಬಿ ಎಸ್ ಜಂಬಗಿ, ಡಾ ಪ್ರಶಾಂತ ಮಶಾಲಜಿ,ಡಾ ಪ್ರಮೋದ ತಳವಾರ,ಡಾ ಆನಂದ ಖಿಲಾರೆ,ಚಿಕ್ಕೋಡಿ ಬಿಜೆಪಿ ಜಿಲ್ಲಾ ಪ್ರದಾನ ಕಾರ್ಯದರ್ಶಿ ಸದಾನಂದ ಹಳಿಂಗಳಿ, ಆನಂದ ಕದಂ,ಸಿದ್ದು ಅಲಕನೂರ, ಪ್ರಥಮೇಶ್ ಕಬಾಡಗೆ, ಶಿವಾನಂದ ತಾವದಾರೆ, ಮಹಾಂತೇಶ ಪಡತರಿ, ಅಕ್ಷಯ ಕರೀಹೊಳಿ ಸೇರಿದಂತೆ ಇತರರು ಇದ್ದರು.



# ಭಾರಿ ಮಳೆ ಬೆಳೆ ಹಾನಿ



**ರಬಕವಿ–ಬನಹಟ್ಟಿ:** ಕಳೆದೆರಡು ದಿನಗಳಿಂದ ಸತತವಾಗಿ ಸುರಿದ ಭಾರಿ ಮಳೆಗೆ ಸುತ್ತ ಮುತ್ತಲಿನ ಗ್ರಾಮದಲ್ಲಿಯ ಬೆಳೆಗಳಿಗೆ ಹಾನಿಯಾಗಿದೆ.

ಸಮೀಪದ ಜಗದಾಳ ಗ್ರಾಮದ ತೋಟವೊಂದರಲ್ಲಿ ಬೆಳೆದ ಬಾಳೆ ಹಣ್ಣಿನ ಗಿಡಗಳು ನೆಲಕ್ಕುರುಳಿದ್ದು, ಅದೇ ರೀತಿಯಾಗಿ ಪೂರ್ತಿಯಾಗಿ ಬೆಳೆದ ಬಾಳೆ ಹಣ್ಣಿ ಗೋಣೆಗಳು ಕೂಡಾ ನೆಲಕ್ಕುರುಳಿವೆ. ಮಳೆಯಿಂದಾಗಿ ಕಬ್ಬು,ಅರಿಸಿನ ಸೇರಿದಂತೆ ಅನೇಕ ಬೆಳೆಗಳು ನೀರಿನಲ್ಲಿ ನಿಂತಿವೆ ಎನ್ನುತ್ತಾರೆ ಇಲ್ಲಿಯ ರೈತರಾದ ದೇವರಾಜ ರಾಠಿ.

ನಗರದ ಸುತ್ತ ಮುತ್ತಲಿನ ಪ್ರದೇಶದಲ್ಲಿ ಮಳೆ ಇನ್ನೂ ಮುಂದುವರೆದಿದ್ದು ರೈತರ ಬೆಳೆಗಳಿಗೆ ಮುಂಬರುವ ದಿನಗಳಲ್ಲಿ ತೊಂದರೆಯಾಗಲಿದೆ ಎನ್ನುತ್ತಾರೆ ರೈತ ಸಿದ್ದು ಗೌಡಪ್ಪನವರ.

## ಕವಡಿಮಟ್ಟಿ ಗ್ರಾಪಂ ವ್ಯಾಪ್ತಿಯ ಜನ ಸಂಪರ್ಕ ಸಭೆಯಲ್ಲಿ ಶಾಸಕ ನಾಡಗೌಡ ಕರೆ

# ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ಸೇರಿಸಿ

**ಮುದ್ದೇಬಿಹಾಳ:** ಮಕ್ಕಳನ್ನು ಖಾಸಗಿ ಶಾಲೆಗಳಿಗೆ ಕಳಿಸದೇ ಗ್ರಾಮದಲ್ಲಿರುವ ಸರ್ಕಾರಿ ಶಾಲೆಗಳಿಗೆ ಸೇರಿಸಬೇಕು. ಇದರಿಂದ ಸರ್ಕಾರಿ ಶಾಲೆಗಳನ್ನು ಉಳಿಸಿ ಬೆಳೆಸಲು ಸಾಧ್ಯ. ಸರ್ಕಾರಿ ಶಾಲೆಯ ಶಿಕ್ಷಕರು ಅರ್ಹತಾ ಪರೀಕ್ಷೆ ಮೂಲಕ ಆಯ್ಕೆಗೊಂಡು ಹುದ್ದೆಗೆ ಬಂದಿರುತ್ತಾರೆ ಎಂದು ಕಿವಿಮಾತು ಹೇಳಿದರು. ಶಾಸಕ ಹಾಗೂ ಅಧ್ಯಕ್ಷ ಕೆಎಸ್‌ಡಿಎಲ್. ನಾಡಗೌಡ(ಅಪ್ಪಾಜಿ) ಹೇಳಿದರು. ತಾಲೂಕಿನ ಕವಡಿಮಟ್ಟಿ ಗ್ರಾಪಂ ವ್ಯಾಪ್ತಿಯಲ್ಲಿ ಬರುವ ಹಳ್ಳಿಗಳಾದ ಕವಡಿಮಟ್ಟಿ ಜಲಪೂರ, ಸರೂರು, ಸರೂರು ತಾಂಡಾ ಗ್ರಾಮಗಳಲ್ಲಿ ಹಮ್ಮಿಕೊಂಡಿದ್ದ ಜನ ಸಂಪರ್ಕ ಸಭೆಯಲ್ಲಿ ಅವರು ಮಾತನಾಡಿದರು.

ಸರ್ಕಾರಿ ಶಾಲಾ ಶಿಕ್ಷಕರಿಗಿಂತಲೂ ಖಾಸಗಿ ಶಾಲಾ ಶಿಕ್ಷಕರಲ್ಲಿ ಖಾಸಗಿ ಶಾಲೆಗಳ ವೈಭವಿಕರಣವಲ್ಲದೇ ಗುಣಮಟ್ಟ ಶಿಕ್ಷಣ ಕಾಣಲು ಸಾಧ್ಯವಿಲ್ಲ. ಸೌಲಭ್ಯಗಳನ್ನು ಪಡೆದುಕೊಳ್ಳಲು ಬರುವುದಿಲ್ಲ. ಗ್ರಾಮೀಣ ಭಾಗದ ಬಡವರ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಸರ್ಕಾರ ಆನೇಕ ಸರಕಾರದ ಯೋಜನೆಗಳನ್ನು ಜಾರಿ ಮಾಡಿದೆ. ಎಲ್ಲರುಮಕ್ಕಳನ್ನು ಖಾಸಗಿ ಶಾಲೆಗಳ ಅವಲಂಬಿಸದೇ ಸರ್ಕಾರಿ ಶಾಲೆಗೆ ಸೇರಿಸಲು ಮುಂದಾಗಬೇಕು.

ಕೃಷಿ ಚಟುವಟಿಕೆಗಳಿಗೆ ತೊಂದರೆಯಾಗದಂತೆ ರೈತರ ಹೊಲಗಳಿಗೆ ಸಂಪರ್ಕ ರಸ್ತೆ ನಿರ್ಮಿಸುವ ಮೂಲಕ ಅನುಕೂಲ ಮಾಡಿಕೊಡಲು ಕಂದಾಯ ಇಲಾಖೆ ಸೂಕ್ತ






ಕ್ರಮ ಕೈಗೊಳ್ಳಬೇಕೆಂದುರು.

ಅಂಗನವಾಡಿ ಕೇಂದ್ರವು ಸಂಪೂರ್ಣ ಶಿಥಿಲಗೊಂಡಿದ್ದ ಹೊಸದಾಗಿ ನಿರ್ಮಿಸಿ ಕೊಡಬೇಕು ಎಂದು ಕವಡಿಮಟ್ಟ ಗ್ರಾಮಸ್ಥರು ಮನವಿ ಮಾಡಿದರು. ಈ ವೇಳೆ ಸಿಡಿಪಿಒ ಶಿವಮೂರ್ತಿ ಕುಂಬಾರ ಮಾತನಾಡಿ, ಕ್ಷೇತ್ರದಲ್ಲಿ ಈಗಾಗಲೇ ಸಮಸ್ಯೆಯ ಸುಳಿಯಲ್ಲಿರುವ 33 ಅಂಗವಾಡಿ ಕೇಂದ್ರಗಳನ್ನು ನಿರ್ಮಿಸಲು ಪ್ರತಿ ಅಂಗನವಾಡಿಗೆ 18 ಲಕ್ಷ ನಿಗದಿ ಮಾಡಿ ಸರ್ಕಾರ ತಿರ್ಮಾನಿಸಿದೆ. ಶೀಘ್ರವೇ ಕ್ರಮಕೈಗೊಳ್ಳಲಾಗುವುದು ಎಂದರು.

ಜಲಪೂರ ಮಾರ್ಗದ ಮೂಲಕ ರಾತ್ರಿ ಬಸ್ ಸೇವೆ ಪ್ರಾರಂಭಿಸಬೇಕು. ಕೆಲ ಹೊಗಳಲ್ಲಿ ಸವಳು ಜವಳಿನ ಸಮಸ್ಯೆಯಿಂದ ಉತ್ತಮ ಫಸಲು ಬರುತ್ತಿಲ್ಲ. ಈ ಕೂಡಲೇ ಸಮಸ್ಯೆಗಳನ್ನು ಬಗೆಹರಿಸಬೇಕು ಎಂದು ಜಲಪೂರ ಗ್ರಾಮಸ್ಥರು ಬೇಡಿಕೆ ಇಟ್ಟರು. ಬೇಡಿಕೆಗೆ ಸ್ಪಂಧಿಸಿದ ಶಾಸಕರು, ಕೆರೆ ಅಭಿವೃದ್ಧಿಗಾಗಿ ಸಣ್ಣ ನೀರಾವರಿ ಇಲಾಖೆ ಅಧಿಕಾರಿಗಳಿಗೆ, ಹೊಲಗಳ ಸವಳು ಜವಳ ಬಗ್ಗೆ ಹೆಚ್ಚಿನ ನಿಗಾವಹಿಸಿ ಕ್ರಮ, ಗ್ರಾಮ ಪಂಚಾಯತ, ಕವಡಿಮಟ್ಟಿ ಜನ ಸಂಪರ್ಕ ಸಭೆ ಕೈಗೊಳ್ಳುವಂತೆ ಕೆಬಿಜೆಎನ್ ಎಲ್ ಅಧಿಕಾರಿಗಳಿಗೆ ಸೂಚಿಸುತ್ತೇನೆ. ಹಾಗೂ ರಸ್ತೆ ನಿರ್ಮಿಸಲು ಕ್ರೀಯಾಯೋಜನೆ ತಯಾರಿಸಿ ರಸ್ತೆ ಮಾಡಲಾಗುವುದು, ಬಸ್ ಸೇವೆ ಒದಗಿಸುವಂತೆ ಕೆಎಸ್‌ಆರ್ಟಿಸಿ ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದು ಭರವಸೆ ನೀಡಿದರು. ಗ್ರಾಮದಲ್ಲಿ ಸರ್ಕಾರಿ ಜಾಗವಿದ್ದು ಮನೆ ಕಟ್ಟಿಕೊ ಳ್ಳಲು ಸಾಧ್ಯವಾಗುತ್ತಿಲ್ಲ, ಸರ್ಕಾರದ ಸೌಲಭ್ಯಗಳು ಕೂಡ ಸಿಗುತ್ತಿಲ್ಲ. ಇದರಿಂದಾಗಿ ಕಡಬಡವರಿಗೆ ಮನೆ ಇಲ್ಲದಂತಾಗಿದೆ ಎಂದು ಕವಡಿಮಟ್ಟಿ ಗ್ರಾಮಸ್ಥರು ಆರೋಪಿಸಿದರು. ಜತೆಗೆ ಕವಡಿಮಟ್ಟಿ ಗ್ರಾಮಪಂಚಾ ಯಿತಿ ವ್ಯಾಪ್ತಿಯಲ್ಲಿ ಸುಮಾರು 32 ಎಕರೆಯಷ್ಟು ಸರ್ಕಾರಿ ಜಾಗೆ ಇದ್ದು, ಸುಮಾರು 4 ಎಕರೆಯಷ್ಟು ಜಮೀನಿನಲ್ಲಿ ಆಶ್ರಯ ಯೋಜನೆಯಡಿ ಮನೆ ನಿರ್ಮಿಸಿ ನಿರಾಶ್ರಿತರಿಗೆ ಹಂಚಿಕೆ ಮಾಡಲು ವಿಶೇಷ ಅನುದಾನದ ಅವಶ್ಯಕತೆ ಇದೆ ಎಂದು ಪಿಡಿಒ ಪಿ. ಎಸ್. ಕಸನಕ್ಕಿ ಶಾಸಕರಿಗೆ ತಿಳಿಸಿದರು. ಇದಕ್ಕೆ ಪಂಚಾಯಿತಿಯಲ್ಲಿ ಸಮಾನ್ಯ ಸಭೆಯಲ್ಲಿ ಚರ್ಚಿಸಿ ಠರಾವು ಮಾಡಿ ನನಗೆ ಕೊಡಿ ಜಿಲ್ಲಾಧಿಕಾರಿಗಳ ಮುಖಾಂತರ ಸರ್ಕಾರದಿಂದ ಅನುದಾನ ತಂದು ಮನೆ ನಿರ್ಮಿಸಿ ಕೊಡಲಾಗುವುದು ಎಂದು ಭರವಸೆ ನೀಡಿದರು. ಈ ದಿಸೆಯಲ್ಲಿ ಗ್ರಾಮಗಳ ಮುಖ್ಯ ಹಾಗೂ ಸಂಪರ್ಕ ರಸ್ತೆಗಳ ಅಕ್ಕ ಪಕ್ಕದ ಮನೆ ಗಳ ಮಾಲಿಕರು ರಸ್ತೆ ಒತ್ತುವರಿಗೆ ಮಾಡಿಕೊಂಡರೆತೆರ ವುಗೊಳಿಸಲು ಮುಂದಾದರೇ ಸಹಕಾರ ನೀಡಿ. ಇದ ರಿಂದ ಗ್ರಾಮ ಸ್ವಚ್ಛವಾಗಿ ರೋಗ ಮುಕ್ತ ಪರಿಸರ ನಿರ್ಮಿಸಲು ಸಾಧ್ಯ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರು ತಾರನಾಳ, ತಾಪಂ ಇಒ ವೆಂಕಟೇಶ ಒಂದಾಲ,ಕೃಷಿ ಅಧಿಕಾರಿ ಸುರೇಶ ಭಾವಿಕಟ್ಟಿ, ಪಶುವೈದ್ಯಾಧಿಕಾರಿ ಎಸ್.ಬಿ.ಮೇಟಿ, ತಾಲೂಕು ಆರೋಗ್ಯಾಧಿಕಾರಿ ಡಾ.ಸತೀಶ ತಿವಾರಿ, ತಾಲೂಕು ಅಕ್ಷರ ದಾಸೋಹದ ಸಹಾಯ ನಿರ್ದೇಶಕ ಎಂ.ಎಂ.ಬೆಳ ಗಲ್ಲ, ಪಿಎಸ್‌ಐ ಸಂಜಯಕುಮಾರ ತಿಪ್ಪಾರೆಡ್ಡಿ, ಗ್ರಾಪಂ ಅಧ್ಯಕ್ಷೆ ಶಕುಂತಲಾ ಹಂಡರಗಲ್ಲ, ತಾಪಂ ಯೋಜನಾ ನಿರ್ದೇಶಕ ಖೂಬಾಶಿಂಗ್ ಜಾಧವ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕಿ ಬಸಂತಿ ಮಠ, ಗ್ಯಾರಂಟಿ ಸಮಿತಿ ಸದಸ್ಯ ರಾಮಣ್ಣ ರಾಜನಾಳ,ಗ್ರಾಪಂ ಬಿಲ್ ಕಲೆಕ್ಟರ್ ದಂಡಪ್ಪ ವಾಲಿಕಾರ, ಗ್ರಾ ಪಂ ಸಿಬ್ಬಂದಿಗಳು ಸೇರಿದಂತೆ ಉಪಸ್ಥಿತರಿದ್ದರು.

# ಯಲ್ಲಮ್ಮ ದೇವಸ್ಥಾನದ ಅಭಿವೃದ್ಧಿ ಪ್ರಾಧಿಕಾರ ಉಪಾಧ್ಯಕ್ಷರಾಗಿ ಶಾಸಕ ವಿಶ್ವಾಸ್ ವೈದ್ಯ ನೇಮಕ



**ಉಗರಗೋಳ:** ಯಲ್ಲಮ್ಮ ದೇವಸ್ಥಾನದ ಅಭಿವೃದ್ಧಿ ಪ್ರಾಧಿಕಾರದ ಉಪಾಧ್ಯಕ್ಷರಾಗಿ ನೇಮಕಗೊಂಡ ಶಾಸಕ ವಿಶ್ವಾಸ್ ವೈದ್ಯ ಅವರನ್ನು ಶನಿವಾರ ಯಲ್ಲಮ್ಮನ ಗುಡ್ಡದ ಯಲ್ಲಮ್ಮ ದೇವಿ ದೇವಸ್ಥಾನದಲ್ಲಿ. ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರದ ನಿರ್ದೇಶಕ ಶಿದ್ದನಗೌಡ ಗೋಡ್ರಾಸಿ ಶಾಲೂಹೊದಿಸಿ ಸತ್ಕರಿಸಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಶ್ರೀಕ್ಷೇತ್ರ ಯಲ್ಲಮ್ಮನಗುಡ್ಡದ ಅಭಿವೃದ್ಧಿಗಾಗಿ ಕೆಲಸ ಮಾಡುವ ಅವಕಾಶ ಸಿಕ್ಕಿದೆ. ಮಾನ್ಯ ಮುಖ್ಯಮಂತ್ರಿಗಳು, ಮುಜರಾಯಿ ಸಚಿವರು, ಜಿಲ್ಲಾ ಉಸ್ತುವಾರಿ ಸಚಿವರ ಮಾರ್ಗದರ್ಶದಲ್ಲಿ ಉತ್ತಮವಾಗಿ ಕೆಲಸ ಮಾಡಿ ಯಲ್ಲಮ್ಮನಗುಡ್ಡದ ಸಮಗ್ರ ಅಭಿವೃದ್ಧಿಗೆ ಪ್ರಯತ್ನಿಸುತ್ತೇನೆ ಎಂದರು.

ಚಂದ್ರು ಶಾಮನವರ, ನಾಗರತ್ನಾ ಚೋಳಿನ, ರೇಣುಕಾ ಶಿಂತ್ರಿ, ಬಿ ಎನ್ ಮುದಗೌಡ್ರ, ಅಲ್ಲಮಪ್ರಭು ಪ್ರಭುನವರ, ಆರ್ ಎಚ್ ಸವದತ್ತಿ, ಸಿ ಎನ್ ಕುಲಕರ್ಣಿ, ಏಕನಗೌಡ ಮುದ್ದನಗೌಡ್ರ, ಕೆಂಚನಗೌಡ ರೆಣ್ಕೀಗೌಡ್ರ, ಬಸವರಾಜ ಆಯಟ್ಟಿ, ಪಂಡಿತ ಯಡೂರಯ್ಯ, ಉಗರಗೋಳದ ಪೋಲೇಶಿ, ಪ್ರವೀಣ ರಾಮಪ್ಪನವರ, ಆನಂದ ಮುದ್ರಗಣಿ ಹಾಗೂ ದೆವಸ್ಥಾನ ಸಿಬ್ಬಂದಿ ಇದ್ದರು.

# ಜಾತಿಗಣತಿ ಮಾಡುವ ಅಧಿಕಾರ ಕೇಂದ್ರಸರ್ಕಾರಕ್ಕಿದೆ: ಶೆಟ್ಟರ

**ಮುದ್ದೆಬಿಹಾಳ:** ಸಾಮಾಜಿಕ ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಮಾಡುವದಕ್ಕಾಗಿ ಜನಗಣತಿ ಜಾತಿಗಣತಿ ಮಾಡುವ ಅಧಿಕಾರ ಇರುವದೇ ಕೇಂದ್ರ ಸರ್ಕಾರಕ್ಕಿದೆ ಆದರೂ ರಾಜ್ಯ ಸರ್ಕಾರ ಈ ಕಾರ್ಯ ಮಾಡಲು ಮುಂದಾಗಿದೆ ಮಾಡುವದಕ್ಕೆ ಯಾವ ತಕರಾರುವಿಲ್ಲ ಆದರೆ ಮುಂಚೆಯೇ ವೈಜ್ಞಾನಿಕವಾಗಿ ಗೈಡನ್ಸ್ ಎಂಬುದನ್ನು ತೆಗೆದುಕೊಂಡು ಮಾಡಿದರೆ ಸಮಸ್ಯೆಯೆಂಬವುಗಳು ಉದ್ಭವಿಸುತ್ತಿದ್ದಿಲ್ಲವೆಂದು ಮಾಜಿ ಮುಖ್ಯಮಂತ್ರಿ ಹಾಗೂ ಬೆಳಗಾಂವಿ ಲೋಕಸಭಾ ಸಂಸದರಾದ ಜಗಧೀಶ ಶೆಟ್ಟರ ಅವರು ನುಡಿದರು.



ರವಿವಾರರಂದು ಪಟ್ಟಣದ ವಿಜಯಮಹಾಂತೇಶ ಸಭಾಭವನದಲ್ಲಿ ಕರ್ನಾಟಕ ರಾಜ್ಯ ಬಣಜಿಕ ಸಮಾಜ ಕ್ಷೇಮಾಭಿವೃದ್ಧಿ ಸಂಘ ಬೆಂಗಳೂರ ಇವರ ನೇತೃತ್ವದಲ್ಲಿ ತಾಲೂಕಾ ಘಟಕದ ಮುದ್ದೇಬಿಹಾಳದ ನೂತನ ಪದಾಧಿಕಾರಿಗಳ ಪದಗ್ರಹಣ ಪ್ರತಿಭಾ ಪುರಸ್ಕಾರ ಹಾಗೂ ನಿವೃತ್ತ ನೌಕರರ ನೌಕರರ ಸನ್ಮಾನ ಸಮಾರಂಭವನ್ನು ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಮಾತನಾಡುತ್ತಿದ್ದ ಅವರು ನಮ್ಮ ಸಮಾಜಕ್ಕೆ ಮಾರ್ಗದರ್ಶನ ಮಾಡತಕ್ಕಂತವರು ನಮ್ಮ ಶರಣರೇ ಆಗಿದ್ದಾರೆ ಎಲ್ಲರೂ ಸಮಾನ ಅನ್ನುವಂತಹ ಕಾರ್ಯ 12 ನೇ ಶತಮಾನದಲ್ಲಿ ಬಸವಣ್ಣನವರು ಹೇಳಿದ್ದಾರೆಂದು ಹೇಳಿದ ಜಗಧೀಶ ಶೆಟ್ಟರ ಅವರು ಪ್ರತಿಭಾ ಪುರಸ್ಕಾರ ಅನ್ನುವಂತಹದ್ದು ಮಾಡುವದು ತಪ್ಪಲ್ಲ ಯಾವದೇ ಸಮಾಜವಾಗಲಿ, ಯಾವದೇ ಸಮಾಜದ ಸಂಘಟನೆ ಮಾಡುವದು ತಪ್ಪಲ್ಲ ಎಂದ ಅವರು ಬಣಜಿಗ ಸಮಾಜ ಎಂಬುದು ಎಲ್ಲರೊಂದಿಗೆ ಹೊಂದಿಕೊಂಡು ತನ್ನದೇ ಆದ ಗೌರವದೊಂದಿಗೆ ಈ ಹಿಂದೆ ರಾಜ್ಯದಲ್ಲಿ 9 ಜನ ಮುಖ್ಯಮಂತ್ರಿಯಾದವರಲ್ಲಿ 7 ಜನ ನಮ್ಮವರೇ ಆಗಿಹೋಗಿದ್ದಾರೆಂದರು. ಎಲ್ಲ ವರ್ಗದವರ ಜನರ ಪ್ರೀತಿ ವಿಶ್ವಾಸ ಬೆಳೆಸುವ ಕೆಲಸ ಮಾಡುತ್ತೇವೆ ಲಿಂಗಾಯತ ವೀರಶೈವ ಸಮಾಜ ಎಲ್ಲೆಡೆಯಲ್ಲಿಯೂ ಇದ್ದಾರೆಂದ ಅವರು 13 ವರ್ಷಗಳ ಹಿಂದೆ ಮಹಾರಾಷ್ಟ್ರದಲ್ಲಿ 1 ಕೋಟಿ 10 ಲಕ್ಷ ಲಿಂಗಾಯತ ವೀರಶೈವ ಸಮಾಜದವರು ಇದ್ದಿದ್ದರೆಂದು ಅಂಕಿ ಅಂಶವನ್ನು ಗುರುತಿಸಿದ ಅವರು ಕರ್ನಾಟಕದಲ್ಲಿ 60. 65 ಲಕ್ಷ ವೀರಶೈವರಿದ್ದಾರೆ 20 ಕ್ಷೇತ್ರಗಳಲ್ಲಿ ಪ್ರವಾಸ ಕೈಕೊಂಡಿದ್ದೇನೆ ಮುದ್ದೇಬಿಹಾಳ ತಾಲೂಕಿನವರು ಶಿಕ್ಷಣವಂತರಿದ್ದಾರೆಂದ ಅವರು ಈ ಹಿಂದೆ ಈ ಸಮಾಜಕ್ಕೆ 2 ಎ ಮೀಸಲಾತಿ ನೀಡಲು ಅವಕಾಶ ಮಾಡಿಕೊಟ್ಟಿದ್ದರ ಕುರಿತು ನೆನಪಿಸಿಕೊಂಡ ಅವರು ಆರ್ಥಿಕವಾಗಿ ಹಿಂದೆ ಇರುವದರಿಂದ ಅಂತವರ ನೆರವಿಗೆ ಬರಲಾಯಿತೆಂದರು. ಯಾವದೇ ಜಾತಿ ಇರಲಿ ಅದರ ಮೂಲ ಹಿಂದು ಎಂಬುದ್ದಾಗಿದೆ ಸಂವಿದಾನ ಬದ್ದದಲ್ಲಿ ಹಿಂದೂ ಧರ್ಮವಾಗಿದೆ ಕಾರಣ ಧರ್ಮ ಎಂಬುದರಲ್ಲಿ ಹಿಂದೂ ಧರ್ಮ ಜಾತಿ ಎಂಬುದರಲ್ಲಿ ವೀರಶೈವ ಲಿಂಗಾಯತ ಉಪಜಾತಿಯಲ್ಲಿ ಬಣಜಿಗ ಎಂದು ಬರೆಯಿಸಿರಿ ಎಂದು ಸಮಾಜದವರಿಗೆ ಶೆಟ್ಟರ ಅವರು ಕಿವಿ ಮಾತು ಹೇಳಿದರು.

ಇನ್ನೋರ್ವ ಮುದ್ದೇಬಿಹಾಳ ಮತಕ್ಷೇತ್ರದ ಶಾಸಕರಾದ ಸಿ.ಎಸ್. ನಾಡಗೌಡ(ಅಪ್ಪಾಜಿ) ಅವರು ಮಾತನಾಡಿ 1992 ರಿಂದಲೂ ಜಗಧೀಶ ಶೆಟ್ಟರ ಅವರ ಪ್ರಾಮಾಣಿಕತೆ ನಿಷ್ಠೆ ಎಂಬುದನ್ನು ನಾನು ಅರಿಯಬಲ್ಲೆ ಅದುವೇ ಅವರನ್ನು ಮೇಲ್ಮಟ್ಟಕ್ಕೊಯ್ಯಲು ಕಾರಣವಾಗಿದೆ ಎಂದರು. ಒಟ್ಟು 9 ಜನ ಮುಖ್ಯಮಂತ್ರಿಗಳು ಬಣಜಿಗ ಲಿಂಗಾಯತರಾಗಿದ್ದಾರೆ ಈ ಸಮಾಜದ ವ್ಯಕ್ತಿಗಳು ಬೀದರ್‌ದಿಂದ ವಿಜಯಪುರದವರೆಗೆ ಹುಬ್ಬಳ್ಳಿಯಿಂದ ದಾರವಾಡದ ವರೆಗೆ ತೆಗೆದುಕೊಂಡರೂ ಎಲ್ಲರೂ ಒಳ್ಳೆಯ ನಿಷ್ಠೆಯ ಪ್ರಾಮಾಣಿಕತೆ ಹೊಂದಿದವರಾಗಿದ್ದಾರೆಂದರು. ಜಗಧೀಶ ಶೆಟ್ಟರ ಅವರು ಸಮಾಜ ಎನ್ನುವದನ್ನು ಯಾವ ರೀತಿ ಬೆಳೆಸಬೇಕು ಎಂಬುದರ ಕುರಿತು ಬಹುಮಾರ್ಮಿಕವಾಗಿ ವಿವರಿಸಿದ್ದಾರೆ ರಾಜಕೀಯ ಪಕ್ಷ ಎಂಬುವಗಳು ಒಡೆಯಬಹುದು ನಾವು ತಪ್ಪು ಮಾಡುವದರಿಂದಲೂ ಲಿಂಗಾಯತರ ಸಂಖ್ಯೆ ಕಡಿಮೆ ತೋರಿಸುತ್ತದೆ ಎಂದರು ಎಲ್ಲರೂ ತಳಹದಿಯ ಮೇಲೆ ಪಕ್ಷ ಕಟ್ಟಿರುತ್ತಾರೆ ಎಂದ ಎಂದರು.

ಮಾಜಿ ಸಚಿವರಾದ ಅಪ್ಪಾಸಾಹೇಬ್ ಪಟ್ಟಣಶೆಟ್ಟಿ ಅವರು ಮಾತನಾಡಿದರು, ರಾಜ್ಯ ರೈತ ಮೋರ್ಚಾ ಅಧ್ಯಕ್ಷರಾದ ಎ.ಎಸ್. ಪಾಟೀಲ(ನಡಹಳ್ಳಿ) ಅವರು ಮಾತನಾಡಿ ಮುಖ್ಯಮಂತ್ರಿ ಜಗದೀಶ ಶೆಟ್ಟರ ಅವರು ಮುಖ್ಯಮಂತ್ರಿ ಸ್ಥಾನದಲ್ಲಿದ್ದಾಗ ನೀರಾವರಿ ವಿಷಯದಲ್ಲಿ ಅತೀ ಹೆಚ್ಚು ಕೊಡುಗೆ ನೀಡಿದ್ದಾರೆ 17 ಸಾವಿರ 73 ಕೋಟಿಯ ಕ್ರೀಯಾ ಯೋಜನೆ ತಯಾರಿಸಿ ಟೆಂಡರ್ ಕರೆದರು ಸಾವಿರದ 800 ಕೋಟಿ ರೂ ಚಿಮ್ಮಲಗಿ ಮುಳವಾಡ ಏತ ನೀರಾವರಿ ಯೋಜನೆಗೆ ಸಹಾಯವಾಗಿದ್ದ ಜಗದೀಶ ಶೆಟ್ಟರ ಅವರ ಕಾರ್ಯ ಮಹತ್ವದ್ದಾಗಿತ್ತೆಂದರು. ಸಮಾಜದ ಸಂಘಟನೆ ಮಾಡುವಲ್ಲಿ ನಮ್ಮ ತನವನ್ನು ಮರೆಯಬಾರದು ಲಿಂಗಾಯತೆಲ್ಲರೂ ಒಗ್ಗಟ್ಟಾದರೆ 152 ಸ್ಥಾನಗಳಲ್ಲಿ ಬಹುಮತ ಪಡೆಯಲು ಸಾಧ್ಯವೆಂದು ಅವರು ಮಾಜಿ ಮುಖ್ಯಮಂತ್ರಿ ಜಗಧೀಶ ಶೆಟ್ಟರ ಅವರು ಹೇಳಿದಂತೆ ನಾವೆಲ್ಲರೂ ಹಿಂದೂ ಎಂದು ಸ್ಪಷ್ಟವಾಗಿ ಹೇಳಿದ್ದಾರೆ ದೇಶದ ಮೂಲವೇ ಹಿಂದುಸ್ಥಾನವಾಗಿದ್ದು ಎಲ್ಲರೂ ಈ ಸಂದೇಶವನ್ನು ಪಾಲಸಬೇಕೆಂದರು.

ಇದೇ ಸಮಯದಲ್ಲಿ ಮುದ್ದೇಬಿಹಾಳ ತಾಲೂಕಾ ಬಣಜಿಗ ಸಮಾಜದ ಕ್ಷೇಮಾಭಿವೃದ್ಧಿ ಸಂಘದ ನೂತನ ಪದಾಧಿಕಾರಿಗಳ ಪಟ್ಟಿಯನ್ನು ಜಗಧೀಶ ಶೆಟ್ಟರ ಅವರು ಬಿಡುಗಡೆಗೊಳಿಸಿದರು. ದಿವ್ಯ ಸಾನಿಧ್ಯ ವಹಿಸಿದ ಹುನಗುಂದ ಗಚ್ಚಿನಮಠದ ಹಾಗೂ ಮುದ್ದೇಬಿಹಾಳ ಹೊಸಮಠದ ಪರಮಪೂಜ್ಯ ಅಮರೇಶ್ವರದೇವರು ಆಶೀರ್ವಚನವಿತ್ತರು.

ಸಾಹಿತಿಗಳಾದ ಅಶೋಕ ಹಂಚಲಿ ಅವರು ಉಪನ್ಯಾಸ ನೀಡಿದರು. ಮುದ್ದೇಬಿಹಾಳ ತಾಲೂಕಾ ಘಟಕದ ಬಣಜಿಗ ಸಮಾಜದ ಅಧ್ಯಕ್ಷ ಅಶೋಕ ಚಟ್ಟೇರ ಅವರು ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯ ಮೇಲೆ ಜಿಲ್ಲಾ ಪಂಚಾಯತ ಮಾಜಿ ಉಪಾಧ್ಯಕ್ಷ ಪ್ರಭುಗೌಡ ದೇಸಾಯಿ, ಬಣಜಿಗ ಸಮಾಜದ ರಾಜ್ಯ ಪ್ರ. ಕಾರ್ಯದರ್ಶಿ ಶಿವಾನಂದ ಬಿದರಿ, ಸಮಾಜದ ಗೌರವಾಧ್ಯಕ್ಷರಾದ ನ್ಯಾಯವಾದಿ ಎಂ.ಎಸ್. ನಾವದಗಿ, ಮಾಜಿ ಅಧ್ಯಕ್ಷರಾದ ಪ್ರಭುರಾಜ ಕಲಬುರ್ಗಿ, ಪ್ರ. ಕಾರ್ಯದರ್ಶಿ ರಾಜು ಬಳ್ಳೊಳ್ಳಿ, ಮಾಜಿ ಕಾರ್ಯದರ್ಶಿ ಸಂಗಮೇಶ ನಾವದಗಿ, ನ್ಯಾಯವಾದಿಗಳಾದ ಬಿ.ಎಂ. ತಾಳಿಕೋಟೆ, ದಾನಪ್ಪ ನಾಗಠಾಣ, ಬಸವರಾಜ ಮೋಟಗಿ, ಆರ್.ಜಿ. ಕಿತ್ತೂರ, ಮಹಿಳಾ ಘಟಕದ ಗೌರವಾಧ್ಯಕ್ಷರಾದ ಸಂಗಮ್ಮ ಜೋಳದ, ಶೋಭಾ ನಾಗಠಾಣ, ಮಹಾದೇವಿ ಕಿಣಗಿ, ಪುರಸಭಾ ಮಾಜಿ ಸದಸ್ಯರಾದ ರತ್ನಾಬಾಯಿ ದಡ್ಡಿ, ಮಹಾದೇವಿ ನಾಲತವಾಡ ಅವರು ಉಪಸ್ಥಿತರಿದ್ದರು. ಈ ಸಮಯದಲ್ಲಿ ಸುತ್ತಮುತ್ತಲಿನ ಬಣಜಿಗ ಸಮಾಜದವರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಸುಭಾಸಚಂದ್ರ ಹೊಳಲು ಪ್ರಾರ್ಥಿಸಿದರು. ಸರೋಜಾ ಕೋರಿ ಸ್ವಾಗತಿಸಿದರು. ಆನಂದ ಕಂಠಿ ನಿರೂಪಿಸಿ ವಂದಿಸಿದರು.

# ಮಲಪ್ರಭಾ ಶುಗರ್ಸ್: ಪುನಶ್ಚೇತನ ಪ್ಯಾನೆಲ್‌ಗೆ ಭರ್ಜರಿ ಗೆಲುವು



**ಬೆಳಗಾವಿ:** ಭಾರೀ ಕುತೂಹಲ ಮೂಡಿಸಿದ್ದ ಮಲಪ್ರಭಾ ಸಕ್ಕರೆ ಕಾರ್ಖಾನೆ ಚುನಾವಣೆಯಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ನೇತೃತ್ವದ ಪುನಶ್ಚೇತನ ಪ್ಯಾನೆಲ್ ಭರ್ಜರಿ ಗೆಲುವು ಸಾಧಿಸಿದೆ.

ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ ಹಟ್ಟಿಹೊಳಿ, ಶಾಸಕರಾದ ಬಾಬಾಸಾಹೇಬ ಪಾಟೀಲ, ವಿಠ್ಠಲ ಹಲಗೇಕರ್ ನೇತೃತ್ವದ ಪ್ಯಾನೆಲ್ ನಿಂದ ಸ್ಪರ್ಧಿಸಿದ್ದ ಎಲ್ಲ 15 ಅಭ್ಯರ್ಥಿಗಳು ಗೆಲುವು ಸಾಧಿಸಿದ್ದು, ವಿರೋಧಿ ಪ್ಯಾನೆಲ್ ಗಳು ಧೂಳಿಪಟವಾಗಿವೆ.

ಫಲಿತಾಂಶ ಪ್ರಕಟವಾಗುತ್ತಿದ್ದಂತೆ ಕಾರ್ಖಾನೆಯ ಎದುರು ಸಂಭ್ರಮಾಚರಣೆ ಮುಗಿಲು ಮುಟ್ಟಿತ್ತು. ಈ ವೇಳೆ ಮಾತನಾಡಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ರೈತರು ನಮ್ಮ ಮೇಲೆ ವಿಶ್ವಾಸವಿಟ್ಟು ಅಭೂತಪೂರ್ವ ಗೆಲುವು ನೀಡಿದ್ದಕ್ಕೆ ಧನ್ಯವಾದಗಳನ್ನು ಸಲ್ಲಿಸುತ್ತೇನೆ. ಹಾಗೆಯೇ ಎಲ್ಲ ಕಾರ್ಮಿಕರಿಗೂ ಸಹ ಕೃತಜ್ಞತೆ ಸಲ್ಲಿಸುತ್ತೇವೆ. ಅವರ ವಿಶ್ವಾಸಕ್ಕೆ ತಕ್ಕಂತೆ ಆಡಳಿತ ನಡೆಸುತ್ತೇವೆ ಎಂದರು. ಚನ್ನರಾಜ ಹಟ್ಟಿಹೊಳಿ ಮಾತನಾಡಿ, ಕಾರ್ಖಾನೆಯನ್ನು ಪುನಶ್ಚೇತನಗೊಳಿಸುವುದು ಖಚಿತ. ಎಲ್ಲರ ವಿಶ್ವಾಸಕ್ಕೆ ತಕ್ಕಂತೆ ಕೆಲಸ ಮಾಡಲಾಗುವುದು ಎಂದರು.



# ವಿಶ್ವ ಪ್ರವಾಸೋದ್ಯಮ ದಿನಾಚರಣೆ

**ಕಾರವಾರ:** ಜಿಲ್ಲಾಡಳಿತ ಹಾಗೂ ಪ್ರವಾಸೋದ್ಯಮ ಇಲಾಖೆ ಮತ್ತು ಪ್ರವಾಸೋದ್ಯಮ ಉದ್ಯಮೆದಾರರ ಸಹಯೋಗದೊಂದಿಗೆ ವಿಶ್ವ ಪ್ರವಾಸೋದ್ಯಮ ದಿನಾಚರಣೆ ಅಂಗವಾಗಿ ಶನಿವಾರ ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಲಾಗಿದ್ದ, ಭೀಮಕೋಲ ಕೆರೆಯಲ್ಲಿ ಪ್ರವಾಸ, ಬೋಟಿಂಗ್ ಚಟುವಟಿಕೆ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಜಿಲ್ಲಾಧಿಕಾರಿ ಕೆ. ಲಕ್ಷ್ಮಿ ಪ್ರಿಯ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಸಾಜೀದ್ ಮುಲ್ಲಾ, ಪ್ರವಾಸೋದ್ಯಮ ಇಲಾಖೆ ಉಪ ನಿರ್ದೇಶಕಿ ಮಂಗಳ ಗೌರಿ ಭಟ್ ಮತ್ತಿತರರು ಉಪಸ್ಥಿತರಿದ್ದರು. ಇದಕ್ಕೂ ಮುನ್ನ ಜಿಲ್ಲಾಧಿಕಾರಿಗಳ ಕಚೇರಿಯಿಂದ ಮಾಜಾಳಿ ಕಡಲತೀರದವರೆಗೆ ಕಾರವಾರ ಬೈಸಿಕಲ್ ಕ್ಲಬ್ ವತಿಯಿಂದ ಸೈಕಲ್ ರ‍್ಯಾಲಿ ನಡೆಯಿತು.



ರಾಮದುರ್ಗ: ನವರಾತ್ರಿ ಉತ್ಸವದ ಆಚರಣೆಯಲ್ಲಿ ಹಲಗತ್ತಿ ಗ್ರಾಮದ ಗ್ರಾಮದೇವತೆಯ ಸನ್ನಿಧಿಯಲ್ಲಿ ಸ್ಫೂರ್ತಿ, ಗೌತಮಿ ಹಾಗೂ ಗೆಳತಿಯರು

# ದಸರಾ ಹಬ್ಬದ ದಾಂಡಿಯಾ ಉತ್ಸವ

**ಬೆಳಗಾವಿ:** ರಾಮತೀರ್ಥ ನಗರದ ಶ್ರೀ ವಿರಭದ್ರೇಶ್ವರ್ ದೇವಸ್ಥಾನದಲ್ಲಿ ಸುರೇಶ ಯಾದವ ಫೌಂಡೇಶನ ಹಾಗೂ ರಾಮತೀರ್ಥ ನಗರದ ರಹವಾಸಿಗಳ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾದ ದಸರಾ ಹಬ್ಬದ ದಾಂಡಿಯಾ ಕಾರ್ಯಕ್ರಮದ ಉತ್ಸವದಲ್ಲಿ ನಗರದ ಮಹಿಳೆಯರು, ಮಕ್ಕಳು ದಾಂಡಿಯಾ ನೃತ್ಯ ಮಾಡಿ ಸಂಭ್ರಮಪಟ್ಟರು.

ಸಂಸದ ಜಗದೀಶ್ ಶೆಟ್ಟರ ಅವರು ಮಾತನಾಡಿ, 'ನಮ್ಮ ಸಂಸ್ಕೃತಿ ಉಳಿಸಿ ಬೆಳೆಸುವ ಉದ್ದೇಶದಿಂದ ಪ್ರತಿವರ್ಷ ದಸರಾ ಹಬ್ಬದ ಅಂಗವಾಗಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ನೃತ್ಯವು ಜೀವನ ಮತ್ತು ಬ್ರಹ್ಮಾಂಡದ ಚಕ್ರವನ್ನು ಪ್ರತಿನಿಧಿಸುತ್ತದೆ ಇದು ಸಮುದಾಯದಲ್ಲಿ ಪ್ರೀತಿ ಮತ್ತು ಐಕ್ಯತೆಯ ಸಂದೇಶವನ್ನು ಹರುಡುತ್ತದೆ. ಹಿಂದೂ ಸಂಪ್ರದಾಯದ ಈ ಆಚರಣೆಗಳನ್ನು ಆಯೋಜಿಸುತ್ತಿರುವ ಸುರೇಶ ಯಾದವ ಪೌಂಡೇಶನದ ಸಮಾಜ ಕಳಕಳಿ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ದಸರಾ ಹಬ್ಬದ ದಾಂಡಿಯಾ ಕಾರ್ಯಕ್ರಮಕ್ಕೆ ಶಿಬಾ ಶ್ರೀನಿವಾಸ ನಾಗಲ್ಲ ಅವರು ಚಾಲನೆ ನೀಡಿ ಮಾತನಾಡಿ, ದಾಂಡಿಯಾ ನೃತ್ಯವು ಶಾರ್ದಿಯ ನವರಾತ್ರಿಯ ಆಚರಣೆಯಾಗಿದೆ. ಇದು, ದೈಹಿಕ ಮಾನಸಿಕ ಮತ್ತು ಆದ್ಯಾತ್ಮಿಕ ಪ್ರಯೋಜನಗಳನ್ನು ಹೊಂದಿದೆ. ಈ ನೃತ್ಯವು ದೇವಿ ದುರ್ಗೆಯನ್ನು ಆರಾಧಿಸಲು, ಸಾಮಾಜಿಕ ಸಂಬಂಧಗಳನ್ನು ಬಲಪಡಿಸಲು ದೇಹಕ್ಕೆ ಉತ್ತಮ ವ್ಯಾಯಾಮ ನೀಡಲು ಹಾಗೂ ಹೃದಯವನ್ನು ಬಲಪಡಿಸಲು ದೇಹದ ತೂಕವನ್ನು ಕಡಿಮೆ ಮಾಡಲು ದೇಹದ ಸಮ್ಮತೆಯನ್ನು ಹೆಚ್ಚಿಸಲು ಮತ್ತು ಏಕಾಗ್ರತೆಯನ್ನು ಸುಧಾರಿಸಲು ಸಹಾಯಕವಾಗಿದೆ ಎಂದು ಹೇಳಿದರು. ಅಧ್ಯಕ್ಷ ಸುರೇಶ ಯಾದವ ಅವರು ಮಾತನಾಡಿ, ಧಾರ್ಮಿಕ ಮತ್ತು ಆದ್ಯಾತ್ಮಿಕ ದಾಂಡಿಯಾ ರಾಸ್ ಗುಜರಾತ್ ನ ಸಾಂಪ್ರದಾಯಿಕ್ ಜಾನಪದ ನೃತ್ಯವಾಗಿದ್ದು. ಇದು ಕೃಷ್ಣ ಮತ್ತು ರಾಧೇಯ ಲೀಲೆಯನ್ನು ಚಿತ್ರಿಸುತ್ತದೆ. ಇದು ದೇವಿಯ ದುರ್ಗೆಯ ಆರಾಧನೆಯ ಒಂದು ಪ್ರಮುಖ ರೂಪವಾಗಿದೆ ಹಾಗೂ ಭಕ್ತಿ ಮತ್ತು ಸಮರ್ಪಣೆಯನ್ನು ವ್ಯಕ್ತಪಡಿಸುವ ಒಂದು ಮಾರ್ಗವಾಗಿದೆ ಎಂದು ತಿಳಿಸಿದರು.

ಈ ವೇಳೆ ಮುರುಘೇಂದ್ರ ಪಾಟೀಲ, ಮುಕ್ತಾರ ಪಠಾಣ, ಸಿ. ಪಿ. ಐ, ಕಾಲಿಮಿರ್ಚಿ, ಪೂರ್ಣಿಮಾ ಯಾದವ, ಅನ್ವರಭಾನು, ವೀರನಗೌಡ ಪಾಟೀಲ್, ಬಾಳಪ್ಪ ಹಂಜಿ, ಶಂಕರ್ ಜನರಾಳೆ, ಸಂತೋಷ ಮೆರೆಕಾರ್, ಸ್ನೇಹಲ ಬೆಳ್ಳಿ, ಪವನ ಗುಣಕಿ, ಎಂ, ಎಸ್ ನಾಯಕ ಗಣೇಶ್ ಮಂಡಳಿಯ ಸದಸ್ಯರು ಮತ್ತು ಎಲ್ಲ ರಹವಾಸಿಗಳು ಭಾಗವಸಿದ್ದರು.



# ಧರ್ಮಟ್ಟಿಯಲ್ಲಿ ಕುಟುಂಬ ಪರಿವರ್ತನೆ ಕಾರ್ಯಕ್ರಮ



**ಗೋಕಾಕ:** ಸಮೀಪದ ಧರ್ಮಟ್ಟಿ ಗ್ರಾಮದಲ್ಲಿ ಪ್ರಪ್ರಥಮ ಬಾರಿಗೆ ಕ್ರಿಶ್ಚಿಯನ್ ಧರ್ಮದ ಸಮೂಹ ಆಶ್ರಯದಲ್ಲಿ ಸುವಾರ್ತಾ ಕೂಟದ ಮೂಲಕ ಕುಟುಂಬ ಪರಿವರ್ತನೆ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಮೂಡಲಗಿ ಹಾಗೂ ಗೋಕಾಕ ತಾಲೂಕಿನ ಘನ ಸೇವಕರು ಕಾರ್ಯಕ್ರಮಕ್ಕೆ ಚಾಲನೆಯನ್ನು ಕೊಡಲಾಯಿತು.

ಕಾರ್ಯಕ್ರಮದ ಕೇಂದ್ರ ಬಿಂದು ಮೈಸೂರಿನ ದೈವ ಸಂದೇಶಕ ರೆವ್.ಜಿ ಆರ್ ನಾಗರಾಜ್ 'ಕುಟುಂಬ ಪರಿವರ್ತನೆ'ಯ ಕುರಿತು ಸಂದೇಶವನ್ನು ನೀಡಿದರು ಕಾರ್ಯಕ್ರಮದಲ್ಲಿ ಧರ್ಮಟ್ಟಿ ಗ್ರಾಮದ ಹಿರಿಯರಿಗೆ ಹಾಗೂ ಸರ್ವ ಸದಸ್ಯರಿಗೆ ಶಾಲು ಹಾಗೂ ಮಾಲಾರ್ಪಣೆ ಮಾಡುವುದರ ಮೂಲಕ ಸನ್ಮಾನಿಸಲಾಯಿತು ಜೊತೆಗೆ ಗೋಕಾಕ್ ತಾಲೂಕ್ ಹಾಗೂ ಮೂಡಲಗಿ ತಾಲೂಕಿನ ಸಭಾ ಪಾಲಕರನ್ನು ಸನ್ಮಾನಿಸಲಾಯಿತು.

ಆರಾಧನೆ ಕಾರ್ಯಕ್ರಮಕ್ಕೆ ರೆವೆ. ಎಭಿನೇಜರ್ ಕರಬನ್ನವರ್ ಕ್ರೈಸ್ತ ಸಮುದಾಯ ಟ್ರಸ್ಟ್ ಗೌರವಾಧ್ಯಕ್ಷರು ಪ್ರಾರ್ಥನೆ ನಡೆಸಿಕೊಟ್ಟರು ಆರಾಧನೆಯನ್ನು ಪಾಸ್ಟರ್ ಚಂದ್ರಶೇಖರ್ ಹಾಗೂ ತಂಡದವರು ನಡೆಸಿಕೊಟ್ಟರು ತದನಂತರ ಕಾಣಿಕೆಗಾಗಿ ಕ್ರೈಸ್ತ ಸಮುದಾಯ ಟ್ರಸ್ಟ್ ಗೋಕಾಕ್ ಉಪಾಧ್ಯಕ್ಷರಾದ ಪಾಸ್ಟರ್.ಪಾಲ್ ರವರು ಪ್ರಾರ್ಥನೆ ನಡೆಸಿಕೊಟ್ಟರು ಹಾಗೂ ವೇದಿಕೆಯ ಮೇಲೆ ಘನ ಸೇವಕರು ಪಾಸ್ಟರ್ ಚಂದ್ರು ಹೊಸಮನಿ, ರೆವ್. ಜಗದೀಶ್ ಮಂಡಿ ಕ್ರೈಸ್ತ ಸಮುದಾಯ ಟ್ರಸ್ಟ್ ಗೋಕಾಕ್ ಅಧ್ಯಕ್ಷರು, ಫಾಸ್ಟರ್ ಅಮರ್ ಅವರಾದಿ ಸುಭಾಷ್ ದವಳೇಶ್ವರ್ ಮಾಸ್ಟರ್ ಯಮನಪ್ಪ ಜೋಡಟ್ಟಿ ಮುಂತಾದವರು ಉಪಸ್ಥಿತರಿದ್ದರು.

ಪ್ರಾರಂಭದಲ್ಲಿ ಸ್ಥಳೀಯ ಸಭಾ ಪಾಲಕರಾದ ಪಾಸ್ಟರ್ ಮಾರುತಿ ಹಣಮಣ್ಣವರ್ ಪ್ರಾರ್ಥನೆ ನಡೆಸಿಕೊಟ್ಟರು. ಪಿಯು ಕಾಲೇಜಿನ ಉಪನ್ಯಾಸಕ ಎಸ್ ಎಲ್ ಸಿಡ್ಲಪ್‌ಗೋಳ ನಿರೂಪಿಸಿದರು. ರೆವ. ಎಭಿನೇಜರ್ ಕರಬನ್ನವರ ವಂದಿಸಿದರು.

ಮಾದಕ ವಸ್ತುಗಳಗಳಿಂದಾಗುವ ದುಷ್ಪರಿಣಾಮಗಳ ಕುರಿತು ಅರಿವು ಕಾರ್ಯಕ್ರಮದಲ್ಲಿ ಹನಮಂತ ಭಜಂತ್ರಿ ಕರೆ

# ನಶಾಮುಕ್ತ ಆರೋಗ್ಯಕರ ಸಮಾಜ ಕಟ್ಟೋಣ

**ಬಾಗಲಕೋಟೆ:** ದೇಶದ ಮತ್ತು ನಾಡಿನ ಸಂಪತ್ತು ಯುವಕರು, ನಮ್ಮ ಯುವಸಮೂಹವು ಮಾದಕ ವಸ್ತುಗಳ ಬಳಕೆಯಿಂದ ದೂರವಿರಬೇಕು ಇದರಿಂದ ನಶಾಮುಕ್ತ ಆರೋಗ್ಯಕರ ದೇಶ, ನಾಡು, ಸಮಾಜ ಕಟ್ಟಲು ಸಾಧ್ಯವಿದೆ ಎಂದು ಬಾಗಲಕೋಟೆ ಅಬಕಾರಿ ಇಲಾಖೆ ಉಪ ಆಯುಕ್ತರಾದ ಹನಮಂತ ಭಜಂತ್ರಿ ಅವರು ಹೇಳಿದರು.



ಅವರು ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಅಬಕಾರಿ ಉಪ ಆಯುಕ್ತ ಕಛೇರಿ ಬಾಗಲಕೋಟೆ ಹಾಗೂ ಕಾಲೇಜಿನ ಐಕ್ಯೂಎಸಿ, ರಾಷ್ಟ್ರೀಯ ಸೇವಾ ಯೋಜನೆ ಘಟಕಗಳ ಸಹಯೋಗದಲ್ಲಿ ಸೋಮವಾರ ನಡೆದ ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ಅರಿವು ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಮುಂದುವರೆದು ಮಾತನಾಡಿ ಮಾದಕ ವಸ್ತುಗಳು ದೇಶದ ಮತ್ತು ನಾಡಿನ ಅಭಿವೃದ್ಧಿಗೆ ಮಾರಕವಾಗಿದ್ದು, ಮಾದಕ ವಸ್ತುಗಳ ಮಾರಾಟ ಮಾಡುವವರನ್ನು ಹಾಗೂ ಮಾದಕ ವ್ಯಸನಿಗಳನ್ನು ಗುರುತಿಸಿ, ತಡೆಗಟ್ಟುವುದು ಪ್ರತಿಯೊಬ್ಬ ನಾಗರಿಕರ ಜವಾಬ್ದಾರಿಯಾಗಿದೆ. ಯುವಕರು ಮದ್ಯಪಾನ, ಮಾದಕರ ವಸ್ತುಗಳ ಚಟುವಟಿಕೆಗಳಿಂದ ದೂರವಿದ್ದು ಸ್ವಾಸ್ಥ್ಯ ಸಮಾಜವನ್ನು ಕಟ್ಟಲು ಕಂಕಣಬದ್ಧವಾಗಬೇಕು ಎಂದು ಹೇಳಿದರು. ಬಾಗಲಕೋಟೆ ಅಬಕಾರಿ ಇಲಾಖೆಯ ಉಪ ಅಧೀಕ್ಷಕರಾದ ಅನಿಲಕುಮಾರ ನಂದೇಶ್ವರ, ಅಬಕಾರಿ ನಿರೀಕ್ಷಕರಾದ ಮಂಜುನಾಥ ಹಿರೆನಾಯ್ಕರ ಅವರು ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ಮಾಹಿತಿ ನೀಡಿದರು.

ಪ್ರಾಂಶುಪಾಲರಾದ ಡಾ.ಅರುಣಕುಮಾರ ಗಾಳಿ ಅವರು ಪ್ರತಿಜ್ಞಾ ವಿಧಿ ಬೋಧಿಸಿ ಮಾತನಾಡಿ, ಮದ್ಯಪಾನ, ಗಾಂಜಾ, ಅಫೀಮು, ತಂಬಾಕುಗಳಂತಹ ಮಾದಕ ವಸ್ತುಗಳಿಂದ ಮುಕ್ತರಾಗಿ ವ್ಯಸನ ಮುಕ್ತಗೊಳಿಸುವ, ಸ್ವಸ್ಥ ಮತ್ತು ಜವಾಬ್ದಾರಿಯುತ ಸಮಾಜಕ್ಕಾಗಿ ಹಾಗೂ ಭವ್ಯ ಭಾರತ ಕಟ್ಟುವದಕ್ಕಾಗಿ ಅಬಕಾರಿ ಇಲಾಖೆಯೊಂದಿಗೆ ಯುವ ಸಮೂಹವು ಕೈಜೋಡಿಸಿದಾಗ ಸದೃಢ ಭಾರತ, ನಾಡು ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ ಎಂದರು.

ಕಾಲೇಜಿನ ಐಕ್ಯೂಎಸಿ ಸಂಚಾಲಕರಾದ ಡಾ.ಬಸವರಾಜ ಬೀಳಗಿ, ಎನ್.ಎಸ್.ಎಸ್ ಘಟಕದ ಸಹ ಸಂಯೋಜನಾಧಿಕಾರಿ ಪ್ರೊ.ಸಂಪತ್ತ ಲಮಾಣಿ, ಡಾ.ಚಂದ್ರಶೇಖರ ಕಾಳನ್ನವರ ಸೇರಿದಂತೆ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಕಾಲೇಜಿನ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಸ್ಮರಣಶಕ್ತಿ ದುರ್ಬಲಗೊಳ್ಳುವ ರೋಗದ ಬಗ್ಗೆ ಜಾಗೃತಿ ಅವಶ್ಯ

**ವಿಜಯಪುರ:** ಸ್ಮರಣಶಕ್ತಿ ದುರ್ಬಲಗೊಳ್ಳುವ ಅಲ್ಜೈಮರ್ಸ್, ಡಿಮೆನ್ಷಿಯ ರೋಗದ ಪ್ರಮಾಣವು ಭಾರತದಲ್ಲಿ ಮಾತ್ರವಲ್ಲದೆ ವಿಶ್ವದಾದ್ಯಂತ ವೇಗವಾಗಿ ಹೆಚ್ಚುತ್ತಿದ್ದು, ಅಲ್ಜೈಮರ್ಸ್, ಡಿಮೆನ್ಷಿಯ ಕಾಯಿಲೆ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಸಂಪತ್ ಗುಣಾರಿ ಅವರು ಹೇಳಿದರು.




ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಇತ್ತೀಚೆಗೆ ಜಿಲ್ಲಾಸ್ಪತ್ರೆ ಆವರಣದ ಸರ್ಕಾರಿ ನರ್ಸಿಂಗ್ ಕಾಲೇಜಿನಲ್ಲಿ ಆಯೋಜಿಸಿದ ವಿಶ್ವ ಅಲ್ಜೈಮರ್ಸ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಅಲ್ಜೈಮರ್ಸ, ಡಿಮೆನ್ಷಿಯ ಖಾಯಿಲೆಯಿಂದ ವಿಶ್ವದಲ್ಲಿ 55 ಮಿಲಿಯನ್ ಜನ ಬಳಲುತ್ತಿದ್ದಾರೆ. ಸಮೀಕ್ಷೆ ಪ್ರಕಾರ 2030ರ ವರೆಗೆ 78 ಮಿಲಿಯನ್ ಹಾಗೂ 2050ರ ಅಂತ್ಯಕ್ಕೆ 139 ಮಿಲಿಯನ್ ಈ ಕಾಯಿಲೆಗೆ ಜನರು ಒಳಗಾಗಬಹುದಾಗಿದೆ ಎಂದು ಡಿಮೆನ್ಷಿಯ(ಅಲ್ಜೈಮರ್ಸ,) ನಿಯಂತ್ರಣ ಮತ್ತು ತಡೆಗಟ್ಟುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಈ ಕಾಯಿಲೆಯ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ಮನೋರೋಗ ತಜ್ಞರಾದ ಡಾ. ನಾಗರಾಜ ಎಚ್ ಮಾತನಾಡಿ ಡಿಮೆನ್ಷಿಯ ಕಾಯಿಲೆಯೂ ಮೆದುಳಿಗೆ ಸಂಬಂಧಿಸಿದ್ದಾಗಿದ್ದು, ಮೆದುಳಿನ ನರತಂತು ರಾಸಾಯನಿಕ ದ್ರವದಲ್ಲಿ ಆಗುವಂತಹ ವ್ಯತ್ಯಾಸಗಳಿಂದ ಬರುವಂತರೋಗವಾಗಿದೆ. ಇದು ವಯೋಸಹಜ ಕಾಯಿಲೆ ಆಗಿದ್ದು, ತಲೆಗೆ ಪೆಟ್ಟಾಗುವುದು, ಧೂಮಪಾನ ಹಾಗೂ ಮದ್ಯವ್ಯಸನ, ಬಹುಕಾಲ ಅನಾರೋಗ್ಯದಿಂದ ಬಳಲುತ್ತಿರುವುದು ಇತ್ಯಾದಿ ಕಾರಣಗಳಿಂದ ಬರುತ್ತದೆ. ಸೂಕ್ತ ಚಿಕಿತ್ಸೆ ಪಡೆದುಕೊಳ್ಳುವುದರ ಮೂಲಕ ಈ ಕಾಯಿಲೆಯಿಂದ ಗುಣಮುಖವಾಗಬಹುದು ಎಂದು ಅವರು ಹೇಳಿದರು. ಮನೋರೋಗ ತಜ್ಞರಾದ ಡಾ.ಮಂಜುನಾಥ ಮಸಳಿ ಅವರು ಮಾತನಾಡಿ, ಎಲ್ಲಾ ರೀತಿಯ ಮಾನಸಿಕ ರೋಗಗಳಿಗೆ ಸಂಬಂಧಿಸಿದಂತೆ ವಿಶೇಷವಾಗಿ ಆಲ್ಜೈಮರ್ಸ (ಡಿಮೆನ್ಷಿಯ) ಕಾಯಿಲೆ ಬಗ್ಗೆ ಹಾಗೂ ಮೆದುಳು ಆರೋಗ್ಯದ ಬಗ್ಗೆ ಟೆಲಿ–ಮನಸ ಉಚಿತ ಸಹಾಯವಾಣಿ ಸಂಖ್ಯೆ:14416ಗೆ ಕರೆಮಾಡಿ ಸಮಸ್ಯೆಗಳಿಗೆ ಪರಿಹಾರ ಪಡೆದುಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸರ್ಕಾರಿ ಶುಶ್ರೂಷ ಶಾಲೆಯ ಪ್ರಾಂಶುಪಾಲರಾದ ಡಾ. ಸರಸ್ವತಿ ಸಜ್ಜನ, ಸರ್ಕಾರಿ ಶುಶ್ರೂಷ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಹಣಮಂತಪ್ಪ ಹತ್ತರಕಿಹಾಳ, ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ಜಿಲ್ಲಾ ಆಸ್ಪತ್ರೆಯ ವೈದ್ಯರಾದ ಡಾ.ಓಂಕಾರ ತದ್ದೆವಾಡಿ, ಜಿಲ್ಲಾ ಮೇಲ್ವಿಚಾರಣಾಧಿಕಾರಿಯಾದ ಮೋತಿಲಾಲ ಲಮಾಣಿ, ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ಜಿಲ್ಲಾ ಸಂಯೋಜಕರು ಆನಂದ ರಾಠೋಡ ಸೇರಿದಂತೆ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ಸಿಬ್ಬಂದಿ ವರ್ಗದವರು ಸರ್ಕಾರಿ ನರ್ಸಿಂಗ ಕಾಲೇಜಿನ ಬೋಧಕ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ನೋವುಗಳನ್ನು ಮೀರಿ ಬೆಳೆದವರು ದಿ. ಭೈರಪ್ಪನವರು

**ಕೊಪ್ಪಳ:** ಜೀವನದ ಎಲ್ಲಾ ನೋವುಗಳನ್ನು ಮೀರಿ ಬೆಳೆದವರು ದಿ. ಪ್ರೊ ಎಸ್. ಎಲ್. ಭೈರಪ್ಪನವರು. ಅವರ ಬದುಕು ಹಾಸಿಗೆ ಆಗಿರಲಿಲ್ಲ ಮುಳ್ಳಿನ ಹಾಸಿಗೆಯಾಗಿತ್ತು. ಅದನ್ನು ಮೀರಿ ಬಡತನವನ್ನು ಬಂಡವಾಳವಾಹಿಸಿಕೊಂಡು ಜೀವನಾನುಭವ ಮತ್ತು ಓದಿನ ಮೂಲಕ ನಾಡಿನ ಆ ಶ್ರೇಷ್ಠ ಕಾದಂಬರಿಕಾರಾದರು ಎಂದು ನಿವೃತ್ತ ಪ್ರಾಚಾರ್ಯರು ಹಾಗೂ ಹಿರಿಯ ಸಾಹಿತಿಗಳಾದ ಡಾ. ವಿ.ಬಿ ಬಡಿಗೇರ್ ಅವರು ಹೇಳಿದರು.



ನಗರ ಶ್ರೀ ಗವಿಸಿದ್ಧೇಶ್ವರ ಪದವಿ ಕಾಲೇಜಿನಲ್ಲಿ ಕನ್ನಡ ವಿಭಾಗದಿಂದ ಹಮ್ಮಿಕೊಂಡ ಹಿರಿಯ ಸಾಹಿತಿ, ನಾಡೋಜ, ಪದ್ಮಭೂಷಣ, ದಿ. ಪ್ರೊ ಎಸ್ ಎಲ್ ಭೈರಪ್ಪನವರಿಗೆ ನುಡಿ ನಮನ ಹಾಗೂ ಅವರ ಕೃತಿಗಳ ಅವಲೋಕನ ಕಾರ್ಯಕ್ರಮದಲ್ಲಿ ಭಾಗಿಯಾಗಿ ನುಡಿ ನಮನವನ್ನು ಸಲ್ಲಿಸಿ, ಮಾತನಾಡಿಸಿದ ಅವರು ಭೈರಪ್ಪನವರು ಜೀವನದ ಜೊತೆಗೆ ಗ್ರಂಥಾಲಯವನ್ನು ಪ್ರೀತಿಸಿದವರು.

ಮನೆಯಲ್ಲಿನ ಬಡತನವನ್ನು ಬಂಡವಾಳವಾಗಿಸಿಕೊಂಡು ಶಿಕ್ಷಣ ಪಡೆದರು. ಅಂತಹ ಸಂದಿಗ್ಧ ಪರಿಸ್ಥೀಸಿಯಲ್ಲಿ ಧೃತಿಗೆಡದೆ ಅಧ್ಯಯನವನ್ನು ಮಾಡಿ ದೇಶದ ಶ್ರೇಷ್ಠ ಕಾದಂಬರಕಾರರು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರು ಡಾ. ಚನ್ನಬಸವ, ಕನ್ನಡ ವಿಭಾಗದ ಮುಖ್ಯಸ್ಥ ಡಾ. ನಾಗರಾಜ್ ದಂಡೋತಿ ಪ್ರಾಧ್ಯಾಪಕರಾದ ಡಾ. ಸುಂದರ್ ಮೇಟಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಡಾ ಸುಮಲತಾ ಬಿ. ಎಂ. ಸ್ವಾಗತಿಸಿದರು, ಡಾ. ಶಿವಪ್ಪ ಜಮಾಪುರ ನಿರೂಪಣೆ ಮಾಡಿದರು, ಡಾ. ನಾಗೇಶ್ ವಾಯ್ ಅವರು ವಂದಿಸಿದರು.

# ಹಾತಲಗೇರಿ ಗ್ರಾಮದಲ್ಲಿ ಮಾಹಿತಿ ಕಾರ್ಯಾಗಾರ

**ಗದಗ:** ವಿಶ್ವ ಹೃದಯ ದಿನಾಚರಣೆಯ ಅಂಗವಾಗಿ ನಗರದ ಸ್ಮೈಲ್ ಫೌಂಡೇಶನ್ ಫಿಲಿಪ್ಸ್ ಸಹಕಾರ ಸಂಸ್ಥೆ ವತಿಯಿಂದ ಹಾತಲಗೇರಿ ಗ್ರಾಮದಲ್ಲಿ ಮಾಹಿತಿ ಕಾರ್ಯಾಗಾರ ಹಾಗೂ ಆರೋಗ್ಯ ತಪಾಸಣೆ ಹಮ್ಮಿಕೊಳ್ಳಲಾಗಿತ್ತು ಈ ಕಾರ್ಯಾಗಾರದಲ್ಲಿ ಜನರಿಗೆ ಹೃದಯ ಆರೋಗ್ಯದ ಕುರಿತು ಮಾಹಿತಿಯನ್ನು, ಆಹಾರದ ಕ್ರಮದ ಬಗ್ಗೆ, ದೈನಂದಿನ ಜೀವನದ ಕ್ರಮದ ಕುರಿತು ವಿಷಯ ತಿಳಿಸಲಾಯಿತು. ಈ ಕಾರ್ಯಾಗಾರದಲ್ಲಿ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು ಮತ್ತು ಸ್ಮೈಲ್ ಫೌಂಡೇಶನ್ ಸಂಸ್ಥೆಯ ಸಿಬ್ಬಂದಿಗಳು ಕಾರ್ಯಾಗಾರವನ್ನು ನಡೆಸಿದರು.




BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :201, Postal Reg No. PMG/KA/NK/BM/135/25-27 / POST AT Vantamury Colony Post Office